ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 10 2013

# ಕನ್ನಡ ಭಾರತಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ನೊಂದವರ ನೈಜ ಕನ್ನಡಿ

ಸಂಪುಟ : 12 ಸಂಚಿಕೆ : 216

19–2–2025 ಬುಧವಾರ

₹3 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 12 ISSUE : 216

### ಮೈಸೂರು: ಆನ್ ಲೈನ್ ಬೆಟ್ಟಿಂಗ್ ಚಟಕ್ಕೆ ಮೂರು ಬಲಿ

## ಒಂದೇ ಕುಟುಂಬದ ಮೂವರು ಆತ್ಮಹತ್ಯೆ



**ಮೈಸೂರು:** ಹಣಕಾಸಿನ ವಿಚಾರದಲ್ಲಿ ಉಂಟಾದ ಕೌಟುಂಬಿಕ ಸಮಸ್ಯೆಯಿಂದ ಒಂದೇ ಕುಟುಂಬದ ಮೂವರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ಮೈಸೂರಿನ ಸಮೀಪದ ಹಂಚ್ಯಾ ಗ್ರಾಮದ ಬಳಿ ಈ ಘಟನೆ ನಡೆದಿದೆ. ಮೃತರನ್ನು ಜೋಶ್ ಆಂಥೋನಿ, ಅವರ ಸಹೋದರ ಜೋಬಿ ಆಂಥೋನಿ ಮತ್ತು ಪತ್ನಿ ಶರ್ಮಿಳಾ ಅಲಿಯಾಸ್ ಸ್ವಾತಿ ಎಂದು ಗುರುತಿಸಲಾಗಿದೆ.

ಪೊಲೀಸರ ಪ್ರಕಾರ, ಜೋಬಿ ಆಂಥೋನಿ ಮತ್ತು ಶರ್ಮಿಳಾ ಐಪಿಎಲ್ ಕ್ರಿಕೆಟ್ ಪಂದ್ಯಗಳು ಮತ್ತು ಆನ್‌ಲೈನ್ ಗೇಮಿಂಗ್‌ನಲ್ಲಿ ಬೆಟ್ಟಿಂಗ್ ಮಾಡುವ ಮೂಲಕ ಅಪಾರ ಪ್ರಮಾಣದ ಹಣವನ್ನು ಕಳೆದುಕೊಂಡಿದ್ದರು.

ಹಣವನ್ನು ಸಾಲವಾಗಿ ನೀಡಿದ್ದವರು ವಾಪಸ್ ಹಣ ನೀಡುವಂತೆ ಒತ್ತಾಯಿಸುತ್ತಿದ್ದರು. ಹೀಗಾಗಿ ತೀವ್ರ ಒತ್ತಡದಲ್ಲಿದ್ದ ಜೋಶ್ ಆಂಥೋನಿ ಫೆಬ್ರವರಿ 17 (ಸೋಮವಾರ) ರಂದು ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದರು.

ಸಾಯುವ ಮೊದಲು, ಜೋಬಿ ಆಂಥೋನಿ ಮತ್ತು ಶರ್ಮಿಳಾ ತಮ್ಮ ಸಹೋದರಿಯ ಹೆಸರನ್ನು ಬಳಸಿಕೊಂಡು ಸಾಲ ಪಡೆದಿದ್ದಾರೆ ಎಂದು ಆರೋಪಿಸಿ ವೀಡಿಯೊವನ್ನು ರೆಕಾರ್ಡ್ ಮಾಡಿದ್ದಾರೆ.

ನನ್ನ ಸಹೋದರಿಗೆ ಗಂಡ ಇಲ್ಲ, ಮತ್ತು ಜೋಬಿ ಮತ್ತು ಅವನ ಹೆಂಡತಿ ನನ್ನ ಸಹೋದರಿಗೆ ವಂಚನೆ ಮಾಡಿದ್ದಾರೆ. ನನ್ನ ಸಾವಿಗೆ ನನ್ನ ಸಹೋದರ ಜೋಬಿ ಆಂಥೋನಿ ಮತ್ತು ಅವನ ಹೆಂಡತಿ ಶರ್ಮಿಳಾ ಕಾರಣ. ಅವರಿಗೆ ಶಿಕ್ಷೆಯಾಗಬೇಕು ಎಂದು ಜೋಶ್ ವೀಡಿಯೊದಲ್ಲಿ ಹೇಳಿದ್ದಾರೆ.

### ಕೊಟ್ಟಿಗೆಯಲ್ಲಿ ಕಟ್ಟಿದ್ದ ಕರುವಿನ ಮೇಲೆ ಮಚ್ಚಿನಿಂದ ಭೀಕರ ದಾಳಿ;

## ರಕ್ತದ ಮಡುವಿನಲ್ಲಿ ನರಳಾಟ

**ಹಾಸನ:** ರಾಜ್ಯದಲ್ಲಿ ಹಸುಗಳ ಮೇಲಿನ ದಾಳಿ ಪ್ರಕರಣಗಳು ವರದಿಯಾಗುತ್ತಲೇ ಇವೆ. ಬೆಂಗಳೂರು, ಉತ್ತರಕನ್ನಡ ಆಯ್ತು ಇದೀಗ ಹಾಸನದಲ್ಲಿ ಸಕಲೇಶಪುರ ತಾಲ್ಲೂಕಿನ ಅರೆ–ಕೆರೆ ಗ್ರಾಮದಲ್ಲಿ ಕೊಟ್ಟಿಗೆಯಲ್ಲಿ ಕಟ್ಟಿದ್ದ ಕರುವಿನ ಮೇಲೆ ದುಷ್ಕರ್ಮಿಗಳು ಮಚ್ಚಿನಿಂದ ಮನಬಂದಂತೆ ಕೊಚ್ಚಿದ್ದಾರೆ. ನವೀನ್ ಎಂಬುವವರಿಗೆ ಸೇರಿದ ಕರುವಿನ ಮೇಲೆ ದುರುಳರು ಮಚ್ಚಿನಿಂದ ದಾಳಿ ಮಾಡಿದ್ದು ಗಂಭೀರವಾಗಿ ಗಾಯಗೊಂಡಿರುವ ಕರು ರಕ್ತದ ಮಡುವಿನಲ್ಲಿ ನರಳಾಡುತ್ತಿದೆ. ಸದ್ಯ ಕರುವಿಗೆ ವೈದ್ಯರು ಚಿಕಿತ್ಸೆ ನೀಡಿದ್ದಾರೆ. ಈ ಹಿಂದೆ ಬೆಂಗಳೂರಿನ ಚಾಮರಾಜಪೇಟೆಯಲ್ಲಿ ಮೂರು ಹಸುಗಳ ಕೆಚ್ಚಲು ಕೊಯ್ದಿದ್ದರು. ನಂತರ ಉತ್ತರ ಕನ್ನಡ ಜಿಲ್ಲೆಯ ಹೊನ್ನಾವರ ತಾಲೂಕಿನಲ್ಲಿ ಗರ್ಭಿಣಿ ಹಸುವಿನ ತಲೆ–ಕಾಲು ಕಡಿದು, ಹೊಟ್ಟೆ ಸೀಳಿ ಕರುವನ್ನೂ ಹತ್ಯೆ ಮಾಡಿ ಮಾಂಸವನ್ನು ಕೊಂಡೊಯ್ದಿದ್ದರು.

### ದಲಿತ ಮುಖಂಡರೊಂದಿಗೆ ಸಿದ್ದರಾಮಯ್ಯ ಬಜೆಟ್ ಪೂರ್ವ ಸಭೆ

## ಬೇಡಿಕೆ ಪರಿಶೀಲಿಸುವ ಭರವಸೆ

**ಬೆಂಗಳೂರು:** ಮುಂದಿನ ತಿಂಗಳು ನಡೆಯಲಿರುವ ಬಜೆಟ್ ಅಧಿವೇಶನದಲ್ಲಿ 2025–26ನೇ ಸಾಲಿನ ರಾಜ್ಯದ ಆಯವ್ಯಯ ಮಂಡಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ತಯಾರಿ ಮುಂದುವರೆದಿದೆ.

ನಿನ್ನೆ ರಾಜ್ಯ ರೈತ ಸಂಘಗಳು ಹಾಗೂ ಮುಖಂಡರುಗಳೊಂದಿಗೆ ಸಭೆ ನಡೆಸಿ ಬೇಡಿಕೆಗಳು, ಸಲಹೆಗಳನ್ನು ಆಲಿಸಿದ್ದ ಮುಖ್ಯಮಂತ್ರಿ ಇಂದು ದಲಿತ ಮುಖಂಡರೊಂದಿಗೆ ಬಜೆಟ್ ಪೂರ್ವ ಸಭೆ ನಡೆಸಿದರು.

ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ಸಚಿವರಾದ ಡಾ. ಹೆಚ್. ಸಿ. ಮಹಾದೇವಪ್ಪ, ಮುನಿಯಪ್ಪ, ಆರ್. ಬಿ. ತಿಮ್ಮಾಪುರ್, ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರ ಬಸವರಾಜ ರಾಯ–ರೆಡ್ಡಿ ಮತ್ತಿತರರು ಉಪಸ್ಥಿತರಿದ್ದರು.



ಈ ಸಂದರ್ಭದಲ್ಲಿ ಮಾತನಾಡಿದ ಮುಖ್ಯಮಂತ್ರಿ, ದಲಿತ ಸಮುದಾಯದ ಗುತ್ತಿಗೆದಾರರಿಗೆ ಒಂದು ಕೋಟಿ ರೂಪಾಯಿ ವರೆಗಿನ ಗುತ್ತಿಗೆಯಲ್ಲಿ ಮೀಸಲಾತಿ ಜಾರಿಗೆ ತಂದಿದ್ದು, ಇದನ್ನು 2 ಕೋಟಿಗೆ ವಿಸ್ತರಿಸಬೇಕು ಎನ್ನುವ ಬೇಡಿಕೆ ಬಗ್ಗೆಯೂ ಪರಿಶೀಲಿಸುವುದಾಗಿ ತಿಳಿಸಿದರು.

ಶೋಷಿತರ, ದಲಿತ ಸಮಯದಾಯಗಳ ಬೇಡಿಕೆಗಳನ್ನು ನಾನು ಮುಖ್ಯಮಂತ್ರಿ ಆದ ಬಳಿಕ ನಿರಂತರವಾಗಿ ಈಡೇರಿಸುತ್ತಲೇ ಇದ್ದೇನೆ. ದಲಿತರ ಜನಸಂಖ್ಯೆಗೆ ಅನುಗುಣವಾಗಿ ಬಜೆಟ್ ನ ಅಭಿವೃದ್ಧಿ ಹಣದಲ್ಲಿ ಶೇ. 24 ರಷ್ಟು ಹಣ ಮೀಸಲಾಗಿಡುವ ಕಾಯ್ದೆ ಜಾರಿ ಮಾಡಿದ್ದು ನಮ್ಮ ಸರ್ಕಾರ. ಈ ಕಾಯ್ದೆಯನ್ನು ಕೇಂದ್ರದ ಬಿಜೆಪಿ ಸರ್ಕಾರವಾಗಲಿ, ಬಿಜೆಪಿ ಅಧಿಕಾರದಲ್ಲಿರುವ ರಾಜ್ಯಗಳಲ್ಲೂ ಜಾರಿ ಮಾಡಿಲ್ಲ ಎಂದರು.

ಬಡ್ತಿಯಲ್ಲಿ ಮೀಸಲಾತಿ, ಪಿಟಿಸಿಎಲ್ ಕಾಯ್ದೆ ಮಾಡಿದ್ದು, ಹೊಸದಾಗಿ ಕೈಗಾರಿಕೆ ಆರಂಭಿಸುವವರಿಗೆ ಸಾಕಷ್ಟು ಸವಲತ್ತುಗಳನ್ನು ಕಲ್ಪಿಸಿದ್ದೇವೆ. ಇಡೀ ದೇಶಕ್ಕೆ ಮಾದರಿಯಾದ ಕಾಯ್ದೆ, ಕಾನೂನು, ನಿಯಮಗಳನ್ನು ಮಾಡಿರುವ ದಾಖಲೆ ನಮ್ಮ ಸರ್ಕಾರದ್ದಾಗಿದೆ ಎಂದು ಮುಖ್ಯಮಂತ್ರಿ ತಿಳಿಸಿದರು.

ಮಾರ್ಚ್ 7ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ 2025 ಮತ್ತು 2026ನೇ ಸಾಲಿನ ಬಜೆಟ್ ಮಂಡಿಸಲಿದ್ದಾರೆ.

## ಫೆ. 20 ಕ್ಕೆ ಬೆಂಗಳೂರಿನಲ್ಲಿ ರಾಜ್ಯ ಸರ್ಕಾರಿ ನೌಕರರ ಪದಾಧಿಕಾರಿಗಳ ಸಮಾವೇಶ



**ದಾವಣಗೆರೆ:** ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದಿಂದ ಫೆಬ್ರವರಿ 20ರಂದು ಬೆಳಗ್ಗೆ 11:30ಕ್ಕೆ ಬೆಂಗಳೂರಿನ ತ್ರಿಪುರ ವಾಸಿನಿ ಅರಮನೆ ಆವರಣದಲ್ಲಿ ಸಂಘದ ಚುನಾಯಿತ ನಿರ್ದೇಶಕರು ಹಾಗೂ ಪದಾಧಿಕಾರಿಗಳ ಸಮಾವೇಶ ಮತ್ತು ಕಾರ್ಯಗಾರವನ್ನು ಹಮ್ಮಿಕೊಳ್ಳಲಾಗಿದೆ. ಬೆಂಗಳೂರು ರಾಜ್ಯ ಪರಿಷತ್ ಸದಸ್ಯರು ಜಿಲ್ಲಾ ಮತ್ತು ತಾಲೂಕು ಶಾಖೆಗಳ ನಿರ್ದೇಶಕರು ಪದಾಧಿಕಾರಿಗಳು ಭಾಗವಹಿಸಲಿದ್ದು ಸಮಾವೇಶವನ್ನು ಮಾನ್ಯ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರು ಉದ್ಘಾಟಿಸಲಿದ್ದು ಉಪಮುಖ್ಯಮಂತ್ರಿಗಳಾದ ಮಾನ್ಯ ಡಿ. ಕೆ.ಶಿವಕುಮಾರ್ ಮುಖ್ಯ ಅತಿಥಿಯಾಗಿ ಉಪಸ್ಥಿತರಿರುವರು ಅಧ್ಯಕ್ಷತೆಯನ್ನು ರಾಜ್ಯ ಅಧ್ಯಕ್ಷರಾದ ಶ್ರೀ ಸಿ. ಎಸ್. ಷಡಕ್ಷರಿ ಅವರು ವಯಸ್ಸಲ್ಲಿದ್ದು ಅಂದು ಬೆಳಗ್ಗೆ 10 ಗಂಟೆಗೆ ಲೋಕಾಯುಕ್ತ ನ್ಯಾಯಮೂರ್ತಿಗಳಾದ ಶ್ರೀ ಬಿ. ಎಸ್. ಪಾಟೀಲ್ ಅವರು ಆಡಳಿತದಲ್ಲಿ ದಕ್ಷತೆ,, ಪಾರದಕ್ಷತೆ,, ಪ್ರಾಮಾಣಿಕತೆ ಕುರಿತು ಉಪನ್ಯಾಸ ನೀಡಲಿದ್ದಾರೆ. ಸಾರ್ವಜನಿಕ ಸೇವೆಯಲ್ಲಿ ನೌಕರರ ಪಾತ್ರದ ಕುರಿತು ಸರ್ಕಾರದ ಮುಖ್ಯ ಕಾರ್ಯದರ್ಶಿ ಶ್ರೀಮತಿ. ಶಾಲಿನಿ ರಜನೀಶ್ ಅವರು ಉಪನ್ಯಾಸ ನೀಡಲಿದ್ದಾರೆ. ಮಾಹಿತಿ ಹಕ್ಕು ಅಧಿನಿಯಮ ಪರಿಹಾರ ಕುರಿತು ರಾಜ್ಯ ಮಾಹಿತಿ ಆಯೋಗ ಕಲಬುರ್ಗಿ ಪೀಠದ ಆಯುಕ್ತರಾದ ರವೀಂದ್ರನಾಥ್ ತಾಕಪ್ಪ ನವರು ಉಪನ್ಯಾಸ ನೀಡಲಿದ್ದಾರೆ ಹಾಗೂ ದಾವಣಗೆರೆ ಜಿಲ್ಲೆ ಮತ್ತು ತಾಲೂಕುಗಳಿಂದ 221 ಪದಾಧಿಕಾರಿಗಳು ನಿರ್ದೇಶಕರು ಹಾಗೂ ಇತರೆ ನೌಕರರು ಸಮಾವೇಶದಲ್ಲಿ ಭಾಗವಹಿಸಲಿದ್ದಾರೆ ಎಂದು ದಾವಣಗೆರೆ ಜಿಲ್ಲಾ ಅಧ್ಯಕ್ಷರಾದ ಶ್ರೀ ವೀರೇಶ್ ಎಸ್. ಒಡೆನಪುರ ತಿಳಿಸಿದ್ದಾರೆ.

## ಮೆಸ್ಕಾಂ ಜನಸಂಪರ್ಕ ಸಭೆ

**ಶಿವಮೊಗ್ಗ :** ಮೆಸ್ಕಾಂ ಶಿವಮೊಗ್ಗ ನಗರ ಉಪವಿಭಾಗ–2ರ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್‌ರವರ ಕಚೇರಿ, ನಗರ ಉಪವಿಭಾಗ–2, ಎನ್.ಟಿ.ರಸ್ತೆ, ನ್ಯೂಮಂಡ್ಲಿ, ಶಿವಮೊಗ್ಗ ಕಛೇರಿಯಲ್ಲಿ ಫೆ.21 ರಂದು ಬೆಳಿಗ್ಗೆ 11.00 ರಿಂದ ಮಧ್ಯಾಹ್ನ 01.00 ರವರೆಗೆ ಜನಸಂಪರ್ಕ ಸಭೆ ನಡೆಯಲಿದೆ.

ಈ ಸಭೆಯಲ್ಲಿ ಮೆಸ್ಕಾಂನ ಅಧಿಕಾರಿಗಳು ಭಾಗವಹಿಸಲ್ಲಿದ್ದು, ಸಂಬಂಧಪಟ್ಟ ಪ್ರದೇಶದ ಗ್ರಾಹಕರ ಅಹವಾಲುಗಳನ್ನು ಸ್ವೀಕರಿಸುವುದರಿಂದ ಈ ಅವಕಾಶವನ್ನು ಗ್ರಾಹಕರು ಸದುಪಯೋಗ ಪಡಿಸಿಕೊಳ್ಳುವಂತೆ ಮೆಸ್ಕಾಂ ಪ್ರಕಟಣೆ ತಿಳಿಸಿದೆ.

## ನೇರ ಸಂದರ್ಶನ

**ಚಿಕ್ಕಮಗಳೂರು: ಫೆ. 18:** ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಚಿಕ್ಕಮಗಳೂರು ಕಛೇರಿಯಲ್ಲಿ ಫೆಬ್ರವರಿ 21 ರಂದು ಬೆಳಿಗ್ಗೆ 10.30 ಗಂಟೆಗೆ ಖಾಸಗಿ ಕಂಪನಿಯಾದ ಯುತ್ ಪೊರ್ ಜಾಬ್ಸ್, ಬೆಂಗಳೂರು ಇವರು ತಮ್ಮಲ್ಲಿ ಖಾಲಿ ಇರುವ ಹುದ್ದೆಗಳಿಗೆ ನೇರ ಸಂದರ್ಶನವನ್ನು ಏರ್ಪಡಿಸಲಾಗಿದೆ.

ಉಚಿತ ಪ್ರವೇಶವಾಗಿದ್ದು, ಎಸ್‌ಎಸ್‌ಎಲ್‌ಸಿ, ಪಿಯುಸಿ, ಐಟಿಐ, ಡಿಪ್ಲೋಮಾ ಮತ್ತು ಯಾವುದೇ ಪದವಿ ವಿದ್ಯಾರ್ಹತೆ ಹೊಂದಿರುವ 18 ರಿಂದ 30 ವರ್ಷ ವಯೋಮಿತಿಯ ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳು ಭಾಗವಹಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ದೂರವಾಣಿ: 9945198500/ 08262–295538 ಗೆ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಉದ್ಯೋಗಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಾರವಾರ ನೌಕಾ ನೆಲೆಯ ಸೂಕ್ಷ್ಮ ಮಾಹಿತಿ ಪಾಕಿಸ್ತಾನಕ್ಕೆ ಸೋರಿಕೆ: ಇಬ್ಬರನ್ನು ಬಂಧಿಸಿದ ಎನ್ಐಎ

**ಕಾರವಾರ:** ಕಾರವಾರ ನೌಕಾ ನೆಲೆಯ ಕುರಿತಾದ ಸೂಕ್ಷ್ಮ ಮಾಹಿತಿಯನ್ನು ಪಾಕಿಸ್ತಾನಕ್ಕೆ ಸೋರಿಕೆ ಮಾಡಿದ ಪ್ರಕರಣ–ಕ್ಕೆ ಸಂಬಂಧಿಸಿದಂತೆ ರಾಷ್ಟ್ರೀಯ ತನಿಖಾ ಸಂಸ್ಥೆ (ಎನ್‌ಐಎ) ಅಧಿಕಾರಿಗಳು ಇಬ್ಬರು ವ್ಯಕ್ತಿಗಳನ್ನು ಬಂಧಿಸಿದ್ದಾರೆ ಎಂದು ಮೂಲಗಳು ಮಂಗಳವಾರ ದೃಢಪಡಿಸಿವೆ.

ಬಂಧಿತ ವ್ಯಕ್ತಿಗಳನ್ನು ಮುದುಗ ಗ್ರಾಮದ ನಿವಾಸಿ ವೇತನಾ ತಾಂಡೆಲ್ ಮತ್ತು ಹಲವಳ್ಳಿ ನಿವಾಸಿ ಅಕ್ಷಯ್ ನಾಯಕ್ ಎಂದು ಗುರುತಿಸಲಾಗಿದೆ. ಹೈದರಾಬಾದ್‌ನ ತಂಡವೊಂದು ಸೋಮವಾರ ಕಾರವಾರಕ್ಕೆ ಆಗಮಿಸಿ ಆರೋಪಿಗಳನ್ನು ವಶಕ್ಕೆ ಪಡೆದುಕೊಂಡಿತು.

## ಬಸವ ಜಯಂತಿ ಆರಂಭಿಸಿದ ಕೀರ್ತಿ ಹರ್ಡೇಕರ್ ಮಂಜಪ್ಪನವರಿಗೆ ಸಲ್ಲುತ್ತದೆ: ಬಸವಪ್ರಭು ಶ್ರೀ

**ದಾವಣಗೆರೆ:** ವಿಶ್ವಗುರು ಬಸವಣ್ಣನವರ ಹೆಸರು ಭಾರತಕ್ಕಷ್ಟೇ ಅಲ್ಲ. ಇಡೀ ವಿಶ್ವಕ್ಕೇ ಮುಟ್ಟಿದೆ. ಅದಕ್ಕೆ ಕಾರಣಕರ್ತರು ಎಂದರೆ ಹರ್ಡೇಕರ್ ಮಂಜಪ್ಪನವರು. ದಾವಣಗೆರೆಯ ವಿರಕ್ತಮಠದಲ್ಲಿ ಮೊಟ್ಟಮೊದಲ ಬಾರಿಗೆ ಬಸವ ಜಯಂತಿಯನ್ನು 1913ರಲ್ಲಿ ಪ್ರಾರಂಭ ಮಾಡಿದವರು. ಅಂದಿನಿಂದ ಪ್ರಾರಂಭವಾದ ಬಸವ ಜಯಂತಿಯನ್ನು ಇಂದು ಇಡೀ ವಿಶ್ವದಾದ್ಯಂತ ಆಚರಣೆ ಮಾಡಲಾಗುತ್ತಿದೆ ಎಂದು ವಿರಕ್ತಮಠದ ಡಾ. ಬಸವಪ್ರಭು ಸ್ವಾಮೀಜಿ ಹೇಳಿದರು.

ನಗರದ ಹೊಸ ಅಂಡರ್ ಬ್ರಿಡ್ಜ್ ಬಳಿ ಇರುವ ಶರಣ ಹರ್ಡೆಕರ್ ಮಂಜಪ್ಪನವರ ಪುತ್ಥಳಿ ಬಳಿ ಮಂಗಳವಾರ

ಬಸವ ಬಳಗ, ಜಾಗತಿಕ ಲಿಂಗಾಯತ ಮಹಾಸಭಾ, ಜಿಲ್ಲಾ ಶರಣ ಸಾಹಿತ್ಯ ಪರಿಷತ್, ಕದಳಿ ಮಹಿಳಾ ವೇದಿಕೆ, ವಿರಕ್ತಮಠ, ಬಸವ ಕಲಾಲೋಕದ ಸಹಯೋಗದಲ್ಲಿ ಆಯೋಜಿಸಿದ ಕರ್ನಾಟಕದ ಗಾಂಧಿ ಹರ್ಡೆಕರ್ ಮಂಜಪ್ಪನವರ 139ನೇ ಜಯಂತಿ ಕಾರ್ಯಕ್ರಮದಲ್ಲಿ ಪುತ್ಥಳಿಗೆ ಪುಷ್ಪಾರ್ಪಣೆ ಮಾಡಿ ಅವರು ಮಾತನಾಡಿದರು.



ಪ್ರತಿವರ್ಷ ಶರಣರ, ಮಹಾತ್ಮರ, ದಾರ್ಶನಿಕರ ಜಯಂತಿಯನ್ನು ನಮ್ಮ ಸರ್ಕಾರ ಆಚರಣೆ ಮಾಡುತ್ತಿದೆ, ಅದೇ ರೀತಿಯಾಗಿ ಕರ್ನಾಟಕದ ಗಾಂಧಿ, ಸ್ವಾತಂತ್ರ್ಯ ಹೋರಾಟಗಾರರಾದ, ದಾವಣಗೆರೆಯ ಮೊದಲ ಪತ್ರಕರ್ತರಾಗಿ, ಸರಳ ಜೀವನ ನಡೆಸಿದಂತಹ ಹರ್ಡೇಕರ್ ಮಂಜಪ್ಪನವರ ಜಯಂತಿಯನ್ನು ಸರ್ಕಾರದಿಂದ ಆಚರಣೆ ಮಾಡಬೇಕು ಎಂಬ ಹಕ್ಕೊತ್ತಾಯವನ್ನು ನಾವೆಲ್ಲರೂ ನಿಯೋಗದ ಮುಖಾಂತರ ಮುಖ್ಯಮಂತಿಗಳಿಗೆ ಮನವಿ ಮಾಡಿ ಇಡೀ ರಾಜ್ಯಾದ್ಯಂತ ಆಚರಣೆ ಮಾಡುವಂತಾಗಲು ಪ್ರಯತ್ನ ಮಾಡೋಣ ಎಂದರು.

ಕರ್ನಾಟಕದ ಗಾಂಧಿ ಎಂದೇ ಕರೆಸಿಕೊಂಡಿದ್ದ ಹರ್ಡೇಕರ್ ಮಂಜಪ್ಪನವರ ಜೀವನದ ಆದರ್ಶಗಳು, ವಿಚಾರಧಾರೆಗಳನ್ನು ಮಕ್ಕಳಿಗೆ, ಯುವ ಜನತೆಗೆ ತಿಳಿಸುವ ನಿಟ್ಟಿನಲ್ಲಿ ಅವರ ಕುರಿತು ಪಠ್ಯಗಳಲ್ಲಿ ಅಳವಡಿಸಬೇಕು. ಈ ದೇಶದ ಶಕ್ತಿ ಯುವಕರೇ ಆಗಿರುವುದರಿಂದ ಅವರಿಂದಲೇ ಆಚಾರ ವಿಚಾರ ಉಳಿಯುವಂತಹದ್ದು. ಅವರು ದುಶ್ಚಟ, ದುರ್ಗುಣಗಳನ್ನು ಬಿಡಬೇಕು ಎಂದು ಪರಿವರ್ತನೆ ಮಾಡಿದರು. ಜೊತೆಗೆ ಬಸವ ತತ್ವ, ಗಾಂಧಿ ತತ್ವ ತಿಳಿಸಿದರು.

ಈ ಸಂದರ್ಭದಲ್ಲಿ ಬಾಗಲಕೋಟೆಯ ಮಹಾಮಲ್ಲಪ್ಪ ಪಟ್ಟಣಶೆಟ್ಟಿ ಹರ್ಡೇಕರ್ ಮಂಜಪ್ಪನವರ ಬಗ್ಗೆ ಮಾತನಾಡಿದರು. ಬಸವ ಬಳಗದ ಹುಚ್ಚಪ್ಪ ಮೇಷ್ಟ್ರು, ಮಹಾನಗರ ಪಾಲಿಕೆ ಉಪ ಮಹಾಪೌರರಾದ ಸೋಗಿ ಶಾಂತಕುಮಾರ, ಜಾಗತಿಕ ಲಿಂಗಾಯತ ಮಹಾಸಭಾದ ಆವರಗೆರೆ ರುದ್ರಮುನಿ, ವಿರಕ್ತಮಠದ ಕಾರ್ಯದರ್ಶಿ ಕಣಕುಪ್ಪಿ ಮುರುಗೇಶಪ್ಪ, ಅಗಡಿ ಮಹಾಂತೇಶ, ಬಸವ ಕಲಾಲೋಕದ ಶಶಿಧರ, ರುದ್ರೇಗೌಡ, ಶರಣ ಸಾಹಿತ್ಯ ಪರಿಷತ್‌ನ ಪರಮೇಶ್ವರಪ್ಪ, ಬಸವ ಬಳಗದ ಶಿವಾನಂದ ಗುರೂಜಿ, ಲಂಬಿ ಮುರುಗೇಶ, ಚನ್ನಬಸವ ಶೀಲವಂತ್, ಗೋಪನಾಳ ರುದ್ರಗೌಡ್ರು, ವೀಣಾ ಮಂಜುನಾಥ, ಭುವನೇಶ್ವರಿ ತಾಯಿ, ಶಿವಬಸಮ್ಮ, ಕದಳಿ ಮಹಿಳಾ ವೇದಿಕೆಯ ಕುಸುಮ ಲೋಕೇಶ, ಗಾಯತ್ರಿ ವಸ್ತ್ರದ್ ಸೇರಿದಂತೆ ಅನೇಕರು ಭಾಗವಹಿಸಿದ್ದರು.

## ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಬೀದಿಬದಿ ವ್ಯಾಪಾರಿಗಳ ಪ್ರತಿಭಟನೆ



**ಜಗಳೂರು:** ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಆಗ್ರಹಿಸಿ ಸ್ಥಿರ ಹಾಗೂ ಸಂಚಾರಿ ಬೀದಿಬದಿ ಚಿಲ್ಲರೆ ವ್ಯಾಪಾರಸ್ಥರ ಸಂಘದ ತಾಲ್ಲೂಕು ಸಮಿತಿ ವತಿಯಿಂದ ಪ್ರತಿಭಟನೆ ನಡೆಸಲಾಯಿತು.

ಮಂಗಳವಾರ ಪಟ್ಟಣದ ಪ್ರವಾಸಿ ಮಂದಿರದಿಂದ ಹೊರಟ ಪ್ರತಿಭಟನಾಕಾರರು ಮಹಾತ್ಮಗಾಂಧಿ ವೃತ್ತದಲ್ಲಿ ಮಾನವ ಸರಪಳಿ ನಿರ್ಮಿಸಿ ನಂತರ ಅಂಬೇಡ್ಕರ್ ವೃತ್ತದ ಮೂಲಕ ಸಾಗಿ ಧಿಕ್ಕಾರ ಕೂಗುತ್ತಾ ತಾಲ್ಲೂಕು ಕಛೇರಿ ಮುಂಬಾಗ ಜಮಾಯಿಸಿ ತಹಶೀಲ್ದಾರ್ ಸೈಯದ್ ಕಲೀಂ ಉಲ್ಲಾ ಅವರಿಗೆ ಲಿಖಿತ ಮನವಿ ಸಲ್ಲಿಸಿದರು.

ಸಂಘಟನೆ ಜಿಲ್ಲಾಧ್ಯಕ್ಷ ಇಸ್ಮಾಯಿಲ್ ಮಾತನಾಡಿ, ಬೀದಿ ಬದಿ ವ್ಯಾಪಾರಸ್ಥರಿಗೆ ಸ್ಮಾರ್ಟ್ ಕಾರ್ಡ್ ನೀಡಬೇಕು. ಯಾವುದೇ ಕಾರಣ–ಕ್ಕೂ ಒಕ್ಕಲೆಬ್ಬಿಸಬಾರದು, ಪಟ್ಟಣದ ಮಧ್ಯಭಾಗದಲ್ಲಿ ಮಾರುಕಟ್ಟೆ ಸ್ಥಾಪಿಸಬೇಕು. ಜಕಾತಿ ಹಣವನ್ನು ಪಟ್ಟಣ ಪಂಚಾಯಿತಿಯೇ ಪಡೆಯಬೇಕು. ವ್ಯಾಪಾರಸ್ಥರ ಸಂಖ್ಯೆಗೆ ಅನುಗುಣವಾಗಿ ಜಕಾತಿ ಮೊತ್ತವನ್ನು ನಿಯಂತ್ರಿಸಬೇಕು. ಜಕಾತಿ ಹಣಪಾವತಿಗೆ ರಸೀದಿ ನೀಡಬೇಕು. ಸಂಕೀರ್ಣಮಳಿಗೆಯಲ್ಲಿ ವ್ಯಾಪಾರಸ್ಥರಿಗೆ ಶೌಚಾಲಯ, ಬೆಳಕಿನ ವ್ಯವಸ್ಥೆ, ಕುಡಿಯುವ ನೀರಿನ ವ್ಯವಸ್ಥೆ ಅಗತ್ಯ ಮೂಲಸೌಕರ್ಯ ಒದಗಿಸಬೇಕು. 2014 ರ ಬೀದಿಬದಿ ವ್ಯಾಪಾರಸ್ಥರ ನಿಯಂತ್ರಣ ಹಾಗೂ ಸಂರಕ್ಷಣಾ ಕಾಯ್ದೆಯನ್ನು ಸಮರ್ಪಕವಾಗಿ ಜಾರಿಗೊಳಿಸಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಸಂಘಟನೆ ಜಿಲ್ಲಾ ಕಾರ್ಯದರ್ಶಿ ಕೆ. ಭಾರತಿ, ತಾಲ್ಲೂಕು ಅಧ್ಯಕ್ಷೆ ಮಂಜಮ್ಮ, ಪದಾಧಿಕಾರಿಗಳಾದ ತಿಪ್ಪಮ್ಮ, ಜಯ್ಯಣ್ಣ, ಎರ್ರಿಸ್ವಾಮಿ, ಕೃಷ್ಣಪ್ಪ, ಮೆಹಬೂಬ್ ಸಾಬ್, ಅನ್ವರ್, ಜಗದೀಶ್, ತಿಪ್ಪೇಸ್ವಾಮಿ, ಸೇರಿದಂತೆ ಅನೇಕ ಬೀದಿಬದಿ ವ್ಯಾಪಾರಿಗಳು ಭಾಗವಹಿಸಿದ್ದರು.

## ಕೇಂದ್ರದ ಬಜೆಟ್ ಅಭಿವೃದ್ಧಿ ಪಥದಲ್ಲಿನ ಮೈಲಿಗಲ್ಲು : ವಿಶ್ವನಾಥ್ ಭಟ್

**ಚಿಕ್ಕಮಗಳೂರು** – ನರೇಂದ್ರ ಮೋದಿ ನೇತೃತ್ವದ ಬಿಜೆಪಿ ಸರ್ಕಾರದ ಕೇಂದ್ರ ಬಜೆಟ್ ಸರ್ವಜನ ಸ್ನೇಹಿ ಹಾಗೂ ಎಲ್ಲಾ ಕ್ಷೇತ್ರಗಳ ಅಭಿವೃದ್ಧಿ ಪಥದಲ್ಲಿನ ಮೈಲಿಗಲ್ಲಾಗಿದೆ ಎಂದು ಆರ್ಥಿಕ ತಜ್ಞ ವಿಶ್ವನಾಥ್ ಭಟ್ ಹೇಳಿದರು.



ನಗರದ ಬಿಜೆಪಿ ಕಚೇರಿಯಲ್ಲಿ ಆಯೋಜಿಸಿದ್ದ ಕೇಂದ್ರ ಬಜೆಟ್ ಸಂವಾದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ನಂರೇದ್ರ ಮೋದಿಯವರು ಬಜೆಟ್ ಮಂಡನೆಯಾದ ನಂತರದಲ್ಲೆ ದೇಶದ ಎಲ್ಲಾ ಲೋಕಸಭಾ ಕ್ಷೇತ್ರಗಳಲ್ಲು ಬಜೆಟ್ ಕುರಿತು ಉದ್ಯಮದಾರರು, ಚಾರ್ಟೆಡ್ ಅಕೌಂಟ್, ಇಂಜಿನಿಯರ್‌ಗಳು, ಸಮಾಜ ಚಿಂತಕರನ್ನು ಒಳಗೊಂಡಂತೆ ವಿವಿಧ ಜನ ಸಾಮಾನ್ಯರೊಂದಿಗೆ ಹಿಂದಿನ ಬಜೆಟ್ ಹಾಗೂ ಮುಂದೆ ಕೈಗೊಳ್ಳಬಹುದಾದ ಕ್ರಮಗಳು, ತೆರಿಗೆ, ಹೂಡಿಕೆ ಸೇರಿದಂತೆ ಹಲವಾರು ವಿಷಯಗಳನ್ನು ಸಂವಾದ ನಡೆಸುವ ಮಹತ್ವದ ಉದ್ದೇಶವನ್ನು ಹೊಂದಿದ್ದಾರೆ. ಆದರೆ 57 ವರ್ಷಗಳ ಕಾಲ ಕೇಂದ್ರದಲ್ಲಿ ಆಡಳಿತದ ಚುಕ್ಕಾಣಿ ಹಿಡಿದಿದ್ದ ಕಾಂಗ್ರೆಸ್ ಸರ್ಕಾರಕ್ಕೆ ಈ ಉತ್ತಮ ಕಾರ್ಯವನ್ನು ನಿರ್ವಹಿಸುವ ಯೋಚನೆ ಕೂಡ ಬಂದಿಲ್ಲ. ಸರ್ಕಾರದ ಕರ್ತವ್ಯವನ್ನೇ ಮರೆತಿದ್ದರೂ ಅಥವಾ ಅವರ ಬಜೆಟ್ ಮಂಡನೆ ವಿಷಯದಲ್ಲಿ ಅವರಿಗೆ ಸ್ವತಹ ವಿಶ್ವಾಸ ವಿಲ್ಲದಿರುವುದನ್ನು ಸೂಚಿಸುತ್ತದೆ ಎಂದರು.

ರಷ್ಯಾ ಮತ್ತು ಉಕ್ರೇನ್, ಇಸ್ರೇಲ್ ಮತ್ತು ಹಮಾಸ ನಡುವಿನ ಭೌಗೋಳಿಕ ರಾಜಕೀಯ ಸಂಘರ್ಷ ಜಗತ್ತಿನಾದ್ಯಂತ ಅಂತರಾಷ್ಟ್ರೀಯ ವ್ಯಾಪರ ವಹಿವಾಟು ತೀವ್ರವಾಗಿ ಕುಸಿದು ಆಹಾರ ಪಾದಾರ್ಥಗಳು ಸೇರಿದಂತೆ **(3ನೇ ಪುಟಕ್ಕೆ)**

## ಮಾರ್ಚ್ 8ರಂದು ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ರಾಷ್ಟ್ರೀಯ ಲೋಕ ಅದಾಲತ್

**ದಾವಣಗೆರೆ:** ಮಾರ್ಚ್ 8ರಂದು ನಡೆಯುವ ಲೋಕ ಅದಾಲತ್‌ನಲ್ಲಿ ನ್ಯಾಯಾಲಯದಲ್ಲಿ ಬಾಕಿ ಇರುವ, ರಾಜಿ ಆಗಬಹುದಾದ ಎಲ್ಲಾ ರೀತಿಯ ವ್ಯಾಜ್ಯಗಳನ್ನು ಬಗೆಹರಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ರಾಜೇಶ್ವರಿ ಎನ್.ಹೆಗಡೆ ತಿಳಿಸಿದರು.

ನಗರದ ಜಿಲ್ಲಾ ನ್ಯಾಯಾಲಯಗಳ ಸಂಕೀರ್ಣದಲ್ಲಿನ ವಕೀಲರ ಸಭಾಂಗಣದಲ್ಲಿ ಮಂಗಳವಾರ ಆಯೋಜಿಸಲಾಗಿದ್ದ ಪೂರ್ವಭಾವಿ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿ, ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರಿಗಳ ಆದೇಶದ ಮೇರೆಗೆ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ಮಾರ್ಚ್ 8ರಂದು ರಾಷ್ಟ್ರೀಯ ಲೋಕ ಅದಾಲತ್ ಆಯೋಜಿಸಲಾಗಿದೆ ಎಂದರು.



ಸಿವಿಲ್ ವ್ಯಾಜ್ಯ, ಮೋಟಾರ್ ವಾಹನ ಅಪಘಾತ ಪರಿಹಾರದ ಪ್ರಕರಣಗಳು. ಭೂ ಸ್ವಾಧೀನ ಪ್ರಕರಣಗಳು, ವಿದ್ಯುತ್ ಮಂಡಳಿ ಮುಂತಾದ ಸ್ಥಳೀಯ ಸಂಸ್ಥೆಗಳ ಪರ ಮತ್ತು ವಿರುದ್ಧ ದಾಖಲಾದ ಪ್ರಕರಣಗಳು, ಬ್ಯಾಂಕ್, ಸಹಕಾರಿ ಸಂಘ, ಖಾಸಗಿ ವ್ಯಕ್ತಿಗಳ ನಡುವಿನ ಚೆಕ್ ಅಮಾನ್ಯ, ಹಣ ವಸುಲಾತಿ ಪ್ರಕರಣಗಳಿಗೆ ಸಂಬಂಧಿಸಿದ ವ್ಯಾಜ್ಯಗಳು, ವೈವಾಹಿಕ ಪ್ರಕರಣಗಳು ವಿವಾಹ ವಿಚ್ಛೇದನ ಹೊರತುಪಡಿಸಿ ಇತರೆ ವ್ಯಾಜ್ಯಗಳನ್ನು ಬಗೆಹರಿಸಿಕೊಳ್ಳಬಹುದೆಂದರು.

ಜಿಲ್ಲಾ ಗ್ರಾಹಕರ ವೇದಿಕೆಯಲ್ಲಿನ ಪ್ರಕರಣಗಳು, ಕಾರ್ಮಿಕ ನಷ್ಟ ಪರಿಹಾರ ಪ್ರಕರಣಗಳು, ಕಾನೂನಿನಲ್ಲಿ ರಾಜಿ ಆಗಬಹುದಾದ ಎಲ್ಲಾ ತರಹದ ಕ್ರಿಮಿನಲ್ ಪ್ರಕರಣಗಳನ್ನು ಹಾಗೂ ವ್ಯಾಜ್ಯಪೂರ್ವ ಪ್ರಕರಣಗಳನ್ನು ಬಗೆಹರಿಸಿಕೊಳ್ಳಲು ಅವಕಾಶ ಕಲ್ಪಿಸಲಾಗುವುದು. ಸಿವಿಲ್ ವ್ಯಾಜ್ಯಗಳಲ್ಲಿ ಪಕ್ಷಗಾರರು ಲೋಕ್ ಅದಾಲತ್‌ನಲ್ಲಿ ರಾಜಿಯಾದರೆ ಪಕ್ಷಗಾರರು ಸರ್ಕಾರಕ್ಕೆ ಪಾವತಿಸಿರುವ ನ್ಯಾಯಾಲಯದ ಶುಲ್ಕವನ್ನು ವಾಪಸ್ಸು ಕೊಡಲು ಅವಕಾಶವಿದೆ ಎಂದು ತಿಳಿಸಿದರು.

1ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಎಂ.ಹೆಚ್ ಅಣ್ಣಯ್ಯನವರ್ ಮಾತನಾಡಿ, ಲೋಕ್ ಅದಾಲತ್‌ನ ಮೂಲಕ ಸಾರ್ವಜನಿಕರಿಗೆ ಶೀಘ್ರ ಮತ್ತು ಕಡಿಮೆ ಖರ್ಚಿನಲ್ಲಿ ನ್ಯಾಯ ಒದಗಿಸುವಲ್ಲಿ ವಕೀಲರ ಪಾತ್ರ ಬಹು ಮುಖ್ಯವಾಗಿದೆ. ವಕೀಲರು ನ್ಯಾಯಾಲಯಕ್ಕೆ ಬರುವ ಕಕ್ಷಿದಾರರಿಗೆ ಅತ್ಯುತ್ತಮ ಮಾರ್ಗಗಳನ್ನು ನೀಡಬೇಕೆಂದು ಕರೆ ನೀಡಿದರು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಮ.ಕರೆಣ್ಣವರ ಮಾತನಾಡಿ, ಲೋಕ್ ಆದಾಲತ್‌ನಲ್ಲಿ ಉಭಯ ಪಕ್ಷಗಾರರು ಪರಸ್ಪರ ಒಪ್ಪಿದಲ್ಲಿ ಮಾತ್ರ ರಾಜಿ ಮಾಡಿಕೊಳ್ಳಬಹುದು. ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಆಶಯದಂತೆ ಲೋಕ್ ಆದಾಲತ್ ಮುಖಾಂತರ ಪ್ರಕರಣಗಳನ್ನು ಇತ್ಯಾರ್ಥ ಪಡಿಸಲು ಲೋಕ್‌ಆದಾಲತ್ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವಂತೆ ಸಾರ್ವಜನಿಕರು ವಿಶೇಷವಾಗಿ ಕಕ್ಷಿಗಾರರು ಹೆಚ್ಚಿನ ಸಂಖ್ಯೆಯಲ್ಲಿ **(3ನೇ ಪುಟಕ್ಕೆ)**

## ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ಎಣ್ಣೆಯುಕ್ತ ಮತ್ತು ಮಸಾಲೆಯುಕ್ತ ಆಹಾರ ತಪ್ಪಿಸಿ. ದಿನದ ಆರಂಭದಲ್ಲಿ ಇಂದು ನೀವು ಯಾವುದೇ ಆರ್ಥಿಕ ನಷ್ಟವನ್ನು ಹೊಂದಿರಬಹುದು. ಇದರಿಂದ ನಿಮ್ಮ ಪೂರ್ತಿ ದಿನ ಹದಗೆಡಬಹುದು. ನಿಮ್ಮ ಮಕ್ಕಳ ಸಮಸ್ಯೆಗಳನ್ನು ನಿಭಾಯಿಸಲು ಸ್ವಲ್ಪ ಸಮಯ ತೆಗೆದುಕೊಳ್ಳಿ. ಧೃತಿಗೆಡಬೇಡಿ – ವೈಫಲ್ಯಗಳು ಸಹಜ ಅವುಗಳು ಜೀವನದ ಸೌಂದರ್ಯವಾಗಿವೆ. ಕಡಿಮೆ ಅಡೆತಡೆಗಳೊಂದಿಗೆ–ಇದು ಅದ್ಭುತ ಸಾಧನೆಗಳ ದಿನದಂತೆ ಕಾಣುತ್ತದೆ ತಾವು ಬಯಸಿದ್ದು ಸಿಗದಿದ್ದಲ್ಲಿ ಕಿರಿಕಿಯಾಗಿ ವರ್ತಿಸುವ ಸಹೋದ್ಯೋಗಿಗಳ ಎಚ್ಚರದಿಂದಿರಿ.

### ವೃಷಭ ರಾಶಿ

ಹೆಚ್ಚಿನ ಕ್ಯಾಲೊರಿ ಆಹಾರವನ್ನು ತಪ್ಪಿಸಿ ಮತ್ತು ನಿಮ್ಮ ವ್ಯಾಯಾಮವನ್ನು ಕೈಬಿಡಬೇಡಿ. ಮೌಲ್ಯ ಹೆಚ್ಚಾಗುವ ವಸ್ತುಗಳನ್ನು ಖರೀದಿಸಲು ಪರಿಪೂರ್ಣ ದಿನ. ನಿಮ್ಮ ಅತಿಥಿಗಳ ಜೊತ ಒರಟಾಗಿ ನಡೆದುಕೊಳ್ಳಬೇಡಿ. ನಿಮ್ಮ ವರ್ತನೆ ಕೇವಲ ನಿಮ್ಮ ಕುಟುಂಬಕ್ಕೆ ಮಾತ್ರವೇ ಅಸಮಾಧಾನ ತರದೇ ಸಂಬಂಧಗಳಲ್ಲೂ ಶೂನ್ಯತೆಯನ್ನು ತರಬಹುದು. ನಿಮ್ಮ ಪ್ರೇಮಿಗೆ ಇಷ್ಟವಿಲ್ಲದ ಉಡುಪುಗಳು ಅವರಿಗೆ ಮುಜುಗರ ಉಂಟುಮಾಡಬಹುದಾದ್ದರಿಂದ ಅವುಗಳನ್ನು ಧರಿಸಬೇಡಿ. ನೀವು ಕಷ್ಟಕರವೆಂದು ತೋರುವ ಸಮಸ್ಯೆಗಳನ್ನು ಪರಿಹರಿಸಲು ನಿಮಗಿರುವ ಸಂಪರ್ಕಗಳನ್ನು ಬಳಸಬೇಕಾಗುತ್ತದೆ

### ಮಿಥುನ ರಾಶಿ

ಒಬ್ಬ ಸಂತನಿಂದ ಆಧ್ಯಾತ್ಮಿಕ ಜ್ಞಾನ ಸಾಂತ್ವನ ಮತ್ತು ಆರಾಮವನ್ನು ಒದಗಿಸುತ್ತದೆ. ನಿಮ್ಮ ಖರ್ಚುಗಳನ್ನು ನಿಯಂತ್ರಿಸಲು ಮತ್ತು ಕೇವಲ ಅಗತ್ಯವಾದ ವಸ್ತುಗಳ ಮಾತ್ರ ಇಂದು ಖರೀದಿಸಲು ಪ್ರಯತ್ನಿಸಿ. ಕೌಟುಂಬಿಕ ಸಮಸ್ಯೆಗೆ ಮೊದಲ ಆದ್ಯತೆ ನೀಡಬೇಕು. ನೀವು ವಿಳಂಬವಿಲ್ಲದೇ ಇದನ್ನು ಚರ್ಚಿಸಬೇಕು, ಏಕೆಂದರೆ ಒಮ್ಮೆ ಇದನ್ನು ಬಗೆಹರಿಸಿದ ನಂತರ ಮನೆಯಲ್ಲಿನ ಜೀವನ ನಡೆಸಲು ಹೆಚ್ಚು ಸುಲಭವಾಗುತ್ತದೆ ಮತ್ತು ನಿಮ್ಮ ಕುಟುಂಬದ ಸದಸ್ಯರ ಮೇಲೆ ಪ್ರಭಾವ ಬೀರಲು ನಿಮಗೆ ಯಾವುದೇ ತೊಂದರೆ ಕಂಡುಬರುವುದಿಲ್ಲ.

### ಕರ್ಕ ರಾಶಿ

ಅತ್ಯಂತ ಪ್ರಭಾವಿ ಜನರ ಬೆಂಬಲ ನಿಮ್ಮ ನೈತಿಕ ಸ್ಥೈರ್ಯವನ್ನು ಹೆಚ್ಚಿಸುತ್ತದೆ. ನೀವು ನಿಮ್ಮ ಹೂಡಿಕೆಗಳನ್ನು ಸಂಪ್ರದಾಯಬದ್ಧವಾಗಿ ಉಳಿತಾಯ ಮಾಡಿದರೆ ಹಣ ಮಾಡುತ್ತೀರಿ. ನಿಮಗೆ ಆಶ್ಚರ್ಯವಾಗುವ ಹಾಗೆ ನಿಮ್ಮ ಸಹೋದರ ನಿಮ್ಮನ್ನು ಪಾರು ಮಾಡುತ್ತಾರೆ. ನೀವು ಒಬ್ಬರೊಬ್ಬರನ್ನು ಸಂತೋಷವಾಗಿಡಲು ಒಟ್ಟೊಟ್ಟಿಗೆ ಕೆಲಸ ಮಾಡಬೇಕು.

### ಸಿಂಹ ರಾಶಿ

ಅತ್ಯಂತ ಪ್ರಭಾವಿ ಜನರ ಬೆಂಬಲ ನಿಮ್ಮ ನೈತಿಕ ಸ್ಥೈರ್ಯವನ್ನು ಹೆಚ್ಚಿಸುತ್ತದೆ. ಹಣದ ಲಾಭ ನಿಮ್ಮ ನಿರೀಕ್ಷೆಯಂತಿರುವುದಿಲ್ಲ. ಸ್ನೇಹಿತರು ಜೊತೆಗಿನ ಚಟುವಟಿಕೆಗಳು ಆಹ್ಲಾದಕರವಾಗಿರುತ್ತವೆ – ಇಲ್ಲದಿದ್ದರೆ ನೀವು ಖಾಲಿ ಕೈಯಲ್ಲಿ ಜೊತೆ ತೆರಳುತ್ತೀರಿ. ಪ್ರಣಯದ ಬಂಧಗಳು ನಿಮ್ಮ ಸಂತೋಷವನ್ನು ಆಸಕ್ತಿಕರವಾಗಿಸುತ್ತವೆ. ಇಂದು ಕೆಲಸದಲ್ಲಿ ನಿಮಗೆ ನಿಜಕ್ಕೂ ಒಳ್ಳೆಯದಾಗಬಹುದು, ಇಂದು ನಿಮ್ಮನ್ನು ದ್ವೇಷಿಸುವವರಿಗೆ 'ಹಲೋ' ಎಂದಲ್ಲಿ.

### ಕನ್ಯಾ ರಾಶಿ

ಇಂದು ಆರೋಗ್ಯ ಪರಿಪೂರ್ಣವಾಗಿರುತ್ತದೆ. ಅನಿರೀಕ್ಷಿತ ಬಿಲ್ಲುಗಳು ಹಣಕಾಸಿನ ಹೊರೆಯನ್ನು ಹೆಚ್ಚಿಸುತ್ತದೆ. ಪ್ರೀತಿ ಸಾಂಗತ್ಯ ಮತ್ತು ಬಂಧ ಏರಿಕೆಯಲ್ಲಿರುತ್ತವೆ. ಪ್ರೀತಿ ಇಂದ್ರಿಯಗಳ ಮಿತಿಯನ್ನು ಮೀರಿದ್ದಾಗಿದೆ, ಆದರೆ ನಿಮ್ಮ ಇಂದ್ರಿಯಗಳು ಇಂದು ಪ್ರೀತಿಯ ಭಾವಪರವಶತೆಯನ್ನು ಅನುಭವಿಸುತ್ತವೆ. ನೀವು ಏನೂ ಮಾಡಿದರೂ ಪರಿಪೂರ್ಣವಾಗಿ ಮಾಡುತ್ತೀರಿ – ನಿಮ್ಮ ಸುತ್ತಲಿನವರಿಗೆ ನೀವೆಷ್ಟು ಪರಿಣಾಮಕಾರಿಯೆಂದು ತೋರಿಸುವ ಮೂಲಕ ನಿಮ್ಮ ಮೌಲ್ಯವನ್ನು ಸಾಬೀತು ಮಾಡಿ.

### ತುಲಾ ರಾಶಿ

ಇತ್ತೀಚೆಗೆ ನಿಮ್ಮಲ್ಲಿ ಕೆಲವರು ಓವರ್ಟೈಮ್ ಮಾಡುತ್ತಿರುತ್ತಾರೆ ಹಾಗೂ ನಿಮ್ಮ ಚೈತನ್ಯ ಉಡುಗುತ್ತಿರುತ್ತದೆ– ಇಂದು ನೀವು ಒತ್ತಡ ಹಾಗೂ ಸಂದಿಗ್ಧತೆಯನ್ನು ಬಯಸುವುದಿಲ್ಲ. ಯಾವುದೇ ಆಪ್ತ ಸಂಬಂಧಿಕರ ಬೆಂಬಲದಿಂದ ನೀವು ನಿಮ್ಮ ವ್ಯಾಪಾರದಲ್ಲಿ ಉತ್ತಮವಾಗಿ ಮಾಡಬಹುದು. ಇದು ನಿಮಗೆ ಆರ್ಥಿಕ ಲಾಭವನ್ನು ನೀಡುತ್ತದೆ. ಒಬ್ಬ ಹತ್ತಿರದ ಸಂಬಂಧಿಗೆ ಹೆಚ್ಚು ಗಮನ ನೀಡಬೇಕಾಗಬಹುದಾದರೂ ಅವರು ಬೆಂಬಲ ಮತ್ತು ಆರೈಕೆ ನೀಡಬಹುದು. ಪ್ರಣಯದ ಅವಕಾಶಗಳಿವೆ – ಆದರೆ ಅವು ಕ್ಷಣಿಕವಾಗಿರುತ್ತವೆ

### ವೃಶ್ಚಿಕ ರಾಶಿ

ನಿಮ್ಮ ಮಗುವಿನಂಥ ಸ್ವಭಾವ ಕಾಣಿಸಿಕೊಳ್ಳುತ್ತದೆ ಮತ್ತು ನೀವು ಒಂದು ಆಹ್ಲಾದಕಾರಿ ಮನಸ್ಥಿತಿಯಲ್ಲಿರುತ್ತೀರಿ. ತಮ್ಮ ವ್ಯಾಪರಕ್ಕಾಗಿ ಮನೆಯಿಂದ ಹೊರಗೆ ಹೋಗಿರುವ ವ್ಯಾಪಾರಿಗಳು, ತನ್ನ ಹಣವನ್ನು ಜಾಗರೂಕವಾಗಿಡಿ, ಹಣದ ಕಳ್ಳತನವಾಗುವ ಸಾಧ್ಯತೆ ಇದೆ. ಥಿಯೇಟರ್ ಅಥವಾ ನಿಮ್ಮ ಸಂಗಾತಿಯ ಜೊತೆಗಿನ ಊಟ ನಿಮ್ಮನ್ನು ಒಂದು ಶಾಂತವಾದ ಮತ್ತು ಅದ್ಭುತ ಲಹರಿಯಲ್ಲಿರಿಸುವಂತೆ ತೋರುತ್ತದೆ.

### ಧನು ರಾಶಿ

ಕ್ರೀಡೆಗಳು ಸಾರ್ವಕಾಲಿಕ ಯೌವನದ ರಹಸ್ಯವಾಗಿದ್ದರಿಂದ ಯಾವುದಾದರೂ ಆಟಗಳಲ್ಲಿ ನಿಮ್ಮನ್ನು ತೊಡಗಿಸಿಕೊಳ್ಳಿ. ಇಂದು ಹಣದ ಆಗಮನವು ನಿಮ್ಮನ್ನು ಯಾವುದೇ ಸಮಸ್ಯೆಗಳಿಂದ ಮುಕ್ತಗೊಳಿಸಬಹುದು ನಿಮ್ಮ ಸಹಾನುಭೂತಿ ಮತ್ತು ತಿಳುವಳಿಕೆಗೆ ಪ್ರತಿಫಲ ದೊರಕುತ್ತದೆ. ಆದರೆ ಯಾವುದೇ ಆತುರದ ತೀರ್ಮಾನ ಒತ್ತಡ ಉಂಟುಮಾಡಬಹುದಾದ್ದರಿಂದ ಎಚ್ಚರಿಕೆಯಿಂದಿರಿ.

### ಮಕರ ರಾಶಿ

ನಿಮ್ಮ ಚಿಂತನೆ ಮತ್ತು ಶಕ್ತಿಯನ್ನು ನೀವು ವಾಸ್ತವವಾಗಿ ಏನನ್ನು ನೋಡಬಯಸುತ್ತೀರೋ ಅದನ್ನು ಸಾಧಿಸುವಲ್ಲಿ ನಿರ್ದೇಶಿಸಿ. ಇದುವರೆಗೆ ನಿಮ್ಮ ಸಮಸ್ಯೆಯಂದರೆ ನೀವು ಪ್ರಯತ್ನಿಸದೇ ಕೇವಲ ಆಸೆಪಡುತ್ತೀರಿ. ನಿಮ್ಮ ಹಿಂದಿನ ಸಾಲವನ್ನು ಇಂದಿನ ವರೆಗೂ ಮರುಪಾವತಿ ಮಾಡದೇ ಇರುವ ನಿಮ್ಮ ಸಂಬಂಧಿಕರಿಗೆ ಇಂದು ಸಾಲ ಕೊಡಬಾರದು. ಸ್ನೇಹಿತರು ಜೊತೆಗಿನ ಚಟುವಟಿಕೆಗಳು ಆಹ್ಲಾದಕರವಾಗಿರುತ್ತವೆ – ಇಲ್ಲದಿದ್ದರೆ ನೀವು ಖಾಲಿ ಕೈಯಲ್ಲಿ ಜೊತೆ ತೆರಳುತ್ತೀರಿ.

### ಕುಂಭ ರಾಶಿ

ಇಂದು ಆರೋಗ್ಯ ಪರಿಪೂರ್ಣವಾಗಿರುತ್ತದೆ. ನಿಮ್ಮ ಜೀವನ ಸಂಗಾತಿಯೊಂದಿಗೆ ಸೇರಿ ಇಂದು ನೀವು ಭವಿಷ್ಯಕ್ಕೆ ಯಾವುದೇ ಆರ್ಥಿಕ ಯೋಜನೆಯನ್ನು ಮಾಡಬಹುದು ಮತ್ತು ಈ ಯೋಜನೆ ಯಶಸ್ವಿಯಾಗಲಿದೆ ಎಂದು ಭರವಸೆ ಇದೆ. ಇಂದು ನೀವು ಇತರರ ಅಗತ್ಯಗಳಿಗೆ ಗಮನ ನೀಡಬೇಕಾದರೂ ಮಕ್ಕಳೊಂದಿಗೆ ಅತೀ ಉದಾರತೆ ತೋರಿಸುವುದು ತೊಂದರೆಗೆ ಕಾರಣವಾಗುತ್ತದೆ.

### ಮೀನ ರಾಶಿ

ನಿಮ್ಮ ನೀಡುವ ವರ್ತನೆ ಪರೋಕ್ಷವಾಗಿ ನಿಮಗೆ ಆಶೀರ್ವಾದವೇ ಆಗುತ್ತದೆ, ಏಕೆಂದರೆ ನೀವು ಅನುಮಾನ, ನಿರಾಸೆ, ವಿಶ್ವಾಸರಾಹಿತ್ಯ ಅಹಂಭಾವ ಮತ್ತು ಅಸೂಯೆಯಂಥ ಅನೇಕ ದುರ್ಗುಣಗಳಿಂದ ಮುಕ್ತಿ ಹೊಂದುವ ಸಾಧ್ಯತೆಗಳಿವೆ. ಇಂದು, ನೀವು ಸಾಕಷ್ಟು ಸಕಾರಾತ್ಮಕತೆಯೊಂದಿಗೆ ಮನೆಯಿಂದ ಹೊರಬರುತ್ತೀರಿ, ಆದರೆ ಕೆಲವು ಅಮೂಲ್ಯ ವಸ್ತುವಿನ ಕಳ್ಳತನದಿಂದಾಗಿ, ನಿಮ್ಮ ಮನಸ್ಥಿತಿಗೆ ತೊಂದರೆಯಾಗಬಹುದು.

# ದೇವಾಲಯಗಳ ಜೊತೆ ಜೊತೆಗೆ ವಿದ್ಯಾಲಯಗಳ ಸಂಖ್ಯೆ ಹೆಚ್ಚಾಗಲಿ: ಈಶ್ವರಾನಂದಪುರಿ ಶ್ರೀ ಅಭಿಮತ



**ದಾವಣಗೆರೆ:** ನಮಗೆ ಇಂದು ಭಕ್ತಿ ಮತ್ತು ಜ್ಞಾನ ಎರಡೂ ಮುಖ್ಯ. ಭಕ್ತಿ ಹೆಚ್ಚಿಸುವ ದೇವಾಲಯಗಳ ಜೊತೆಯಲ್ಲೇ ಜ್ಞಾನ ವಿಸ್ತರಿಸುವ ವಿದ್ಯಾಲಯಗಳೂ ಹೆಚ್ಚಬೇಕು ಎಂದು ಹೊಸದುರ್ಗ ಕನಕ ಶಾಖಾ ಮಠದ ಶ್ರೀ ಈಶ್ವರಾನಂದಪುರಿ ಸ್ವಾಮೀಜಿ ಹೇಳಿದರು.

ತಾಲ್ಲೂಕಿನ ಹಳೆಕುಂದುವಾಡ ಗ್ರಾಮದಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಶ್ರೀ ಆಂಜನೇಯ ಸ್ವಾಮಿ, ಶ್ರೀ ಬಸವೇಶ್ವರ ದೇವಸ್ಥಾನದ ಉದ್ಘಾಟನೆ, ಶಿಲಾಮೂರ್ತಿ ಪ್ರತಿಷ್ಠಾಪನೆ ಹಾಗೂ ಕಳಸಾರೋಹಣ ಕಾರ್ಯಕ್ರಮದಲ್ಲಿ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಇಂದಿನ ಮಕ್ಕಳನ್ನು ಐಎಎಸ್, ಕೆಎಎಸ್ನಂತಹ ಉನ್ನತ ಶಿಕ್ಷಣ ಹಾಗೂ ಸಂಸ್ಕಾರ ನೀಡಲು ಪಾಲಕರು ಮುಂದಾಗಬೇಕು. ಉತ್ಸವಗಳ ಹೆಸರಲ್ಲಿ ಮೌಢ್ಯ ತೊರೆಯಬೇಕು. ದುಂದುವೆಚ್ಚ ಕಡಿಮೆ ಮಾಡಬೇಕು ಎಂದು ಸಲಹೆ ನೀಡಿದರು.

ಶ್ರೀಕೃಷ್ಣನು ಕನಕನಿಗೆ, ಶ್ರೀರಾಮನು ಶಬರಿಗೆ ಒಲಿದಿದ್ದು ಜಾತಿಯಿಂದಲ್ಲ; ಅವರಲ್ಲಿದ್ದ ಭಕ್ತಿಯಿಂದಾಗಿ. ಭಕ್ತಿ ಮತ್ತು ಭಕ್ತನಿಗೆ ಜಾತಿ ಇಲ್ಲ. ಎಲ್ಲ ಸ್ವಾಮೀಜಿಗಳನ್ನು, ವರ್ಗದವರನ್ನು ಒಗ್ಗೂಡಿಸಿದ ಕುಂದುವಾಡ, ಸಾಮರಸ್ಯದ ಗ್ರಾಮವಾಗಿದೆ. ಪ್ರತಿ ಗ್ರಾಮದಲ್ಲೂ ಇಂತಹ ವಾತಾವರಣ ಇರಬೇಕು ಎಂದು ಆಶಿಸಿದರು.

ಮಾದಾರ ಚನ್ನಯ್ಯ ಗುರುಪೀಠದ ಬಸವಮೂರ್ತಿ ಮಾದಾರ ಚನ್ನಯ್ಯ ಸ್ವಾಮೀಜಿ ಮಾತನಾಡಿ ಆಂಜನೇಯನಿಗೆ ಸೀಮಿತ ಜಾತಿಯ ಭಕ್ತರಿಲ್ಲ. ಆತ ಜಾತ್ಯತೀತ ವ್ಯಕ್ತಿ. ಭಕ್ತಿಗೆ ಹೆಸರಾದ ಆಂಜನೇಯ ಹಾಗೂ ಸಮಾನತೆಗೆ ಹೆಸರಾದ ಬಸವೇಶ್ವರರ ದೇಗುಲ ಪ್ರತಿಷ್ಠಾಪನೆಯನ್ನು ಕುಂದುವಾಡ ಗ್ರಾಮಸ್ಥರು ಭಾವೈಕ್ಯ, ಸೌಹಾರ್ದ ಹಾಗೂ ಸಹಬಾಳ್ವೆಯಿಂದ ಮಾಡುತ್ತಿದ್ದಾರೆ. ಈ ಕುಂದುವಾಡ ಗ್ರಾಮ ಸೌಹಾರ್ದ ಗ್ರಾಮವಾಗಿ ಬದಲಾಗಲಿ ಎಂದು ಹೇಳಿದರು.

ಹದಡಿಯ ಚಂದ್ರಗಿರಿ ಮಠದ ಮುರಳೀಧರ ಸ್ವಾಮೀಜಿ ಮಾತನಾಡಿ ಎಲ್ಲವನ್ನು ಕೊಟ್ಟ ದೇವರನ್ನು ಮರೆಯುತ್ತಿದ್ದೇವೆ. ನಿಸರ್ಗವನ್ನು ಹಾಳು ಮಾಡುತ್ತ, ಮಾಲಿನ್ಯ ಹೆಚ್ಚಿಸುತ್ತಿದ್ದೇವೆ. ನಮ್ಮಲ್ಲಿ ಭಯ ಮೂಡಿಸಲು ಹಿರಿಯರು ಊರಿಗೊಂದು ದೇವಸ್ಥಾನ ನಿರ್ಮಿಸಿದ್ದಾರೆ. ಆದರೆ ನಮ್ಮೊಳಗಿರುವ ದೇವರನ್ನು ನಾವು ಕಾಣಬೇಕು. ಮದಗಳನ್ನು ಕೈಬಿಡಬೇಕು. ಧರ್ಮ ಕಾರ್ಯ, ಪರೋಪಕಾರ ಗುಣ ಬೆಳೆಸಿಕೊಳ್ಳಬೇಕು ಎಂದು ತಿಳಿಸಿದರು.

ವಿರಕ್ತಮಠದ ಬಸವಪ್ರಭು ಸ್ವಾಮೀಜಿ ಮಾತನಾಡಿ, ಬಸವತತ್ವ ಎಲ್ಲರೂ ಕೂಡಿ ಬಾಳುವುದನ್ನು ಹೇಳಿದೆ. ಎಲ್ಲ ವರ್ಗಗಳಿಗೂ ಬಸವಣ್ಣನವರು ಸಾಮಾಜಿಕ ನ್ಯಾಯ ನೀಡಿದರು. ನಾವಿಂದು ಅವರ ದಾರಿಯಲ್ಲಿ ಸಾಗಬೇಕಿದೆ. ಬಸವಣ್ಣ ಕಂಡು ಕನಸು ಕುಂದುವಾಡ ಗ್ರಾಮದಲ್ಲಿ ಅನಾವರಣವಾಗಿದ್ದು, ಇಲ್ಲಿ ಸದಾ ಶಾಂತಿ ನೆಲೆಸಲಿ ಎಂದು ಆಶಿಸಿದರು.

ಜಿಲ್ಲಾ ಉಸ್ತುವಾರಿ ಸಚಿವ ಎಸ್. ಎಸ್. ಮಲ್ಲಿಕಾರ್ಜುನ್ ಮಾತನಾಡಿ, ಗ್ರಾಮದವರು ತುಂಬಾ ಒಗ್ಗಟ್ಟಿನಿಂದ ದೇವಾಲಯ ನಿರ್ಮಾಣ ಮಾಡಿರೋದು ಮೆಚ್ಚುವಂತಾಗಿದೆ, ತಡವಾಗಿಯಾದರೂ ಗ್ರಾಮದಲ್ಲಿ ದೇಗುಲಗಳು ಉತ್ತಮವಾಗಿ ನಿರ್ಮಿತವಾಗಿವೆ. ಗ್ರಾಮದ ಅಭಿವೃದ್ಧಿಗೆ ಎಲ್ಲರೂ ಒಗ್ಗಟ್ಟು ಪ್ರದರ್ಶಿಸಬೇಕು ಎಂದೂ ಹೇಳಿದರು. ದಾವಣಗೆರೆ– ಹಳೇ ಕುಂದುವಾಡ ಮುಖ್ಯ ರಸ್ತೆಗೆ ಹೊಂದಿಕೊಂಡ ರಸ್ತೆ ವ್ಯಾಜ್ಯ ನ್ಯಾಯಾಲಯದಲ್ಲಿದ್ದು ಇದನ್ನು ತೆರವುಗೊಳಿಸಿದಲ್ಲಿ ಗ್ರಾಮಸ್ಥರು ಬಯಸಿದಂತೆ 80 ಅಡಿ ರಸ್ತೆ ನಿರ್ಮಾಣ ಮಾಡಲು ಬದ್ಧನಿದ್ದೇನೆ. ಈ ಸಂಬಂಧ ದೂಡಾ ಅಧಿಕಾರಿಗಳು, ಜಮೀನಿನ ಮಾಲೀಕರು, ಗುತ್ತಿಗೆದಾರರನ್ನು ಸೇರಿಸಿ ಸಭೆ ನಡೆಸೋಣ ಎಂದರು.

ಶಾಸಕ ಕೆ.ಎಸ್.ಬಸವಂತಪ್ಪ ಮಾತನಾಡಿ, ಈ ಭಾಗದಲ್ಲಿ ದೇಗುಲಗಳ ಸಂಖ್ಯೆ ಹೆಚ್ಚಿದೆ. ಹಿಂದುಳಿದ ವರ್ಗದ ಮಕ್ಕಳು ವಿದ್ಯಾವಂತರಾದರೆ ಇಂತಹ ಹತ್ತು ದೇವಸ್ಥಾನ ಕಟ್ಟುತ್ತಾರೆ, ಹೀಗಾಗಿ ಶಾಲೆಗಳ ನಿರ್ಮಾಣಕ್ಕೂ ಮಹತ್ವ ನೀಡಿ ಎಂದು ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ರಾಜನಹಳ್ಳಿ ವಾಲ್ಮೀಕಿ ಗುರುಪೀಠದ ಪ್ರಸನ್ನಾನಂದಪುರಿ ಸ್ವಾಮೀಜಿ, ಮೈಲಾರ ಕ್ಷೇತ್ರದ ಕಾರ್ಣಿಕ ನುಡಿಯುವ ರಾಮಪ್ಪಜ್ಜ, ಹಳೆಕುಂದುವಾಡದ ಸ್ವಾಮಿಜಿ ರಾಜಣ್ಣ, ಮುಖಂಡರಾದ ಬಿ.ಜಿ. ಅಜಯಕುಮಾರ್, ಲೋಕಿಕೆರೆ ನಾಗರಾಜ್, ಶ್ರೀನಿವಾಸ ದಾಸಕರಿಯಪ್ಪ, ಎಚ್. ವೆಂಕಟೇಶ್, ಜೆ.ಎನ್. ಶ್ರೀನಿವಾಸ್. ಶ್ವೇತಾ ಶ್ರೀನಿವಾಸ್, ಮುದೇಗೌಡ್ರ ಗಿರೀಶ್, ತಹಸೀಲ್ದಾರ್ ಬಿ.ಎನ್.ಅಶ್ವಥ್, ದೇವಸ್ಥಾನ ಅಭಿವೃದ್ಧಿ ಸಮಿತಿ ಸದಸ್ಯರು, ಗ್ರಾಮದ ಮುಖಂಡರು, ಯುವಕರು, ಗ್ರಾಮಸ್ಥರು ಪಾಲ್ಗೊಂಡಿದ್ದರು.

# 'ಕೋಟೆಯಲ್ಲಿ ಕೈಲಾಸ ವೈಕುಂಠ ಭಕ್ತಿಗೀತೆ ಸಮರ್ಪಣೆ



**ಚಿಕ್ಕಮಗಳೂರು:** ಸಂಗೀತಚಿಕಿತ್ಸೆ ಬಹಳ ಹಿಂದಿನಿಂದಲೂ ಪರಿಣಾಮಕಾರಿಯಾದುದು.ಸಂಗೀತ ಕೇಳುತ್ತಿರುವ ಮನಸ್ಸು ಸಂಯಮದಿಂದ ವರ್ತಿಸುತ್ತದೆ.ಗಾನವೂ ಒಂದುಧ್ಯಾನ ವಿಧಾನಎಂದುಜಿಲ್ಲಾಸ್ಪತ್ರೆರಕ್ತನಿಧಿ ವಿಭಾಗದ ಮುಖ್ಯಸ್ಥ ಡಾ.ಮುರಳೀಧರ್ ತಿಳಿಸಿದರು.

ನಗರದಕಲ್ಕಟ್ಟೆ ಪುಸ್ತಕದಮನೆ, ಸೂರಂಕಣ, ದೀವಿಗೆ ಬಳಗದವರು ಹೆಚ್.ಎನ್. ಮಲ್ಲೇಶರಾವ್ ಸ್ಮರಣೆಯಲ್ಲಿನಡೆಸುತ್ತಿರುವ 'ಕಲ್ಕಟ್ಟೆ ಗಾನ ದೀವಿಗೆ? ಸರಣಿಯ 20ನೇ ಭಕ್ತಿಗೀತೆಯನ್ನುಕೋಟೆಯ ಶ್ರೀ ಹರಿಹರೇಶ್ವರದೇವಾಲಯದಲ್ಲಿಇತ್ತೀಚೆಗೆ ನಡೆದ 'ಕಾರ್ಯಕ್ರಮದಲ್ಲಿಲೋಕಾರ್ಪಣೆಗೊಳಿಸಿ ಅವರು ಮಾತನಾಡಿದರು.ವೇಗದ ಈ ಆಧುನಿಕಕಾಲದಲ್ಲಿ ಒತ್ತಡಗಳು ಹೆಚ್ಚು.ಹಾಡು ಹೇಳುವುದು ಮತ್ತು ಕೇಳುವುದು ಎರಡೂ ನಮಗೆ ತಾಳ್ಮೆಯನ್ನು ಕಲಿಸುತ್ತವೆ. ಅದರಲ್ಲೂ ಮುಂಜಾನೆ ಭಕ್ತಿಗೀತೆಗಳನ್ನು ಕೇಳುವುದರಿಂದ ಅದರ ಸಾಹಿತ್ಯ ಮತ್ತು ಸಂಗೀತ ಸಾತ್ವಿಕತೆಗೆ ಪ್ರೇರಣೆ ನೀಡುತ್ತವೆಎಂದುಅವರು ನುಡಿದರು.ಹಿರಿಯ ಕೊಳಲು ವಾದಕ ನಾಗರಾಜ್ಅವರು ಮಾತನಾಡಿ, ದೇವಸ್ಥಾನಗಳು ಸಾಂಸ್ಕೃತಿಕ ಕೇಂದ್ರಗಳೂ ಹೌದು.ಇಲ್ಲಿ ಮಂತ್ರಾವರಣ ಮಾತ್ರಅಲ್ಲ, ಸಂಗೀತದ ಸ್ವರಗಾನಾವರಣವೂಇರುತ್ತದೆ.ಕಲ್ಕಟ್ಟೆ ದಂಪತಿಗಳೂ ಈ ಸಂದರ್ಭದಲ್ಲಿ ಹೊಸ ಗಾನ ತರಂಗಗಳನ್ನು ಸೇರಿಸುತ್ತಿರುವುದುಅಭಿನಂದನೀಯ.ಇಲ್ಲಿ ಹಿನ್ನೆಲೆ ಸಂಗೀತ ನೀಡುತ್ತಿರುವ ಮಿತ್ರ ಕೆ.ಎನ್.ನಾಗಭೂಷಣ್ಅವರ ಶ್ರಮವೂಅತ್ಯಂತ ಪ್ರಶಂಸನೀಯ. ಎಂದರು.

ಎಂ.ಇ.ಎಸ್. ವಿದ್ಯಾಸಂಸ್ಥೆಯ ಶೈಕ್ಷಣಿಕ ಸಲಹೆಗಾರ ಮಂಜುನಾಥ್ ಭಟ್ ಮಾತನಾಡಿ, ಕಾಲೇಜು ದಿನಗಳಿಂದಲೂ ಕ್ರಿಯಾಶೀಲರಾಗಿರುವ ನಾಗರಾಜರಾವ್ಅವರುಅದನ್ನು ಈ ಕಾಲದಲ್ಲಿಯೂ ಮುಂದುವರಿಸಿಕೊಂಡು ಬರುತ್ತಿರುವುದು ನಿಜಕ್ಕೂ ಸರ್ವ ಸ್ಫೂರ್ತಿದಾಯಕ ವಿಚಾರಎಂದರು.

ಸಾಹಿತಿರಮೇಶ ಬೊಂಗಾಳೆ ಮಾತನಾಡಿ, ಕಲೆಯು ಸೃಜನಶೀಲ ಮಾಧ್ಯಮ.ಒಳಿತನ್ನು ನೀಡಲು ಹೊರಟ ಸುಸಂಸ್ಕೃತ ಹಾದಿ ಎಂದು ಹೇಳಿದರು.ಕಾದಂಬರಿಕಾರ ಸಸಿಹಿತ್ಲು ಸುಬ್ರಹ್ಮಣ್ಯ, ಧ್ವನಿಗ್ರಾಹಕ ಕೆ.ಎನ್.ನಾಗಭೂಷಣ್, ಗಾಯಕಿಜ್ಯೋತಿ ವಿನೀತ್ಕುಮಾರ್, ಟೈಲರ್ಸ್ ಅಸೋಸಿಯೇಶನ್‌ನ ಅಶೋಕ್ಕುಮಾರ್, ಹಿರಿಯ ನಾಟಿ ವೈದ್ಯೆ ಶಾಂತಾ ಮಲ್ಲೇಶರಾವ್, ಕೋಟೆ ಅಂಚೆಮನೆ ಸುಧಾಕರ್, ಚಿಕ್ಕಮಗಳೂರು ಬ್ರಾಹ್ಮಣ ಮಹಾಸಭಾ ನಿರ್ದೇಶಕ ಕೆ.ಯು.ವಿನೀತ್ಕುಮಾರ್ ಅನಿಸಿಕೆ ವ್ಯಕ್ತಪಡಿಸಿದರು.ಆ್ಯಂಬರ್ ವ್ಯಾಲಿ ಶಾಲೆಯ ಶಿಕ್ಷಕಿ ವಾಸಂತಿ ಪದ್ಮನಾಭ್, ಅನಸೂಯ ಉಪ್ಪಳ್ಳಿ, ಭಾನುಮತಿ, ಹಿರಿಯಕಲಾವಿದಜಯಂತಆಚಾರ್, ಭಜನಾ ಮಂಡಳಿಯ ಸದಸ್ಯರು ಉಪಸ್ಥಿತರಿದ್ದರು.

ಅರ್ಚಕರಾದ ಶಶಿಕಾಂತ ಭಟ್ ಹಾಗೂ ಉಲಾ ದಂಪತಿಗಳು ಕಾರ್ಯಕ್ರಮ ಉದ್ಘಾಟಿಸಿದರು.ಗಾಯಕ ನಾಗರಾಜರಾವ್ಕಲ್ಕಟ್ಟೆ ಸ್ವಾಗತಿಸಿ, ನಿರೂಪಿಸಿದರು.ನಿವರ್ಾಪಕಿರೇಖಾ ನಾಗರಾಜರಾವ್ ವಂದಿಸಿದರು.

17ಸಿಕೆಎಂ ಫೋಟೋ: 'ಕಲ್ಕಟ್ಟೆ ಗಾನ ದೀವಿಗೆ? ಸರಣಿಯ 'ಕೋಟೆಯಲ್ಲಿ ಕೈಲಾಸ ವೈಕುಂಠ?ಭಕ್ತಿಗೀತೆಯನ್ನುಕೋಟೆಯ ಶ್ರೀ ಹರಿಹರೇಶ್ವರದೇವಾಲಯುದಲ್ಲಿಇತ್ತೀಚೆಗೆ ನಡೆದಕಾರ್ಯಕ್ರಮದಲ್ಲಿಜಿಲ್ಲಾಸ್ಪತ್ರೆರಕ್ತನಿಧಿ ವಿಭಾಗದ ಮುಖ್ಯಸ್ಥ ಡಾ.ಮುರಳೀಧರ್ ಲೋಕಾರ್ಪಣೆಗೊಳಿಸಿದರು.

# ಆಸ್ತಿ ಕಣಜ ತಂತ್ರಾಂಶದಲ್ಲಿ ಗಣಕೀಕರಣಗೊಂಡ ಆಸ್ತಿಗಳ ಪರಿಶೀಲನೆಗೆ ಸೂಚನೆ




**ಹಾಸನ:** ನಗರ ಸ್ಥಳೀಯ ಸಂಸ್ಥೆಗಳು ಇ–ಆಸ್ತಿ ತಂತ್ರಾಂಶದ ಮೂಲಕ ಆಸ್ತಿಗಳ ಡಿಜಿಟಲೀಕರಣ, ಆಸ್ತಿ ಮಾಲೀಕ ಹಕ್ಕು ವರ್ಗಾವಣೆ ಮತ್ತು ಡಿಜಿಟಲ್ ಸಹಿಯುಳ್ಳ ನಮೂನೆ–3/2 ರನ್ನು ಸೃಜಿಸುವ ನಿಟ್ಟಿನಲ್ಲಿ ಕ್ರಮಕೈಗೊಳ್ಳಲು ಜಿಲ್ಲಾಧಿಕಾರಿ ಸತ್ಯಭಾಮ ಅವರು ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಜಿಲ್ಲಾಧಿಕಾರಿಗಳ ಕಚೇರಿಯಲ್ಲಿಂದು ಇ–ಆಸ್ತಿ ತಂತ್ರಾಂಶದ ಮೂಲಕ ಆಸ್ತಿಗಳ ಡಿಜಿಟಲೀಕರಣ ಅನುಷ್ಠಾನ ಕುರಿತು ಸಭೆ ನಡೆಸಿ ಮಾತನಾಡಿ ಸರ್ಕಾರ ಇ–ಆಸ್ತಿ ತಂತ್ರಾಂಶವನ್ನು ಏಪ್ರಿಲ್ 2016 ರಲ್ಲಿ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಅನು?ಾನಗೊಳಿಸಿ ಬಳಕೆಯನ್ನು ಕಡ್ಡಾಯಗೊಳಿಸಿದೆ, ಈ ನಿಟ್ಟಿನಲ್ಲಿ ತಂತ್ರಾಂಶದಲ್ಲಿರುವ ಮಾಹಿತಿಯನ್ನು ಪ್ರಚುರ ಪಡಿಸಲು
ಫೆ.25 ರವರೆಗೆ ಮಹಾನಗರ ಪಾಲಿಕೆ /ನಗರ ಸ್ಥಳೀಯ ಸಂಸ್ಥೆಯ ವೆಬ್ ಸೈಟಿನಲ್ಲಿ ಪ್ರಚುರಪಡಿಸುವುದು ಮತ್ತು ಕಚೇರಿಯಲ್ಲಿ ಮುದ್ರಣ ಪ್ರತಿಯನ್ನು ವೀಕ್ಷಿಸಲು ಸಾರ್ವಜನಿಕರಿಗೆ ಲಭ್ಯವಾಗುವಂತೆ ಕ್ರಮಕೈಗೊಳ್ಳಲು ಅಧಿಕಾರಿಗಳಿಗೆ ಸೂಚಿಸಿದರಲ್ಲದೆ, ಈ ಬಗ್ಗೆ, ಪತ್ರಿಕಾ ಪ್ರಕಟಣೆ ನೀಡಿ, ಪ್ರಚುರ ಪಡಿಸಲಾದ ದತ್ತಾಂಶದ ಕುರಿತು ಸಾರ್ವಜನಿಕರು ತಮ್ಮ ಸ್ವತ್ತಿನ ಮಾಹಿತಿಯಲ್ಲಿ ತಿದ್ದುಪಡಿಗಳಿದ್ದಲ್ಲಿ ಫೆ.25 ರೊಳಗೆ ಸಂಬಂಧಿಸಿದ ನಗರ ಸ್ಥಳೀಯ ಸಂಸ್ಥೆಯ ಕಚೇರಿಗೆ ಸಲ್ಲಿಸುವಂತೆ ತಿಳಿಸುವುದು. ಈ ಕುರಿತು ಲಭ್ಯವಿರುವ ಮೊಬೈಲ್ ಸಂಖ್ಯೆಗಳಿಗೆ ಖಒಖ ಮೂಲಕ ಮಾಹಿತಿಯನ್ನು ರವಾನಿಸುವಂತೆ ತಿಳಿಸಿದರು.

ಸದರಿ ಮಾಹಿತಿ ಮನೆ ಮನೆಗೆ ತಲುಪುವಂತೆ ಮಾಡಲು ವ್ಯಾಪಕ ಪ್ರಚಾರ ಕಾರ್ಯವನ್ನು ಕೈಗೊಳ್ಳುವುದು, ಪ್ರಚುರಪಡಿಸಲಾದ ದತ್ತಾಂಶದ ಕುರಿತು ಸ್ವೀಕೃತವಾದ ತಿದ್ದುಪಡಿಗಳನ್ನು ಸ್ವೀಕೃತವಾದ 07 ದಿನಗಳ ಒಳಗಾಗಿ ಇತ್ಯರ್ಥ ಪಡಿಸಿ, ತಂತ್ರಾಂಶದಲ್ಲಿ ಕಾಲೋಚಿತಗೊಳಿಸುವಂತೆ ನಿರ್ದೇಶನ ನೀಡಿದರು.

ಮುಖ್ಯ ಇಂಟರ್ನೆಟ್ ವಿಫಲವಾದಲ್ಲಿ ಬ್ಯಾಕ್–ಅಪ್ ಇಂಟರ್ನೆಟ್ ಸಂಪರ್ಕವನ್ನು ಹೊಂದಿರುವಂತೆ ನೋಡಿಕೊಳ್ಳಲು ಅಧಿಕಾರಿಗಳಿಗೆ ಸೂಚಿಸಿದರು.

ಪ್ರತಿಯೊಬ್ಬ ನಾಗರಿಕ ತಮ್ಮ ಕರಡು ಇ ಆಸ್ತಿಯ ಪ್ರತಿಯನ್ನು ನೋಡಬಹುದು ಮತ್ತು ಡೌನ್ ಲೋಡ್ ಮಾಡಬಹುದು ಮತ್ತು ಕಖಆ/ಕಗಖಆ ಟಿಪ್ಪಣಿ ಮಾಡಿಕೊಳ್ಳಲು ಅವಕಾಶ ಕಲ್ಪಿಸುವದು.

ಇ–ಆಸ್ತಿ ಬಯಸುವ ಪ್ರತಿಯೊಬ್ಬ ನಾಗರಿಕನು ಸಲ್ಲಿಸಬೇಕಾದ ಮಾಹಿತಿ/ ದಾಖಲೆಗಳ ವಿವರವನ್ನು ತಿಳಿಸುವುದು, ಅಧಿಕೃತ ಸ್ವತ್ತಿನ ಮಾಲೀಕರು ಸಲ್ಲಿಸಬೇಕಾದ ದಾಖಲೆಗಳು, ಮತ್ತು ಅನಧಿಕೃತ ಸ್ವತ್ತಾಗಿದ್ದಲ್ಲಿ ಸಲ್ಲಿಸಬೇಕಾದ ದಾಖಲೆಗಳ ಮಾಹಿತಿಯ ವಿವರವನ್ನು ನೀಡುವಂತೆ ತಿಳಿಸಿದರು.

ಸಾರ್ವಜನಿಕರಿಗೆ ಮಾರ್ಗದರ್ಶನ ನೀಡಲು e-khata helpdesk ಅನ್ನು ಸ್ಥಾಪಿಸುವುದು (ಕಂಪ್ಯೂಟರ್ ಕೌಂಟರ್ ಹೊರತುಪಡಿಸಿ) ಪ್ರತಿಯೊಬ್ಬ ನಾಗರೀಕರ ಕರಡು ಇ–ಆಸ್ತಿ ಪ್ರತಿಯ ಪ್ರಿಂಟ್–ಔಟ್ ಅನ್ನು helpdesk ನಲ್ಲಿ ಇಟ್ಟುಕೊಳ್ಳುವುದು. ಇಂಡೀಕರಣದ ನಂತರ ನಮೂನೆ–2/3 ನೀಡಲು ಅಗತ್ಯವಿರುವ ದಾಖಲೆಗಳನ್ನು ಸಲ್ಲಿಸಿ. ನಿಗಧಿಪಡಿಸಿದ ಶುಲ್ಕ, ಪಾವತಿಸಿ, ಸ್ವತ್ತಿನ ಮಾಲೀಕರು DOWNLOAD ಮಾಡಿಕೊಳ್ಳಲು ಅವಕಾಶ ಕಲ್ಪಿಸುವಂತೆ ಹೇಳಿದರು.

ಸಭೆಯಲ್ಲಿ ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನ ನಿರ್ದೇಶಕರಾದ ಕೃಷ್ಣಮೂರ್ತಿ, ಹಾಸನ ನಗರಸಭೆಯ ಪೌರಾಯುಕ್ತರಾದ ರಮೇಶ್ ಹಾಗೂ ಮತ್ತಿತರರು ಉಪಸ್ಥಿತರಿದ್ದರು.

## ನಕ್ಷಾ ಯೋಜನೆ ಉದ್ಘಾಟನಾ ಸಮಾರಂಭ

**ಶಿವಮೊಗ್ಗ:** ಕಂದಾಯ ಇಲಾಖೆ, ಭೂಮಾಪನ, ಕಂದಾಯ ವ್ಯವಸ್ಥೆ ಮತ್ತು ಭೂದಾಖಲೆಗಳ ಇಲಾಖೆ ಹಾಗೂ ಪೌರಾಡಳಿತ ಇಲಾಖೆಯ ಸಹಯೋಗದೊಂದಿಗೆ ಫೆ.18 ರ ಬೆಳಿಗ್ಗೆ 11 ಗಂಟೆಗೆ ಸೊರಬ ತಾಲ್ಲೂಕಿನ ಆನವಟ್ಟಿ ಪಟ್ಟಣ ಪಂಚಾಯತ್ ಆವರಣದಲ್ಲಿ ನಕ್ಷಾ ಯೋಜನೆ ಉದ್ಘಾಟನಾ ಸಮಾರಂಭ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಮಧು ಬಂಗಾರಪ್ಪ ಯೋಜನೆಯ ಉದ್ಘಾಟನೆಯನ್ನು ನೆರವೇರಿಸಲಿದ್ದು, ಭದ್ರಾವತಿ ಶಾಸಕರು ಹಾಗೂ ಕರ್ನಾಟಕ ರಾಜ್ಯ ಗ್ರಾಮೀಣ ಮೂಲಭೂತ ಸೌಕರ್ಯಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಬಿ.ಕೆ.ಸಂಗಮೇಶ್ವರ, ಸಾಗರದ ಶಾಸಕರು ಹಾಗೂ ಕರ್ನಾಟಕ ರಾಜ್ಯ ಅರಣ್ಯ ಕೈಗಾರಿಕೆ ನಿಗಮ ಅಧ್ಯಕ್ಷರಾದ ಗೋಪಾಲಕೃಷ್ಣ ಬೇಳೂರು ಹಾಗೂ ಸಂಸದರಾದ ಬಿ.ವೈ.ರಾಘವೇಂದ್ರ ಇವರ ಗೌರವ ಉಪಸ್ಥಿತಿ ಇರಲಿದೆ.

## ಪ್ರಮಾಣ ಪತ್ರ ಆಡಚರಣೆಗಾಗಿ ಸಹಾಯವಾಣಿ

**ಹಾಸನ :** ಕರ್ನಾಟಕ ರಾಜ್ಯ ಗ್ರಾಮ ಆಡಳಿತ ಅಧಿಕಾರಿಗಳು ಬೇಡಿಕೆಗಳ ಈಡೇರಿಕೆಗಾಗಿ ಫೆ.10 ರಿಂದ ಕರ್ತವ್ಯಕ್ಕೆ ಹಾಜರಾಗದೇ ಮು?ರವನ್ನು ನೆಡೆಸುತ್ತಿದ್ದು. ಇದರಿಂದ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ/ ಉದ್ಯೋಗಾಕಾಂಕ್ಷಿಗಳಿಗೆ ವಿವಿಧ ಪರೀಕ್ಷೆಗಳಿಗೆ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಮತ್ತು ವಾಸಸ್ಥಳ ದೃಢೀಕರಣಗಳನ್ನು ಅರ್ಜಿ ಸಲ್ಲಿಸಿ ವಡೆಯಲು ಅರ್ಜಿದಾರರುಗಳಿಗೆ ಅಡಚಣೆ ಉಂಟಾಗಿರುವ ಹಿನ್ನಲೆಯಲ್ಲಿ ಪ್ರಸ್ತುತ ಗ್ರಾಮ ಆಡಳಿತ ಅಧಿಕಾರಿಗಳ ಲಾಗಿನ್‌ನಲ್ಲಿ ಕ್ಷೇತ್ರ ಪರಿಶೀಲನೆಗೆ ಬಾಕಿ ಇರುವ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಮತ್ತು ವಾಸಸ್ಥಳ ದೃಢೀಕರಣ ಅರ್ಜಿಗಳನ್ನು ಹಾಗೂ ಮುಂದೆ ಸ್ವೀಕೃತವಾಗುವ ಹೊಸ ಅರ್ಜಿಗಳನ್ನು ರಾಜಸ್ವ ನಿರೀಕ್ಷಕರುಗಳು ಕ್ಷೇತ್ರ ತಪಾಸಣೆ ನಡೆಸಿ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಮತ್ತು ವಾಸಸ್ಥಳ ದೃಢೀಕರಣ ಪತ್ರಗಳನ್ನು ವಿತರಿಸಲು ಜಿಲ್ಲೆಯ ಎಲ್ಲಾ ತಹಸೀಲ್ದಾರ್ ರವರಿಗೆ ಸೂಚನೆಯನ್ನು ನೀಡಲಾಗಿರುತ್ತದೆ.ಸಾರ್ವಜನಿಕರು ಆಯಾ ತಾಲ್ಲೂಕಿನ ತಹಸೀಲ್ದಾರ್ ರವರನ್ನು ಸಂಪರ್ಕಿಸಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಮತ್ತು ವಾಸಸ್ಥಳ ದೃಢೀಕರಣಗಳನ್ನು ಪಡೆಯತಕ್ಕದ್ದು, ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಮತ್ತು ವಾಸಸ್ಥಳ ದೃಢೀಕರಣ ಪತ್ರಗಳನ್ನು ಪಡೆಯಲು ಅನಾನುಕೂಲತೆ ಉಂಟಾದಲ್ಲಿ ಅಥವಾ ಯಾವುದೇ ಅಡಚಣೆಯಾದಲ್ಲಿ ಸಹಾಯವಾಣಿ ಸಂಖ್ಯೆ 08172–261111 ಅಥವಾ 9483591077 ನ್ನು ಸಂಪರ್ಕಿಸಲು ಜಿಲ್ಲಾಧಿಕಾರಿ ತಿಳಿಸಿದ್ದಾರೆ.

## ಆಕ್ಷೇಪಣೆ ಆಹ್ವಾನ

**ಶಿವಮೊಗ್ಗ:** ರಾಷ್ಟ್ರೀಯ ಆರೋಗ್ಯ ಅಭಿಯಾನ ಪಿಎಂ–ಅಭಿಮ್ ಸ್ಪರ್ಶ್ ಯೋಜನೆಯಡಿ ಗುತ್ತಿಗೆ ಆಧಾರದ ಮೇಲೆ ಖಾಲಿ ಇರುವ ವೈದ್ಯಕೀಯ, ಅರೆ ವೈದ್ಯಕೀಯ ಮತ್ತು ಶುಶ್ರೂಷಕ ಹುದ್ದೆಗಳ ಭರ್ತಿಗೆ ಮೂಲ ದಾಖಲಾತಿ ಪರಿಶೀಲನೆ ನಡೆಸಿ, ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲಾಗಿದೆ. ಅಭ್ಯರ್ಥಿಗಳ ಆಯ್ಕೆ ಪಟ್ಟಿಯನ್ನು ರೋಸ್ಟರ್ ಕಂ ಮೆರಿಟ್ ಆಧಾರದಲ್ಲಿ ಪ್ರಕಟಿಸಿದ್ದು, ಇದಕ್ಕೆ ಸಂಬಂಧಿಸಿದಂತೆ ಆಕ್ಷೇಪಣೆಗಳು ಇದ್ದಲ್ಲಿ ಲಿಖಿತ ರೂಪದಲ್ಲಿ ದಿ: 17–02–2025 ರಿಂದ 7 ದಿನಗಳ ಒಳಗೆ ದಿ: 24–02–2025 ರ ಸಂಜೆ 5.30 ರೊಳಗೆ ಜಿಲ್ಲಾ ಆರ್ಸಿಹೆಚ್ ಅಧಿಕಾರಿಗಳು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ, ಎನ್ಯುಹೆಚ್ಎಂ ವಿಭಾಗಕ್ಕೆ ಸಲ್ಲಿಸುವುದು.

## ಅರ್ಜಿ ಆಹ್ವಾನ

**ಚಿಕ್ಕಮಗಳೂರು:** 2024–25ನೇ ಸಾಲಿನ ಆತ್ಮ ಯೋಜನೆಯಡಿ ಕೃಷಿ ಇಲಾಖೆ ವತಿಯಿಂದ ಚಿಕ್ಕಮಗಳೂರು ತಾಲ್ಲೂಕಿನಲ್ಲಿ ಕೃಷಿಯ ವಿವಿಧ ಕ್ಷೇತ್ರಗಳಲ್ಲಿ ಪ್ರತಿನಿಧಿಸುವ ಹಾಗೂ ಸಮಗ್ರ ಕೃಷಿ ಪದ್ಧತಿ ಅಳವಡಿಸಿಕೊಂಡಿರುವ ಅತ್ಯುತ್ತಮ ರೈತರಿಗೆ ತಾಲ್ಲೂಕು ಮಟ್ಟದ ರೈತ ಪ್ರಶಸ್ತಿಗಾಗಿ ಅರ್ಜಿ ಆಹ್ವಾನಿಸಲಾಗಿದೆಅರ್ಜಿಯನ್ನು ತಮ್ಮ ಹೋಬಳಿಯ ರೈತ ಸಂಪರ್ಕ ಕೇಂದ್ರದ ಕಛೇರಿಯಿಂದ ಪಡೆದು ಮಾರ್ಚ್ 01 ರೊಳಗೆ ಸಲ್ಲಿಸಬಹುದಾಗಿದೆಹೆಚ್ಚಿನ ಮಾಹಿತಿಗಾಗಿ ಸಹಾಯಕ ಕೃಷಿ ನಿರ್ದೇಶಕರು, ಶ್ರೀಮತಿ ಸುಜಾತ .ಸಿ (ದೂ.ಸಂ. 8277930894) ಮತ್ತು ತಾಲ್ಲೂಕು ತಾಂತ್ರಿಕ ವ್ಯವಸ್ಥಾಪಕರಾದ ಪೂಜಾ (ದೂ.ಸಂ. 7975141481) ಇವರನ್ನು ಹಾಗೂ ಹತ್ತಿರದ ರೈತ ಸಂಪರ್ಕ ಕೇಂದ್ರವನ್ನು ಸಂಪರ್ಕಿಸಬಹುದಾಗಿದೆ ಎಂದು ಸಹಾಯಕ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಸತಿ ಶಾಲೆಗಳಲ್ಲಿ 6 ನೇ ತರಗತಿ ಪ್ರವೇಶ ಪರೀಕ್ಷೆ; ಪಾರದರ್ಶಕ ಪರೀಕ್ಷೆ ನಡೆಸಲು ಸೂಚನೆ

**ದಾವಣಗೆರೆ :**ವಸತಿ ಶಿಕ್ಷಣ ಸಂಸ್ಥೆಗಳಿಂದ ನಡೆಸಲಾಗುತ್ತಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆ ಸೇರಿದಂತೆ ವಿವಿಧ ವಸತಿ ಶಾಲೆಗಳಲ್ಲಿ 2025–26 ನೇ ಸಾಲಿಗೆ 6 ನೇ ತರಗತಿ ಪ್ರವೇಶಕ್ಕೆ ಫೆಬ್ರವರಿ 15 ರಂದು ಜಿಲ್ಲೆಯ 15 ಕೇಂದ್ರಗಳಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಪ್ರವೇಶ ಪರೀಕ್ಷೆ ನಡೆಯಲಿದೆ ಎಂದು ಅಪರ ಜಿಲ್ಲಾಧಿಕಾರಿ ಪಿ.ಎನ್ ಲೋಕೇಶ್ ತಿಳಿಸಿದರು.

ಶುಕ್ರವಾರ (ಫೆ.14)ರಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪರೀಕ್ಷಾ ಪೂರ್ವ ಸಿದ್ದತಾ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. 6ನೇ ತರಗತಿ ಪ್ರವೇಶ ಪಡೆಯಲು ಪ್ರಸಕ್ತ ಸಾಲಿನಲ್ಲಿ 5 ನೇ ತರಗತಿ ಓದುತ್ತಿರುವ 5368 ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಿದ್ದು ಇವರು ಪ್ರವೇಶ ಪರೀಕ್ಷೆ ಬರೆಯಲಿದ್ದಾರೆ ಎಂದರು.

ದಾವಣಗೆರೆ–2, ಹರಿಹರ–3, ಹೊನ್ನಾಳಿ–3, ನ್ಯಾಮತಿ–1, ಚನ್ನಗಿರಿ–3, ಜಗಳೂರು–3 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದೆ.

ಕೇಂದ್ರಗಳಲ್ಲಿ ಆಸನದ ವ್ಯವಸ್ಥೆ, ಕುಡಿಯುವ ನೀರು, ಗಾಳಿ, ಬೆಳಕು ಇರುವಂತೆ ಮೂಲಭೂತ ಸೌಕರ್ಯ ಕಲ್ಪಿಸಬೇಕು. ಫೆಬ್ರವರಿ 15 ರಂದು ಮಧ್ಯಾಹ್ನ 2.30 ರಿಂದ 4.30ರವರೆಗೆ 100 ಅಂಕಗಳಿಗೆ ಪರೀಕ್ಷೆ ನಡೆಯಲಿದೆ ಎಂದರು. ಪ್ರವೇಶ ಪರೀಕ್ಷೆಯನ್ನು ವ್ಯವಸ್ಥಿತ ರೀತಿಯಲ್ಲಿ ಯಾವುದೇ ಗೊಂದಲಗಳಿಗೆ ಅವಕಾಶ ಮಾಡಿಕೊಡದಂತೆ, ಪರೀಕ್ಷಾ ಪಾವಿತ್ರ್ಯತೆಯನ್ನು ಕಾಪಾಡಿಕೊಂಡು ನಡೆಸಬೇಕು. ಪರೀಕ್ಷಾ ಕೇಂದ್ರಗಳಿಗೆ ನಿಗದಿತ ವೇಳೆಯೊಳಗೆ ಆಯಾ ಮಾರ್ಗಾಧಿಕಾರಿಗಳು ಪ್ರಶ್ನೆಪತ್ರಿಕೆಯನ್ನು ತಲುಪಿಸಬೇಕು. ಪರೀಕ್ಷೆ ಬಳಿಕ ಎಲ್ಲ ಸುರಕ್ಷತಾ ಕ್ರಮಗಳನ್ನು ಕೈಗೊಂಡು, ನಿಗದಿತ ಸ್ಥಳಕ್ಕೆ ಉತ್ತರ ಪತ್ರಿಕೆಗಳನ್ನು ಮೌಲ್ಯಮಾಪನಕ್ಕಾಗಿ ತಲುಪಿಸುವ ಕಾರ್ಯವನ್ನು ಕೈಗೊಳ್ಳಬೇಕು. ಈಗಾಗಲೆ ಪರೀಕ್ಷಾ ದಿನದಂದು ಪರೀಕ್ಷಾ ಕೇಂದ್ರಗಳ ಸುತ್ತ ಮುತ್ತ 200 ಮೀ. ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಿದ್ದು, ಪೊಲೀಸ್ ಇಲಾಖೆಯವರು ಪರೀಕ್ಷಾ ದಿನದಂದು ಕೇಂದ್ರಗಳಿಗೆ ಸೂಕ್ತ ಬಂದೋಬಸ್ತ್ ಕೈಗೊಳ್ಳಬೇಕು. ಪರೀಕ್ಷಾ ಕೇಂದ್ರದೊಳಗೆ ಯಾವುದೇ ಮೊಬೈಲ್, ಎಲೆಕ್ಟ್ರಾನಿಕ್ಸ್ ಉಪಕರಣಗಳನ್ನು ಬಳಸದಂತೆ ಸೂಕ್ತ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು, ಹಾಗೂ ವಿದ್ಯಾರ್ಥಿಗಳು ಪರೀಕ್ಷಾ ಕೇಂದ್ರ ಪ್ರವೇಶ ಸಂದರ್ಭದಲ್ಲಿ ಸೂಕ್ತ ರೀತಿಯಲ್ಲಿ ತಪಾಸಣೆಯನ್ನು ಕೈಗೊಳ್ಳಬೇಕು ಎಂದು ಸೂಚನೆ ನೀಡಿದರು.

ಕೊಠಡಿ ಮೇಲ್ವಿಚಾರಕರು ಅಭ್ಯರ್ಥಿಗಳಿಗೆ ಓಎಂಆರ್ ಉತ್ತರ ಪತ್ರಿಕೆಯನ್ನು ನೀಡುವ ಸಂದರ್ಭದಲ್ಲಿ ಅಭ್ಯರ್ಥಿಯ ನೋಂದಣಿ ಸಂಖ್ಯೆಯನ್ನು ಓಎಂಆರ್ ಉತ್ತರ ಪತ್ರಿಕೆಯಲ್ಲಿ ಸ್ಪಷ್ಟವಾಗಿ ಬರೆದು ಸಂಬಂಧಿಸಿದ ವೃತ್ತಗಳನ್ನು ಶೇಡ್ ಮಾಡಿ ನಂತರ ಅಭ್ಯರ್ಥಿಗಳಿಗೆ ನೀಡಬೇಕು.

ಸಭೆಯಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಕರಿಸಿದ್ದಪ್ಪ ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

## ಐಟಿ ಮಹಿಳೆಗೆ ಬಿತ್ತು ದಂಡ

**ಬೆಂಗಳೂರು:** ಕಾರು ಚಾಲನೆ ವೇಳೆ ಲ್ಯಾಪ್ಟಾಪ್ನಲ್ಲಿ ಕೆಲಸ ಮಾಡುತ್ತಿದ್ದ ಮಹಿಳೆಯೊಬ್ಬರಿಗೆ ಆರ್ಟಿ ನಗರ ಸಂಚಾರ ಪೊಲೀಸರು ದಂಡ ವಿಧಿಸಿದ್ದಾರೆ. ಆರ್ಟಿ ನಗರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಮಹಿಳೆಯೊಬ್ಬರು ಕಾರು ಚಾಲನೆ ಮಾಡುವಾಗ ಲ್ಯಾಪ್ಟಾಪ್ನಲ್ಲಿ ಕೆಲಸ ಮಾಡುತ್ತಿರುವ ವಿಡಿಯೋವೊಂದು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿತ್ತು. ಮಹಿಳಾ ಚಾಲನೆ ಮಾಡುತ್ತಿದ್ದ ಕಾರಿನ ನಂಬರ್ ಪ್ಲೇಟ್ ವಿಡಿಯೋದಲ್ಲಿ ಪತ್ತೆಯಾಗಿದ್ದು, ಇದನ್ನು ಪರಿಶೀಲಿಸಿ ಪೊಲೀಸರು ಮಹಿಳೆಯನ್ನು ಪತ್ತೆ ಮಾಡಿದ್ದಾರೆ.ಬುಧವಾರ ಬೆಳಿಗ್ಗೆ, ಅತಿವೇಗ ಮತ್ತು ನಿರ್ಲಕ್ಷ್ಯದ ಚಾಲನೆಗಾಗಿ ಮಹಿಳೆಗೆ 1,000 ರೂ. ದಂಡ ವಿಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.ಪ್ರಕರಣ ಸಂಬಂಧ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಟ್ವೀಟ್ ಮಾಡಿರುವ ಉತ್ತರ ವಿಭಾಗದ ಡಿಸಿಪಿ (ಸಂಚಾರ)ಮನೆಯಿಂದಲೇ ಕೆಲಸ ಮಾಡಿ, ಚಾಲನೆ ವೇಳೆ ನಿಮ್ಮ ಕಾರಿನಿಂದಲ್ಲ ಎಂದು ಹೇಳಿದ್ದಾರೆ. ಅಲ್ಲದೆ, ಮಹಿಳೆಯ ವಿಡಿಯೋ ಹಾಗೂ ದಂಡದ ಫೋಟೋವನ್ನು ಪೋಸ್ಟ್ ಮಾಡಿದ್ದಾರೆ.

## ಮಾರ್ಚ್ 8ರಂದು ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ರಾಷ್ಟ್ರೀಯ ಲೋಕ ಅದಾಲತ್

(1ನೇ ಪುಟದಿಂದ)

ಲೋಕ ಅದಾಲತ್‌ನ ಸದುಪಯೋಗ ಪಡಿಸಿಕೊಳ್ಳಬೇಕೆಂದರು.

ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್. ಹೆಚ್.ಅರುಣ ಕುಮಾರ ಮಾತನಾಡಿ, ದಾವಣಗೆರೆ ಜಿಲ್ಲೆಯ ವಕೀಲರು ತಮ್ಮ ಬಳಿ ಬರುವ ಕಕ್ಷಿಗಾರರಿಗೆ ಸರ್ವತೋಮುಖ ಅಭಿವೃದ್ಧಿಗಾಗಿ ಪ್ರಯತ್ನ ಮಾಡುತ್ತಾ ಬಂದಿದ್ದು, ಈ ಬಗ್ಗೆ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದಿಂದ ಪ್ರಶಂಶನೀಯ ಪತ್ರಗಳು ಕೂಡ ಬಂದಿವೆ ಎಂದು ನೆನಪಿಸಿದರು. ಸಮಾಜಕ್ಕೆ ಒಳ್ಳೆಯ ಸಂದೇಶಗಳನ್ನು ಕೊಡುವ ಮತ್ತು ಸಾರ್ವಜನಿಕರಿಗೆ ಉಪಯೋಗವಾಗುವ ಲೋಕ್ ಅದಾಲತ್ ಮತ್ತು ಕಾನೂನು ಸೇವೆಗಳ ಪ್ರಕ್ರಿಯೆಗಳಲ್ಲಿ ವಕೀಲರು ಯಾವುದೇ ಹಿಂಜರಿಕೆ ಇಲ್ಲದೆ ಭಾಗವಹಿಸುತ್ತಾರೆಂದು ಎಲ್ಲಾ ವಕೀಲರ ಪರವಾಗಿ ಮಾತನಾಡಿದರು.

ಸಭೆಯಲ್ಲಿ ದಾವಣಗೆರೆ ಘಟಕದ ನ್ಯಾಯಾಧೀಶರು, ವಕೀಲ ಸಂಘದ ಎಲ್ಲಾ ಪದಾಧಿಕಾರಿಗಳು, ಹಿರಿಯ ಮತ್ತು ಕಿರಿಯ ಹಾಗೂ ಮಹಿಳಾ ನ್ಯಾಯವಾದಿಗಳು ಭಾಗವಹಿಸಿದ್ದರು. ಕಾರ್ಯದರ್ಶಿ ಎಸ್.ಬಸವರಾಜ್ ನಿರೂಪಿಸಿದರೆ, ಉಪಾಧ್ಯಕ್ಷ ಜಿ.ಕೆ.ಬಸವರಾಜ್



# ಭಕ್ತ ಸಾಗರದ ನಡುವೆ ಶ್ರೀಗಳ ಬೆಳ್ಳಿ ಪಲ್ಲಕ್ಕಿ ಉತ್ಸವ

**ಸಿರಿಗೆರೆ:** ಭರಮಸಾಗರದಲ್ಲಿ ಬುಧವಾರ ನಡೆದ ತರಳಬಾಳು ಜಗದ್ಗುರು ಶಿವಮೂರ್ತಿ ಶಿವಾಚಾರ್ಯ ಸ್ವಾಮೀಜಿ ಬೆಳ್ಳಿ ಪಲ್ಲಕ್ಕಿ ಮೆರವಣಿಗೆ ಭಕ್ತ ಸಾಗರದ ನಡುವೆ ನೆರವೇರಿತು. ನಾಡಿನ ಹಲವು ಕಡೆಯಿಂದ ಬಂದಿದ್ದ ಅಸಂಖ್ಯ ಜನರು ಬೆಳ್ಳಿಪಲ್ಲಕ್ಕಿ ಮಹೋತ್ಸವವನ್ನು ಕಣ್ತುಂ ಬಿಕೊಂಡರು. ಬೆಳ್ಳಿ ಪಲ್ಲಕ್ಕಿಯಿಂದಲೇ ಆಶೀರ್ವಾದ ನೀಡುತ್ತಿದ್ದ ಸ್ವಾಮೀಜಿಯನ್ನು ಕಂಡು ಭಕ್ತರು ಪುಳಕಿತರಾದರು.

ಸಾಮಿಲ್ ಶಿವಣ್ಣನವರ ಮನೆಯ ಸಮೀಪದಿಂದ ಮೆರವಣಿಗೆ ಮಧ್ಯಾಹ್ನ 3 ಗಂಟೆಗೆ ಆರಂಭವಾಯಿತು. ಶೃಂಗರಿಸಿದ್ದ ವಾಹನದ ಮೇಲೆ ಇರಿಸಿದ್ದ ಬೆಳ್ಳಿ ಪಲ್ಲಕ್ಕಿಗೆ ಪೂಜೆ ಸಲ್ಲಿಸಿ ಶ್ರೀಗಳು ಆಸೀನರಾದರು. ಪಲ್ಲಕ್ಕಿ ಏರುತ್ತಿದ್ದಂತೆ ಭಕ್ತರ ಜಯಘೋಷ ಮೊಳಗಿತು. ಶಿವ ಧ್ವಜಗಳು ನಭೋ ಮಂಡಲದಲ್ಲಿ ರಾಜಾಜಿಸಿ ಮೆರವಣಿಗೆ ಮೆರಗು ತಂದವು. ಮಠದ ಸಾಂಪ್ರದಾಯಿಕ ಬಿರುದಾವಳಿಗಳನ್ನು ಹಿಡಿದ ತಂಡ ಮೆರವಣಿಗೆಯ ಉದ್ದಕ್ಕೂ ಸಾಗಿತು.

ಮುಖ್ಯರಸ್ತೆಯ ಎರಡೂ ಬದಿಗಳಲ್ಲಿ ಅಸಂಖ್ಯ ಭಕ್ತರು ಜಮಾಯಿಸಿದ್ದರು. ತರಳಬಾಳು, ತರಳಬಾಳು ಶ್ರೀಗೆ ಜೈಮುಂತಾದ ಜಯಕಾರಗಳಮೂಲಕ ಶ್ರೀಗಳಿಗೆ ಜಯಘೋಷ ಹಾಕಿದರು. ಕುಂಭಗಳನ್ನು



ಹೊತ್ತ ಮಹಿಳೆಯರು, ಜಾನಪದ ಕಲಾತಂಡಗಳು ಸಹ ಮೆರವಣಿಗೆಯಲ್ಲಿ ಸಾಗಿದವು.

ಮೆರವಣಿಗೆಗೆಯಲ್ಲಿ ಕಡೂರಿನ ಪುರುಷ ಮತ್ತು ಮಹಿಳಾ ವೀರಗಾಸೆ, ಆಂಜನೇಯ ಗೊಂಬೆ, ಶಿವ ಗೊಂಬೆ, ಬೆಳ್ತಂಗಡಿಯ ನವಿಲು ಕುಣಿತ, ಗಾರುಡಿ ಗೊಂಬೆ, ಚೀಳಂಗಿಯ ಕಹಳೆ, ಹುಲ್ಲೇ ಹಾಳ್ನ ಪುರುಷ ಡೊಳ್ಳು, ಕೊಡಗವಳ್ಳಿಯ ನಾಸಿಕ್ ಡೋಲು, ಕಹಳೆ ಮತ್ತು ಛತ್ರಿ ಚಂಡೆವಾದ್ಯ, ಹುಲ್ಲೂರಿನ ಖಾಸಾ ಬೇಡರ ಪಡೆ, ಮಹಿಳಾ ತಮಟೆ ವಾದನ ಮೆರವಣಿಗೆಗೆ ರಂಗು ತುಂಬಿತು.

ಮೈಸೂರಿನ ಪೂಜಾ ಕುಣಿತ, ಸಾಗರದ ಮಹಿಳಾ ಡೊಳ್ಳು ತ್ರಾಶ್ವಾದ್ಯ, ಗೊರವರ ಕುಣಿತ, ತ್ರಾಶ್, ದಾವಣಗೆರೆಯ ನಂದಿಧ್ವಜ ಕುಣಿತ, ಹಂಪನೂರಿನ ನಾಸಿಕ್ಡೋಲು, ಹೊಸದುರ್ಗದ ವೀರಗಾಸೆ, ಕೊಡಗವಳ್ಳಿಯ ಅರಸನಗಟ್ಟದ ಅರೆವಾದ್ಯ, ಕೊಳಹಾಳ್ ಭಜನೆ, ವೀರಗಾಸೆ ಸೇರಿದಂತೆ ಇಪ್ಪತ್ತು ಹೆಚ್ಚು ಜಾನಪದ ಕಲಾತಂಡಗಳು ಮೆರವಣಿಗೆಯಲ್ಲಿ ಪ್ರದರ್ಶನ ನೀಡಿ ನೋಡುಗರ ಕಣ್ತನ ಸೆಳೆದವು. ನಾಡಿನ ಹಲವು ಭಾಗಗಳಿಂದ ಭಕ್ತ ಸಮೂಹ ಮೆರವಣಿಗೆಯಲ್ಲಿ ಸಾಗಿದ ಶ್ರೀಗಳಿಗೆ ಭಕ್ತಿಯ ನಮನ ಸಲ್ಲಿಸಿ ಪುನೀತರಾದರು.

# ಯಶಸ್ಸು ಸಾಧಕನ ಸ್ವತ್ತಾಗಲಿ: ಸ್ವಾಮೀಜಿ



**ಹೊನ್ನಾಳಿ:** ಭಕ್ತಿ,ಪ್ರೀತಿಯಿಂದ ಮಾಡುವ ಎಲ್ಲಾ ಕೆಲಸಗಳು ದೇವರಿಗೆ ಸಮರ್ಪಿತವಾಗುತ್ತವೆ ಇದೇ ರೀತಿ ನಿರಂತರ ಸಾಧನೆ, ಯಶಸ್ಸುಗಳು ಕೂಡ ಸಾಧಕನ ಸ್ವತ್ತಾಗುತ್ತವೆಎಂದು ಕುಪ್ಪೆಲ್ಲೂರು ಸಿದ್ಧಾರೋಢ ಮಠದ ಪ್ರಿಯಾನಂದ ಸ್ವಾಮೀಜಿ ಹೇಳಿದರು.

ತಾಲೂಕಿನ ಯಕ್ಕನಹಳ್ಳಿ ಗ್ರಾಮದಲ್ಲಿ ಭರತ ಹುಣ್ಣುಮೆಯ ದಿನ ಗ್ರಾಮದ ಶ್ರೀ ಮಾಯಾಂಭಿಕಾದೇವಿ ದೇವಸ್ಥಾನದ ಜೀರ್ಣೋದ್ಧಾರ ಸಮಿತಿ ವತಿಯಿಂದ ಹಮ್ಮಿಕೊಂಡಿದ್ದ 9ನೇ ವರ್ಷದ ಭರತ ಹುಣ್ಣಿಮೆ ಶ್ರೀ ದೇವಿಯ ಅಡ್ಡಪಲ್ಲಕ್ಕಿ ಮಹೋತ್ಸವ ಹಾಗೂ ಹಾಲುಮತ ಸಮಾಜದ ನಿವೃತ್ತ ಸರ್ಕಾರಿ ನೌಕರರಿಗೆ ಸನ್ಮಾನ ಕಾರ್ಯಕ್ರಮದ ಸಾನ್ನಿಧ್ಯವಹಿಸಿ ಮಾತನಾಡಿದರು .ಶ್ರೀಮಾಯಾಂಭಿಕಾ ದೇವಿ ಕೂಡ ಶಕ್ತಿದೇವತೆಯ ಒಂದು ರೂಪವಾಗಿದ್ದು, ನಂಬಿದ ಭಕ್ತರನ್ನು ಮಾತೃಸ್ವರೂಪಿಣೆಯಾಗಿ ಆಶೀರ್ವದಿಸುವ ದೇವಿಯಾಗಿದ್ದು ಇಂತಹ ದೇವಿಯ ಉತ್ಸವವನ್ನು ಗ್ರಾಮದಲ್ಲಿ ಎಲ್ಲರೂ ಒಗ್ಗಟ್ಟಾಗಿ ಭಕ್ತಿ, ಪ್ರೀತಿಯಿಂದ ಆಚರಿಸುತ್ತಿರುವುದು ಯಕ್ಕನಹಳ್ಳಿ ಗ್ರಾಮಜನರ ಸಂಸ್ಕಾರಕ್ಕೆ ಉದಾಹರಣೆಯಾಗಿದೆ ಎಂದರು.

ಮುಖ್ಯಅತಿಥಿಯಾಗಿ ಭಾಗವಹಿಸಿದ್ದ ಕಾಂಗ್ರೇಸ್ ಜಿಲ್ಲಾಧ್ಯಕ್ಷ ಎಚ್.ಬಿ.ಮಂಜಪ್ಪ ಅವರು ಮಾತನಾಡಿ, ಶ್ರೀಮಾಯಾಂಭಿಕಾದೇವಿ ಸಮುದಾಯ ಭವನಕ್ಕೆ ಶಾಸಕರೊಂದಿಗೆ ಮಾತನಾಡಿ ಅನುದಾನ ಮಂಜೂರು ಮಾಡಿಸಿಕೊಡುವ ಬಗ್ಗೆ ಪ್ರಮಾಣಿಕ ಪ್ರಯತ್ನ ಮಾಡುವುದಾಗಿ ಹೇಳಿದರು.

ಇದೇ ಸಂದರ್ಭದಲ್ಲಿ ಗ್ರಾಮದ ಹಾಗೂ ಕುರುಬ ಸಮಾಜದ ಹಲವಾರು ಜನ ನಿವೃತ್ತ ನೌಕರರರಿಗೆ ಅದ್ದೋರಿಯಾಗಿ ಸನ್ಮಾನಿಸಲಾಯಿತು, ಸನ್ಮಾನಿತರ ಪರವಾಗಿ ಮಾತನಾಡಿದ ಎಂ.ಜಯಪ್ಪ ಬೆಂಗಳೂರು ಅವರು ಒಂದು ಸಮಾಜ ಅಥವಾ ವರ್ಗ ಅಭಿವೃದ್ಧಿಹೊಂದಬೇಕಾದರೆ ಮೂಲಭೂತವಾಗಿ ಉತ್ತಮ ಶಿಕ್ಷಣವನ್ನು ಪಡೆಯಬೇಕಾಗುತ್ತದೆ, ಯಕ್ಕನಹಳ್ಳಿ ಗ್ರಾಮದ ಜನತೆ ಹಿಂದಿನಿಂದಲೂ ತಮ್ಮಮಕ್ಕಳ ಶಿಕ್ಷಣದ ಬಗ್ಗೆ ಎಷ್ಟೇ ಬಡತನವಿದ್ದರೂ ಕೂಡ ಹೆಚ್ಚಿನ ಒಲವು ತೋರಿದ ಪರಿಣಾಮ ಇಂದು ಈ ಗ್ರಾಮದ ಬಹುಪಾಲು ಜನ ನಾಡಿನ ವಿವಿಧಡೆಗಳಲ್ಲಿ ನೌಕರರಾಗಿ ಕೆಲಸ ಮಾಡುತ್ತಿರುವುದು ವಿಶೇಷ ಎಂದರು. ಸನ್ಮಾನಿತರಾದ ತುಮಕೂರು ಜಯಪ್ಪ ಅವರು ಮಾತನಾಡಿ, ಸಂತೆಬೆನ್ನೂರು ಗ್ರಾಮದ ವಾಲಿ ಬಾಲ್ ಹಾಗೂ ಉತ್ತಮ ಶಿಕ್ಷಣದಿಂದಾಗಿ ಗುರುತಿಸಿಕೊಂಡಿದ್ದು ಅಲ್ಲಿ ಸೇವೆ ಮಾಡುವ ಸಂದರ್ಭದಲ್ಲಿ ಅನೇಕ ಉತ್ತಮ ವಾಲಿಬಾಲ್ ಆಟಗಾರರನ್ನು ತಯಾರುಮಾಡಿದ ಬಗ್ಗೆ ತಮಗೆ ಹೆಮ್ಮೆ ಇದ್ದು ಬಹುಪಾಲು ಜನ ಇಂದು ವಿವಿಧ ಇಲಾಖೆಗಳಲ್ಲಿ ಸರ್ಕಾರಿ ನೌಕರರಾಗಿದ್ದಾರೆ ದೈಹಿಕ ಮತ್ತು ಮಾನಸಿಕ ಆರೋಗ್ಯ ಕಾಪಾಡಿಕೊಂಡು ಹೋಗಲು ಕ್ರೀಡೆ ಅತೀ ಮುಖ್ಯ ಎಂದು ಹೇಳಿದರು.ವೃತ್ತ ನೌಕರರುಗಳಾದ ಕೆ.ಬಸಪ್ಪ, ಭಾಗ್ಯ ಡಿ.ಆರ್. ಬೀರಲಿಂಗಪ್ಪ,ಕೆ.ಎಸ್.ಮಹೇಶ್ವರಪ್ಪ, ಮಹಾಲಿಂಗಪ್ಪ, ಮಹೇಶ್ವರಪ್ಪ ಸಾರಥಿ,ಬಿ.ಐ.ಸಣ್ಣಸಿದ್ದಪ್ಪ, ಕೆ.ಬಸಪ್ಪ,ಸಿ.ಪಿ.ಬಸವರಾಜಪ್ಪ, ಚಂದ್ರಪ್ಪ, ಜಯಪ್ಪಮಾಕನೂರು,ರುದ್ರಪ್ಪ, ಕೆ.ಜಿ.ಬಸವರಾಜಪ್ಪ, ಯಲ್ಲಪ್ಪ, ಮಂಜಪ್ಪ, ಹಳದಪ್ಪ, ರಾಜಪ್ಪ,ಕೆ.ಕತಜಿ. ರೇವಣಸಿದ್ದಪ್ಪ ಹಾಲೆಕಲ್ಲು, ಹಾಲು ಉತ್ಪಾದಕರ ಸಹಕಾರ ಸಂಘ ಯಕ್ಕನಹಳ್ಳಿ ನಿರ್ದೇಶಕರಾದ ಎಸ್. ಶಿವಪ್ರಕಾಶ್,ಮತ್ತು ಕೆ.ಎಸ್.ಶಿವಪ್ರಕಾಸ್ ಹಾಗೂ ಇತರರನ್ನು ಸನ್ಮಾನಿಸಲಾಯಿತು.

ಶ್ರೀ ಮಾಯಾಂಭಿಕದೇವಿ ದೇವಸ್ಥಾನದ ಜೀರ್ಣೋದ್ಧಾರ ಸಮಿತಿ ಅಧ್ಯಕ್ಷ ಹಂಚಿನಮನೆ ರುದ್ರಪ್ಪ ಅವರು ಅಧ್ಯಕ್ಷತೆವಹಿಸಿ ಮಾತನಾಡಿದರು. ಡಿ.ಸಿ.ಸಿ.ಬ್ಯಾಂಕ್ ಮಾಜಿ ಅದ್ಯಕ್ಷ ಕೆಂಗಲಹಳ್ಳಿ ಷಣ್ಮುಖಪ್ಪ,ತಾ.ಕುರುಬ ಸಮಾಜದ ಗೌರವಾಧ್ಯಕ್ಷ ಮರುಳಸಿದ್ದಪ್ಪ, ಬಿ.ಸಿ.ಎಂ. ಉಪಾಧ್ಯಕ್ಷ ಎಚ್.ಎ.ಉಮಾಪತಿ,ಸೇರಿದಂತೆ ಅನೇಕ ಮುಖಂಡರು ಭಾಗವಹಿಸಿದ್ದರು.

ಗ್ರಾಮದ ಯುವಮುಖಂಡ ಅಶೋಕ್ ಉದ್ದಜ್ಜಾರ ಪ್ರಸ್ತಾವಿಕ ಭಾಷಣ ಮಾಡಿದರು.ಶಿಕ್ಷಕ ಮಂಜುನಾಥ್ ನಿರೂಪಿಸಿದರು. ದೇವಸ್ಥಾನ ಸಮಿತಿ ಮಾಜಿ ಅಧ್ಯಕ್ಷದೊಡ್ಡರಂಗಪ್ಪ,ಸತೀಶ್ ಉದ್ದಜ್ಜಾರ, ವೈ.ಕೆ.ದಯಾನಂದ್ ಸೇರಿದಂತೆ ಗ್ರಾಮದ ಮುಖಂಡರು ಇದ್ದರು. ಸಾಮೂಹಿಕ ಭಂಡಾರ ಕಾರ್ಯಕ್ರಮ ಸಂಜೆ ದೇವಿಯ ಹೂವಿನ ಅಡ್ಡಪಲ್ಲಕ್ಕಿ ಉತ್ಸವ ಅನ್ನಸಂತರ್ಪಣೆ ಅಯೋಜಿಸಲಾಗಿತ್ತು.

## ಜೂಜಾಟದ ಮೇಲೆ ದಾಳಿ – 9 ಮಂದಿ ಬಂಧನ



**ಚಿಕ್ಕಮಗಳೂರು:** ಅಂದರ್ ಬಾಹರ್ ಜೂಜಾಟದ ಮೇಲೆ ದಾಳಿ ನಡೆಸಿರುವ ಗ್ರಾಮಾಂತರ ಪೊಲೀಸರು ಜೂಜಾಡುತ್ತಿದ್ದ 9 ಜನರ ಸಮೇತ ನಗದು 1,14,870 ರೂ. ನಗದನ್ನು ವಶಕ್ಕೆ ತೆಗೆದುಕೊಂಡಿದ್ದಾರೆ.ಖಚಿತ ಮಾಹಿತಿ ಮೇರೆಗೆ ಜಿಲ್ಲಾಪೊಲೀಸ್ ಮುಖ್ಯಾಧಿಕಾರಿ ಡಾ:ವಿಕ್ರಮ್ ಅಮಟೆ, ಡಿವೈಎಸ್‌ಪಿ ಶೈಲೇಂದ್ರ ಅವರ ಮಾರ್ಗದರ್ಶನದಲ್ಲಿ ನಿನ್ನೆ ಜೂಜುಅಡ್ಡೆಯ ಮೇಲೆ ದಾಳಿ ನಡೆಸಲಾಯಿತು.ಕದ್ರಿಮಿದ್ರಿ ವ್ಯಾಪ್ತಿಯ ಅರಣ್ಯಕಡೆಗೆ ಹೋಗುವ ರಸ್ತೆಯಲ್ಲಿ ಸಾರ್ವಜನಿಕ ಸ್ಥಳದಲ್ಲಿ ಅಕ್ರಮವಾಗಿ ಅಂದರ್ ಬಾಹರ್ ಆಡುತ್ತಿದ್ದ ಡಿ.ರಾಜು, ಕೆ.ಜಿ.ಮಧು, ನವೀನ್ ಕುಮಾ ರ್, ಕೆ. ಆರ್.ಪ್ರದೀಪ್,ಬಸವರಾಜು, ಕಿರಣ್, ಪರಮೇಶ, ಸಿ.ಆರ್.ಪುನೀತ್, ಡಿ.ಕೆ.ಜ್ಞಾನೇಶ್‌ದ ಅವರುಗಳನ್ನು ಪೊಲೀಸ್ ವಶಕ್ಕೆ ತೆಗೆದು–ಕೊಂಡಿದ್ದಾರೆ.ಗ್ರಾಮಾಂತರ ಠಾಣೆ ವೃತ್ತನಿರೀಕ್ಷಕ ಸಚಿನ್‌ಕುಮಾರ ನೇತೃತ್ವದಲ್ಲಿ ಕಾನೂನು ಮತ್ತು ಸುವ್ಯವಸ್ಥೆಯ ಉಪ ನಿರೀಕ್ಷಕ ಕೆ.ವಿ. ರಾಜೇಶ್, ಸಂಚಾರ ಉಪನಿರೀಕ್ಷಕ ಎಸ್.ವಿ. ರಘುನಾಥ, ಸಿಬ್ಬಂದಿಗಳಾದ ವಿನಾಯಕ, ಲಕ್ಷ್ಮಣ, ಕಿರಣ, ಜೆ.ಸಿ.ಶಶಿಧರ, ಲೋಹಿತ್ ಅವರುಗಳನ್ನೊಳಗೊಂಡ ತಂಡ ದಾಳಿಯಲ್ಲಿ ಪಾಲ್ಗೊಂಡಿತ್ತು. ಕಾನೂನುಕ್ರಮ ಜರುಗಿಸುವಲ್ಲಿ ಶ್ರಮಿಸಿದ ಅಧಿಕಾರಿ,ಸಿಬ್ಬಂದಿಗಳ ಕಾರ್ಯವನ್ನು ಜಿಲ್ಲಾ ಪೊಲೀಸ್ ಮುಖ್ಯಾಧಿಕಾರಿಗಳು ಪ್ರಶಂಸಿಸಿದ್ದಾರೆ.

## ಕೇಂದ್ರದ ಬಜೆಟ್ ಅಭಿವೃದ್ಧಿ ಪಥದಲ್ಲಿನ ಮೈಲಿಗಲ್ಲು

(1ನೇ ಪುಟದಿಂದ)

ವಿವಿಧ ವಸ್ತುಗಳ ಬೆಲೆ ಗಗನಕ್ಕೇರಿ ಅನೇಕ ರಾಷ್ಟ್ರಗಳು ಆರ್ಥಿಕ ಹಿಂಜರಿತವನ್ನು ಅನುಭವಿಸುತ್ತಿವೆ. ಇತ್ತೀಚಿನ ದಿನಗಳಲ್ಲಿ ಕೃತಕ ಬುದ್ಧಿಮತ್ತೆಯನ್ನು ಬಳಸಿಕೊಂಡು ಸಮಾಜದಲ್ಲಿ ತಪ್ಪು ಮಾಹಿತಿಯನ್ನು ಅರಿಬಿಡುವ ಕಾರ್ಯಗಳು ನಡೆಯುತ್ತಿವೆ ಎಂದು ತಿಳಿಸಿದರು.

ದೇಶದ ಬಹುತೇಕ ರಾಜ್ಯಗಳು ಸಬ್ಸಿಡಿ ಹಣವನ್ನು ವಿಪರೀತವಾಗಿ ನೀಡಿ ಮೂಲ ಸೌಕರ್ಯಗಳ ಹೂಡಿಕೆಗೆ ಹಣವಿಲ್ಲದಂತಾಗಿದೆ ಎಂದು ಭಾರತೀಯ ರಿಸರ್ವ್ ಬ್ಯಾಂಕ್ ಸ್ಪಷ್ಟಪಡಿಸಿದೆ. ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಮಾಹಿತಿ ಪ್ರಕಾರ ಕಳೆದ ಹತ್ತು ವರ್ಷಗಳಲ್ಲಿ ಭಾರತದ ಗ್ರಾಮೀಣಾ ಹಾಗೂ ನಗರ ಪ್ರದೇಶಗಳಲ್ಲಿ ಬಹು ಆಯಾಮದ ಬಡತನ ರೇಖೆಯೂ ಶೇಕಡಾ 5 ಕ್ಕಿಂತ ಕಡಿಮೆಯಾಗಿದೆ ಎಂದು ತಿಳಿಸಿದೆ.

ದೇಶದಲ್ಲಿ ಖಾಸಗಿ ಹಾಗೂ ಸಾರ್ವಜನಿಕ ವಲಯಗಳಲ್ಲಿ 2004 ರಿಂದ 2014ರ ವರೆಗೆ ಕಾಂಗ್ರೆಸ್ ನೇತೃತ್ವದ ಯುಪಿಐ ಸರ್ಕಾರದಲ್ಲಿ 2 ಕೋಟಿ 90 ಲಕ್ಷ ಉದ್ಯೋಗ ಸೃಷ್ಠಿಯಾಗಿತ್ತು ಆದರೆ 2014 ರಿಂದ 2024 ರವರೆಗೆ 17.9 ಕೋಟಿ ಹೊಸ ಉದ್ಯೋಗಗಳು ನಿರ್ಮಾಣವಾಗಿದೆ ಹಾಗೂ ನರೆಂದ್ರ ಮೋದಿಯವರಿಗೆ ಅಧಿಕಾರವನ್ನು ಹಸ್ತಾಂತರ ಮಾಡುವಾಗ ಸಾಲದ ಶೇಕಡ 14.58 ರಷ್ಠಿದ್ದ 2024 ರಲ್ಲಿ ಅಂತ್ಯಗೊಂಡ ತ್ರೈ ಮಾಸಿಕದಲ್ಲಿ ಭಾರತದ ರಾಷ್ಟ್ರೀಕೃತ ಬ್ಯಾಂಕ್‌ಗಳ ಸಮಗ್ರ ಕೆಟ್ಟ ಸಾಲವು(ಜಿಎಂಪಿ) ಯು 3.12 ಕ್ಕೆ ಇಳಿದು ಬ್ಯಾಂಕ್‌ಗಳು ಲಾಭದಾಯಕವಾಗಿವೆ ಈ ರೀತಿಯಲ್ಲಿ ದೇಶದ ಸಮಗ್ರ ಅಭಿವೃದ್ಧಿಯನ್ನು ಏರಿಕೆ ಧರದಲ್ಲಿ ಕೊಂಡೊಯ್ಯುತ್ತಿದೆ ಎಂದರು.

ನರೇಂದ್ರ ಮೋದಿ ನೇತೃತ್ವದ ಬಿಜೆಪಿ ಸರ್ಕಾರದ 3ನೇ ಅವಧಿಯ 2ನೇ ಬಜೆಟ್‌ನಲ್ಲಿ ನಿರುದ್ಯೋಗ ಸಮಸ್ಯೆಯನ್ನು ಕೇಂದ್ರವಾಗಿರಿಸಿಕೊಂಡು ಉತ್ಪಾದನಾ ವಲಯದಲ್ಲಿ ಕ್ರಾಂತಿಯನ್ನು ತರಿಸಿ ನಿರುದ್ಯೋಗ ಸಮಸ್ಯೆಯನ್ನು ಬಗೆಹರಿಸುವುದರ ಜೊತೆಗೆ ದೇಶದಲ್ಲಿ ಅಭಿವೃದ್ಧಿಯ ಪರ್ವವನ್ನು ಪ್ರಾರಂಭಿಸುವ ಯೋಜನೆ ಇದಾಗಿದೆ ಎಂದರು ಅವರು ಕೇಂದ್ರದ ಬಜೆಟ್ ಸರ್ವ ವ್ಯಾಪಿಯಾಗಿದೆ ಎಂದರು

ವಿಧಾನ ಪರಿಷತ್ ಸದಸ್ಯ ಸಿ.ಟಿ ರವಿ ಮಾತನಾಡಿ ನರೇಂದ್ರ ಮೋದಿ ನೇತೃತ್ವ ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದಲೂ ದೇಶದಲ್ಲಿನ ರಾಷ್ಟ್ರೀಯ ಸಮಸ್ಯೆಗಳ ಜೊತೆಗೆ ಹಸಿವು, ಬಡತನ, ನಿರುದ್ಯೋಗ ಸಮಸ್ಯೆಗಳಂತ ಹಲವಾರು ಸಾಮಾಜಿಕ ಪಿಡುಗುಗಳನ್ನು ಹೋಗಲಾಡಿಸುವಲ್ಲಿ ಯಶಸ್ವಿಯಾಗಿದ್ದಾರೆ. ಅದರಂತೆ ಈ ಬಾರಿಯ ಬಜೆಟ್‌ನಲ್ಲು ನಿರುದ್ಯೋಗ ಸಮಸ್ಯೆಯನ್ನು ಬುಡದಿಂದ ಕಿತ್ತೊಗೆದು ಅಭಿವೃದ್ಧಿ ಹೋಂದಿದ ಭಾರತವನ್ನು ನಿರ್ಮಿಸಲು ಶ್ರಮವಹಿಸುತಿದ್ದಾರೆ. ಹೂಡಿಕೆ, ಮಹಿಳಾ ಸಬಲೀಕರಣ, ಮಧ್ಯಮ ವರ್ಗದವರ ಆರ್ಥಿಕ ಸುಧಾರಿ–ಕೆ ಒಳಗೊಂಡಂತೆ ಸಾಮಾಜದ ಎಲ್ಲಾ ವರ್ಗದ ಜನರಿಗೆ ಬಜೆಟ್ ಸ್ನೇಹ ಮಾಯವಾಗಿದೆ ಎಂದ ಅವರು ವಿರೋಧಿಸುವವರ ಮಾತಿಗೆ ತಲೆದೂರದೇ ಬಜೆಟ್‌ನ ಹಿಂದಿನ ಉದ್ದೇಶವನ್ನು ಅರಿತು ಸಾರ ಸತ್ಯತೆಗಳನ್ನು ದೇಶದ ಪ್ರತಿಯೊಬ್ಬ ಪ್ರಜೆಗೂ ತಲುಪಿಸುವ ಜವಬ್ದಾರಿ ನಮ್ಮದು ಎಂದರು

ಕಾರ್ಯಕ್ರಮದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ದೇವರಾಜ್ ಶೆಟ್ಟಿ, ಡಾ. ನರೇಂದ್ರ, ಕಲ್ಮರುಡಪ್ಪ, ಬಸವರಾಜ್, ಪುಷ್ಪರಾಜ್ ಸೇರಿದಂತೆ ಉದ್ಯಮಿಗಳು, ವಿವಿಧ ಸಂಘದ ಪದಾಧಿಕಾರಿಗಳು, ವೈದ್ಯರು, ಕಾಲೇಜು ವಿದ್ಯಾರ್ಥಿಗಳು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಚಿಕ್ಕಮಗಳೂರು ರೈಲು ಮಾರ್ಗಕ್ಕೆ 78.4 ಕೋಟಿ ರೂ. ಮೀಸಲು

**ಚಿಕ್ಕಮಗಳೂರು:** ರಾಜ್ಯದ ರೈಲ್ವೆ ಯೋಜನೆಗೆ ಕೇಂದ್ರ ಸರ್ಕಾರ ಈ ಆಯವ್ಯಯದಲ್ಲಿ ಸಾಕಷ್ಟು ಹಣ ಬಿಡುಗಡೆ ಮಾಡಿದೆ. ವಿಶೇಷವಾಗಿ ಚಿಕ್ಕಮಗಳೂರು ಜಿಲ್ಲೆಯನ್ನು ಪರಿಗಣಿಸಿ ಕಡೂರು–ಚಿಕ್ಕಮಗಳೂರು–ಸಕಲೇಶಪುರ ರೈಲು ಮಾರ್ಗ ನಿರ್ಮಾಣಕ್ಕೆ 78.4 ಕೋಟಿ ರೂ.ಗಳನ್ನು ಮೀಸಲಿಟ್ಟಿರುವುದು ಜಿಲ್ಲೆಯ ಸಂಪರ್ಕ ಸುಧಾರಣೆಗೆ, ಕಾಫಿ, ಮೆಣಸು, ಕೃಷಿ ಸಂಪನ್ಮೂಲಗಳ ವಹಿವಾಟಿಗೆ ಹೆಚ್ಚಿನ ಅವಕಾಶ ಕಲ್ಪಿಸಿದಂತಾಗಿದೆ ಎಂದು ಬಿಜೆಪಿ ಮುಖಂಡ ದೀಪಕ್ ದೊಡ್ಡಯ್ಯ ತಿಳಿಸಿದರು.ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಪ್ರಧಾನಿ ಮೋದಿ ನೇತೃತ್ವದ ಕೇಂದ್ರ ಸರ್ಕಾರದ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಫೆ.1ರಂದು ಮಂಡಿಸಿದ ಆಯವ್ಯಯ ಕೇವಲ ಜನಪ್ರಿಯ ಆಯವ್ಯಯ ಎನಿಸಿಕೊಳ್ಳದೆ ಸರ್ವ ಜನಸ್ನೇಹಿ ಆಯವ್ಯಯವಾಗಿದೆ ಎಂದು ವಿಶ್ಲೇಷಿಸಲು ಸಂತೋಷವಾಗುತ್ತದೆ. ಆಯವ್ಯಯದ ವಿವರಗಳತ್ತ ಗಮನ ಹರಿಸಿದಾಗ, ಪ್ರತೀ ತಿಂಗಳು ಪಗಾರ ಪಡೆಯುವ ಸಮೂಹದಿಂದ ಹಿಡಿದು ಜನಸಾಮಾನ್ಯರಿಗೆ ತೆರಿಗೆ ಹೊರೆ ಕಡಿಮೆ ಮಾಡುವ ನಿಟ್ಟಿನಲ್ಲಿ ವಾರ್ಷಿಕ 12 ಲಕ್ಷ ರೂ.ವರೆಗೆ ತೆರಿಗೆಯಿಂದ ವಿನಾಯ್ತಿ ನೀಡಿರುವುದು ಆ ವರ್ಗದವರ ಹಣ ಉಳಿತಾಯಕ್ಕೆ ಪೂರಕವಾಗಿದ್ದು, ಸಾಮಾನ್ಯರ ಬಗ್ಗೆ ಹೆಚ್ಚಿನದಾಗಿ ಯೋಚಿಸುವ ಸರ್ಕಾರ ಇದಾಗಿದೆ ಎಂಬುದಕ್ಕೆ ಉದಾಹರಣೆಯಾಗಿದೆ ಎಂದರು.ಇದರಲ್ಲಿ ಹೆಚ್ಚಿನ ಆದ್ಯತೆಯನ್ನು ಮಹಿಳೆಯರಿಗೆ ನೀಡಲಾಗಿದೆ. ಮಹಿಳೆಯರನ್ನು ಆರ್ಥಿಕವಾಗಿ ಚೈತನ್ಯಪೂರ್ಣವಾಗಿಸಲು ಸಹಕಾರಿಯಾಗಿದೆ. ಪ್ರವಾಸಿ ಕೇಂದ್ರಗಳಲ್ಲಿ ಆರಂಭವಾಗಿರುವ ಹೋಂಸ್ಟೇಗಳ ಬಗ್ಗೆ ಸಹ ಯೋಚಿಸಲಾಗಿದ್ದು, ಮುದ್ರಾ ಯೋಜನೆಯಡಿ ಹೋಂಸ್ಟೇ ನಿರ್ಮಾಣಕ್ಕೂ ಸಾಲ ನೀಡಲು ಸರ್ಕಾರ ಮುಂದಾಗಿರುವುದು ಕಾಫಿ ಬೆಳೆಗಾರರಲ್ಲಿ ಆರ್ಥಿಕ ಚೈತನ್ಯ ಮೂಡಿಸಲು ಸಹಾಯಕವಾಗಿದೆ ಎಂದರು. ಬಹುಮುಖ್ಯವಾಗಿ ಹಾಲುಣಿಸುವ ತಾಯಂದಿರ ಆರೋಗ್ಯ ಸುಧಾರಿಸಿ ಅವರು ಚೈತನ್ಯಪೂರಿತರಾಗಿರಲು ಸಾಧ್ಯವಾಗುವಂತೆ 8 ಕೋಟಿ ಮಕ್ಕಳು, 1 ಕೋಟಿ ಹಾಲುಣಿಸುವ ತಾಯಂದಿರಿಗೆ ಸಕ್ಷಮ್ ಅಂಗನವಾಡಿ, ಪೋಷಣ್ 2.0 ಯೋಜನೆ ಆರಂಭಿಸಿದೆ. ಗ್ರಾಮೀಣ ಪ್ರದೇಶಗಳಲ್ಲೂ ಮಕ್ಕಳ ಶಿಕ್ಷಣದಲ್ಲಿ ಕ್ರಾಂತಿಕಾರಿ ಬದಲಾವಣೆಗಳನ್ನು ತರಲು ಸರ್ಕಾರಿ ಪ್ರೌಢಶಾಲೆ, ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಬ್ರಾಡ್‌ಬ್ಯಾಂಡ್ ಸಂಪರ್ಕ ಒದಗಿಸುವ ಆಲೋಚನೆ ವಿಶ್ವದ ಆಗುಹೋಗುಗಳನ್ನು ಗಮನಿಸಲು ವಿದ್ಯಾರ್ಥಿಗಳು, ವೈದ್ಯರಿಗೆ ಸಹಾಯವಾಗಲಿದೆ. ಕೇಂದ್ರ ಸರ್ಕಾರದ ಈ ವರ್ಷದ ಆಯವ್ಯಯ ಸರ್ವವ್ಯಾಪಿ, ಸರ್ವಸ್ಪರ್ಶಿ ಎಂದು ಖಚಿತವಾಗಿ ಹೇಳಬಹುದು ಎಂದರು. ಗೋಷ್ಠಿಯಲ್ಲಿ ಬಿಜೆಪಿ ಮುಖಂಡರಾದ ದಿನೇಶ್, ಸಚಿನ್‌ಗೌಡ ಇದ್ದರು.

# ಹಿರಿಯರು ಕ್ರಿಕೆಟ್ ಪಂದ್ಯಾವಳಿ

**ಬಾಳೆಹೊನ್ನೂರು:** 50 ವರ್ಷ ಮೇಲ್ಪಟ್ಟ ಹಿರಿಯ ಕ್ರಿಕೆಟ್ ಆಟಗಾರರನ್ನು ಒಗ್ಗೂಡಿಸಿ ದಿಗ್ಗಜರ ಕ್ರಿಕೆಟ್ ಎಂಬ ಶೀರ್ಷಿಕೆಯೊಂದಿಗೆ 20 ಓವರ್‌ಗಳ ನಿಗದಿತ ಪಂದ್ಯಾವಳಿಯನ್ನು ಏರ್ಪಡಿಸಲಾಗಿರುವುದು ಸಂತಸದ ವಿಚಾರ ಎಂದು ತೆಂಗಿನಮನೆ ತಂಡದ ನಾಯಕ, ಹಿರಿಯ ಆಟಗಾರ ಅನಿಲ್ ಕುಲಾಸ ಹೇಳಿದರು.ಪಟ್ಟಣದ ಕಲಾರಂಗ ಕ್ರೀಡಾಂಗಣದಲ್ಲಿ ಹಿರಿಯ ದಿಗ್ಗಜ ಕ್ರಿಕೆಟ್ ಆಟಗಾರರಿಗೆ ಗೆಳೆಯರ ಬಳಗ ಏರ್ಪಡಿಸಿದ್ದ ಪಂದ್ಯಾವಳಿಯಲ್ಲಿ ಅವರು ಮಾತನಾಡಿದರು.50–70 ವರ್ಷದವರೆಗಿನ ಹಿರಿಯರು ಕ್ರೀಡಾಕೂಟದಲ್ಲಿ ಭಾಗವಹಿಸಿರುವುದು ಶ್ಲಾಘನೀಯ ಎಂದರು. ಬಾಳೆಹೊನ್ನೂರು ತಂಡದ ನಾಯಕ ಒ.ಡಿ.ಸ್ಟೀಫನ್ ಮಾತನಾಡಿ, ಪಟ್ಟಣದಲ್ಲಿ 9 ದಿನಗಳಿಂದ ರಾಜ್ಯಮಟ್ಟದ ಆಹ್ವಾನಿತ ಲೆದರ್‌ಬಾಲ್ ಕ್ರಿಕೆಟ್ ಪಂದ್ಯಾವಳಿ ನಡೆಯುತ್ತಿದ್ದು, ಸ್ಥಳೀಯ ಹಿರಿಯ ಆಟಗಾರರನ್ನು, ತೆಂಗಿನಮನೆ ಕ್ರಿಕೆಟ್ ತಂಡದವರ ಜೊತೆಗೆ ಪಂದ್ಯಾವಳಿ ನಡೆದಿರುವುದು ಸಂತಸ ತಂದಿದೆ ಎಂದರು.ತೆಂಗಿನಮನೆ ತಂಡದ ಪರವಾಗಿ ವಿನಯ್ 59 ರನ್ ಗಳಿಸಿ ತಂಡದ ಗೆಲುವಿನಲ್ಲಿ ಪ್ರಮುಖ ಪಾತ್ರ ವಹಿಸಿದರು. ಬಾಳೆಹೊನ್ನೂರು ತಂಡದ ಪರವಾಗಿ ಶರತ್ 52 ರನ್ ಗಳಿಸಿದರು. ತೆಂಗಿನಮನೆ ತಂಡ 20 ಓವರ್‌ಗಳಲ್ಲಿ 150 ರನ್ ಗಳಿಸಿ 2 ರನ್‌ಗಳ ರೋಚಕ ಜಯಗಳಿಸಿತು. ಹಿರಿಯ ಆಟಗಾರರಾದ ಮಹಮ್ಮದ್ ಹನೀಫ್, ಇಬ್ರಾಹಿಂ ಶಾಫಿ, ಸತೀಶ್ ಅರಳಿಕೊಪ್ಪ, ನೇಮನಹಳ್ಳಿ ಮಹೇಶ್, ಕಿಶೋರ್, ಹಿರಿಯ ಆಟಗಾರ ಹಾಗೂ ವೀಕ್ಷಕ ವಿವರಣೆಗಾರ ಯಜ್ಞಪುರುಷ ಭಟ್, ತೆಂಗಿನ ಮನೆ ತಂಡದ ಸುಧೀರ್, ಶ್ಯಾಮರಾಜ್, ಭೋಜರಾಜ್, ವಿಜಯ, ಅಜೀಮ್, ನಾಗರಾಜ್ ಭಟ್, ಮನುಕುಮಾರ್, ವೆನಿಲ್ಲಾ ಭಾಸ್ಕರ್, ಸರ್ತಾಜ್, ಸಂಘಟಕ ಜಗದೀಶ್ ಅರಳಿಕೊಪ್ಪ ಇದ್ದರು.

# ಪರಿಶಿಷ್ಟ ಜನರ ಕಲ್ಯಾಣಕ್ಕಾಗಿ ಮೀಸಲಿಟ್ಟ ಹಣವನ್ನೂ ಚುನಾವಣೆಗೆ ಬಳಸಿಕೊಂಡಿದ್ದಾರೆ

## ರಾಜ್ಯಸಭೆಯಲ್ಲಿ ಕಾಂಗ್ರೆಸ್ ವಿರುದ್ಧ ದೇವೇಗೌಡ ಗುಡುಗು

**ನವದೆಹಲಿ/ಬೆಂಗಳೂರು:** ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣಕ್ಕಾಗಿ ಮೀಸಲಿಟ್ಟ ಹಣವನ್ನೂ ಕಾಂಗ್ರೆಸ್ ಚುನಾವಣೆಗೆ ಬಳಸಿಕೊಂಡಿದೆ ಎಂದು ಮಾಜಿ ಪ್ರಧಾನಮಂತ್ರಿ ಹೆಚ್'ಡಿ.ದೇವೇಗೌಡ ಅವರು ಕಿಡಿಕಾರಿದ್ದಾರೆ.



ರಾಜ್ಯಸಭೆಯಲ್ಲಿ ರಾಷ್ಟ್ರಪತಿ ಭಾಷಣದ ವಂದನಾ ನಿರ್ಣಯದ ಚರ್ಚೆಯಲ್ಲಿ ಗುರುವಾರ ಮಾತನಾಡಿದ ಅವರು, ಕಾಂಗ್ರೆಸ್ ವಿರುದ್ಧ ಹರಿಹಾಯ್ದರು.

ಲೋಕಸಭೆಯಲ್ಲಿ ಬಿಜೆಪಿಗೆ ಸಿಕ್ಕಿರುವುದು 240 ಸ್ಥಾನಗಳಷ್ಟೇ ಎಂದು ಕಾಂಗ್ರೆಸ್ ನಾಯಕರು ಲೇವಡಿ ಮಾಡುತ್ತಿದ್ದಾರೆ. ಆದರೆ, ಕರ್ನಾಟಕ ವಿಧಾನಸಭೆಯಲ್ಲಿ ಕಾಂಗ್ರೆಸ್ 136 ಸ್ಥಾನ ಗೆದ್ದಿದೆ. ಅದರಿಂದ ಉಪಯೋಗವೇನು? ಕಾಂಗ್ರೆಸ್ ಯಾವ ರೀತಿ ಕರ್ನಾಟಕದಲ್ಲಿ ಆಡಳಿತ ನಡೆಸುತ್ತಿದೆ ಎಂಬುದು ಎಲ್ಲರಿಗೂ ಗೊತ್ತು. ಅಲ್ಲಿರುವುದು ಕಡು ಭ್ರಷ್ಟ ಸರ್ಕಾರ. ಪ್ರಗತಿಶೀಲ ರಾಜ್ಯ ಕರ್ನಾಟಕವನ್ನು ಕಾಂಗ್ರೆಸ್ ಸರ್ಕಾರ ಹಾಳು ಮಾಡುತ್ತಿದೆ ಎಂದು ವಾಗ್ದಾಳಿ ನಡೆಸಿದರು.

ಪರಿಶಿಷ್ಟ ಜಾತಿ–ಪರಿಶಿಷ್ಟ ಪಂಗಡದ ಜನರ ಕಲ್ಯಾಣಕ್ಕಾಗಿ ಮೀಸಲಿಟ್ಟ ಹಣವನ್ನೂ ಚುನಾವಣೆಗೆ ಬಳಸಿಕೊಂಡಿದ್ದಾರೆ. ಯಾವುದೇ ಅಂಜಿಕೆ ಇಲ್ಲದೆ ಭ್ರಷ್ಟಾಚಾರದಲ್ಲಿ ತೊಡಗಿರುವ ಈ ಸರ್ಕಾರದ ಕೆಟ್ಟ ಆಡಳಿತದಿಂದ ಅನೇಕ ಅಧಿಕಾರಿಗಳು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ನಾನು ಸತ್ಯವನ್ನು ಹೇಳಿದರೆ, ನಿಮಗೆ ಅರಗಿಸಿಕೊಳ್ಳುವುದು ತುಂಬಾ ಕಷ್ಟ ಎಂದು ಗುಡುಗಿದರು.

ಇದೇ ಕರ್ನಾಟಕ ಸಚಿವರ ಕಾರ್ಯವೈಖರಿ ಬಗ್ಗೆಯೂ ಅಸಮಾಧಾನ ಹೊರಹಾಕಿದ ದೇವೇಗೌಡಅವರು, ಸ್ವತಃ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರೇ ಬೇಸರ ವ್ಯಕ್ತಪಡಿಸಿದ್ದಾರೆ. ಈ ಕುರಿತ ಪತ್ರಿಕಾ ವರದಿಗಳನ್ನು ನಾನು ಈ ಸದನದಲ್ಲಿ ಓದಲೇ? ತಮ್ಮ ಮಂತ್ರಿಗಳಿಗೆ ನೀಡಿದ ಸಲಹೆಯನ್ನು ನಾನು ಓದಿದರೆ ಖರ್ಗೆ ಅವರಿಗೆ ಬೇಸರವಾಗಬಹುದು ಎಂದು ಹೇಳಿದರು. ಈ ವೇಳೆ ಕಾಂಗ್ರೆಸ್ ಸದಸ್ಯರು ಭಾಷಣಕ್ಕೆ ಅಡ್ಡಿಯುಂಟು ಮಾಡಲು ಯತ್ನಿಸಿದರು.

ಬಳಿಕ ಬೆಂಗಳೂರಿನ ಕುಡಿಯುವ ನೀರು ಬಿಕ್ಕಟ್ಟು ವಿಚಾರವನ್ನು ಪ್ರಸ್ತಾಪಿಸಿದ ದೇವೇಗೌಡ ಅವರು, ಬೆಂಗಳೂರಿನಲ್ಲಿ ಕುಡಿಯುವ ನೀರಿನ ಸಮಸ್ಯೆ ಗಂಭೀರವಾಗಿದೆ. ದಿನೇ ದಿನ ನೀರಿನ ಸಮಸ್ಯೆ ಬಿಗಡಾಯಿಸುತ್ತಿದೆ. ನಗರದ ಜನಸಂಖ್ಯೆ 1.45 ಕೋಟಿ ದಾಟಿ–ದೆ. ನಗರಕ್ಕೆ ಕಾವೇರಿ ನ್ಯಾಯಮಂಡಳಿಯು 20 ಟಿಎಂಸಿ ಅಡಿ ನೀರು ಹಂಚಿಕೆ ಮಾಡಿದ್ದು, ಅಷ್ಟು ಪ್ರಮಾಣದ ನೀರು ಏನೇನಕ್ಕೂ ಸಾಲದು. ಕನಿಷ್ಟ 50 ಟಿಎಂಸಿ ನೀರು ಹಂಚಿಕೆ ಮಾಡಬೇಕೆಂದು ಒತ್ತಾಯಿಸಿದರು.

ಬೆಂಗಳೂರಿನ ನೀರಿನ ಸಮಸ್ಯೆ ಬಗೆಹರಿಸಲು ಹಿಂದಿನ ಪ್ರಧಾನಿ ಮನಮೋಹನ್ ಸಿಂಗ್ ಅವರಿಗೆ ಮನವಿ ಮಾಡಿದ್ದೆ. ಆಗ ಖರ್ಗೆ ಸಚಿವರಾಗಿದ್ದರು. ಆದರೆ, ಸಿಂಗ್ ಅವರ ಕೈ ಚೆಲ್ಲಿದ್ದರು. ಆದರೆ, ಈ ನೀರಿನ ಬಿಕ್ಕಟ್ಟನ್ನು ಬಗೆಹರಿಸಲು ಮೋದಿ ಅವರಿಂದ ಸಾಧ್ಯ. ಇದು ನನ್ನ ಬಲವಾದ ನಂಬಿಕೆ ಎಂದು ಪ್ರತಿಪಾದಿಸಿದರು.

## ಮಹಿಳೆಯ ಮೇಲೆ ಲೈಂಗಿಕ ದೌರ್ಜನ್ಯ

# ಗ್ರಾಮ ಪಂಚಾಯಿತಿ ಸದಸ್ಯನಿಗೆ ಕಠಿಣ ಶಿಕ್ಷೆಗೆ ಒತ್ತಾಯ



**ಚಿತ್ರದುರ್ಗ:** ವಿವಾಹವಾಗಿ ಗಂಡ ಮಕ್ಕಳೊಂದಿಗೆ ಸಂಸಾರ ಮಾಡಿಕೊಂಡಿದ್ದ ಸೌಮ್ಯಳನ್ನು ಲೈಂಗಿಕವಾಗಿ ಬಳಸಿಕೊಂಡು ವಂಚಿಸಿರುವ ಹಿರೇಗುಂಟನೂರು ಗ್ರಾಮ ಪಂಚಾಯಿತಿ ಸದಸ್ಯ ಮಂಜುನಾಥನಿಗೆ ಕಾನೂನು ರೀತಿಯಲ್ಲಿ ಶಿಕ್ಷೆ ವಿಧಿಸಿ ಸೌಮ್ಯಗಳಿಗೆ ರಕ್ಷಣೆ ನೀಡುವಂತೆ ಅಖಿಲ ಕರ್ನಾಟಕ ಅಹಿಂದ ರಕ್ಷಣಾ ವೇದಿಕೆಯ ಜಿಲ್ಲಾಧ್ಯಕ್ಷ ಅನಂತಮೂರ್ತಿನಾಯ್ಕ ಒತ್ತಾಯಿಸಿದರು.

ಪ್ರವಾಸಿ ಮಂದಿರದಲ್ಲಿ ಬುಧವಾರ ಸುದ್ದಿಗೋಷ್ಟಿಯಲ್ಲಿ ಮಾತನಾಡಿದ ಅವರು ಸೌಮ್ಯಳ ಮನೆಗೆ ಬಂದು ಹೋಗುತ್ತಿದ್ದ ಮಂಜುನಾಥ ಕೊನೆಗೆ ಗಂಡನಿಂದ ಬೇರ್ಪಡಿಸಿ ತನ್ನ ಜೊತೆಯಿಟ್ಟುಕೊಂಡು ಸಂಸಾರ ಮಾಡುತ್ತಿದ್ದನಲ್ಲದೆ ಲಕ್ಷಗಟ್ಟಲೆ ಹಣ ಚಿನ್ನದ ಒಡವೆಗಳನ್ನು ಕಬಳಿಸಿಕೊಂಡು ಈಗ ಬ್ಲಾಕ್‌ಮೇಲ್ ಮಾಡುತ್ತಿದ್ದಾನೆ. ಸೌಮ್ಯಳನ್ನು ಈ ರೀತಿ ಶೋಷಣೆ ಮಾಡುತ್ತಿರುವುದು ಕಾನೂನು ದೃಷ್ಟಿಯಲ್ಲಿ ಅಪರಾಧ. ಹಾಗಾಗಿ ಮಂನಾಥನ ಮೇಲೆ ಕ್ರಮ ಕೈಗೊಳ್ಳುವಂತೆ ಅನಂತಮೂರ್ತಿನಾಯ್ಕ ಆಗ್ರಹಿಸಿದರು.

ಅಖಿಲ ಕರ್ನಾಟಕ ಅಹಿಂದ ರಕ್ಷಣಾ ವೇದಿಕೆ ಮಹಿಳಾ ಘಟಕದ ಅಧ್ಯ–ಕ್ಷೆ ಭಾಗ್ಯಮ್ಮ, ಕಾಂಗ್ರೆಸ್‌ನ ಸುಧಾ, ಕೋದಂಡರಾಮ, ಪವಿತ್ರ, ಫರ್ವಿನ್, ರೈತ ಸಂಘದ ಬಸ್ತಿಹಳ್ಳಿ ಜಿ.ಸುರೇಶ್‌ಬಾಬು, ಡಿ.ಹೆಚ್.ನಾಗರಾಜಕಟ್ಟೆ, ಸೌಮ್ಯ ಪತ್ರಿಕಾಗೋಷ್ಠಿಯಲ್ಲಿ ಹಾಜರಿದ್ದರು.

# ಮೈಕ್ರೋ ಫೈನಾನ್ಸ್ ಸಂಸ್ಥೆಗಳ ಕಿರುಕುಳದಿಂದ 30 ಜನರು ಆತ್ಮಹತ್ಯೆ: ಆರ್.ಅಶೋಕ್

**ಮೈಸೂರು:** ಮೈಕ್ರೋ ಫೈನಾನ್ಸ್ ಸಂಸ್ಥೆಗಳ ಕಿರುಕುಳದಿಂದ 1 ಲಕ್ಷ ಜನರು ಗ್ರಾಮಗಳ ತೊರೆದಿದ್ದು, 30 ಮಂದಿ ಆತ್ಮಹತ್ಯೆಗೆ ಶರಣಾಗಿದ್ದಾರೆಂದು ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಹೇಳಿದರು.



ಮಂಡ್ಯದ ಕೊನ್ನಾಪುರ ಗ್ರಾಮದಲ್ಲಿ ಮೈಕ್ರೋ ಫೈನಾನ್ಸ್ ಕಿರುಕುಳದಿಂದ ಆತ್ಮಹತ್ಯೆಗೆ ಶರಣಾದ ತಾಯಿ ಮತ್ತು ಮಗನ ಮನೆಗೆ ಗುರುವಾರ ಭೇಟಿ ನೀಡಿದ ಅಶೋಕ್ ಅವರು, ಕುಟುಂಬಕ್ಕೆ ಸಾಂತ್ವನ ಹೇಳಿದರು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಸುಗ್ರೀವಾಜ್ಞೆ ತರುತ್ತೇವೆಂದು ಹೇಳಿ ಒಂದು ತಿಂಗಳು ಕಳೆದಿದೆ. ಮಂಡ್ಯ ಜಿಲ್ಲೆಯಲ್ಲಿ ದಲಿತರ ಪ್ರದೇಶದಲ್ಲಿ 6 ಮಂದಿ ಊರು ಬಿಟ್ಟು ಹೋಗಿದ್ದಾರೆ. ರಾಜ್ಯದಲ್ಲಿ ಲಕ್ಷಾಂತರ ಜನರು ಗ್ರಾಮ ತೊರೆದಿದ್ದಾರೆ. 30 ಮಂದಿ ಆತ್ಮಹತ್ಯೆಗೆ ಶರಣಾಗಿದ್ದಾರೆ. ಸರ್ಕಾರ ಸುಗ್ರೀವಾಜ್ಞೆ ತರಲಿಲ್ಲ ಎಂದರೆ, ಈ ಸಾವುಗಳು ನಿಲ್ಲುವುದಿಲ್ಲ ಎಂದು ಹೇಳಿದರು.

ಕೊನ್ನಾಪುರದಲ್ಲಿ ತಾಯಿ ಪ್ರೇಮಾ ಮತ್ತು ಮಗ ರಂಜಿತ್ ಮೈಕ್ರೋ ಫೈನಾನ್ಸ್‌ನ ಸಾಲ ತೀರಿಸಲಾಗದೆ ಕೊನ್ನಾಪುರ ಕೆರೆಗೆ ಹಾರಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಬಡವರ ಪರ ಎಂದು ಹೇಳುವ ಸಿಎಂ ಸಿದ್ದರಾಮಯ್ಯನವರಿಗೆ ಕಣ್ಣಿಲ್ಲ. ಕೊನ್ನಾಪುರ ಗ್ರಾಮದಲ್ಲಿ ಚಾಮುಂಡೇಶ್ವರಿ, ನವಚೇತನ, ಸೂರ್ಯೋದಯ, ಯುನಿಟಿ, ಪ್ರಗತಿ ಸೇರಿದಂತೆ 24 ಮೈಕ್ರೋ ಫೈನಾನ್ಸ್‌ಗಳು ಈ ಹಳ್ಳಿಗೆ ಬಂದು ವರ್ಷಕ್ಕೆ ಶೇ.12 ರಂತೆ ಸಾಲ ನೀಡಿವೆ. ಒಬ್ಬರಿಗೆ 9 ಜನರು ಶೂರಿಟಿ ನೀಡಿದ್ದಾರೆ.

ಒಬ್ಬರು ಸಾಲ ಮರುಪಾವತಿ ಮಾಡಿಲ್ಲವೆಂದರೆ ಉಳಿದವರು ಹೊಣೆಯಾಗುತ್ತಾರೆ. ಸಾಲ ಕಟ್ಟದೆ ಮಾನ ಹೋದಾಗ ನೊಂದವರು ಆತ್ಮಹತ್ಯೆ ಮಾಡಿಕೊಳ್ಳುತ್ತಾರೆ. ಪೊಲೀಸರು ಕೂಡ ಇಲ್ಲಿ ಮೈಕ್ರೋ ಫೈನಾನ್ಸ್‌ಗೆ ಬೆಂಬಲ ನೀಡಿದ್ದಾರೆ. ಮನೆ ವಶಕ್ಕೆ ಪಡೆಯುವ ಸಮಯದಲ್ಲಿ ಪೊಲೀಸರು ಕುಟುಂಬದ ಸದಸ್ಯರನ್ನು ಎಳೆದು ಹೊರಗೆ ಹಾಕಿದ್ದಾರೆ ಎಂದು ವ್ಯಕ್ತಪಡಿಸಿದರು.ಮಂಡ್ಯದಲ್ಲಿ 60 ಮೈಕ್ರೋ ಫೈನಾನ್ಸ್‌ಗಳಿದ್ದು, ಕೇವಲ 18 ಮಾತ್ರ ಅಧಿಕೃತವಾಗಿವೆ. ಉಳಿದವುಗಳಲ್ಲಿ ರೌಡಿಗಳಿದ್ದಾರೆ. ತಹಶೀಲ್ದಾರ್ ಹಾಗೂ ಪೊಲೀಸರು ಎಲ್ಲಾ ಹಳ್ಳಿಗೂ ಹೋಗಿ ಕ್ರಮ ಕೈಗೊಳ್ಳಬೇಕಿತ್ತು. ಈ ಸಾವುಗಳಿಗೆ ನ್ಯಾಯ ನೀಡಲು ನ್ಯಾಯಾಧೀಶರ ನೇತೃತ್ವದಲ್ಲಿ ನ್ಯಾಯಾಂಗ ತನಿಖೆ ಮಾಡಬೇಕು. ಅನಧಿಕೃತ ಮೈಕ್ರೋ ಫೈನಾನ್ಸ್‌ಗಳನ್ನು ಪತ್ತೆ ಮಾಡಿ ಕ್ರಮ ವಹಿಸಬೇಕು ಎಂದು ಒತ್ತಾಯಿಸಿದರು.

ಈ ನಡುವೆ ಯಾವುದೇ ಸಚಿವರು ತಮ್ಮನ್ನು ಭೇಟಿ ಮಾಡಿಲ್ಲ ಎಂದು ಕುಟುಂಬವು ಹೇಳಿಕೊಂಡಿದ್ದು, ನಮ್ಮ ಸಂಬಂಧಿಕರ ಸಹಾಯದಿಂದ ನಾವು ಜೀವಂತವಾಗಿದ್ದೇವೆ. ನಮಗೆ ಯಾವುದೇ ಬೆಂಬಲವಿಲ್ಲವಾದ್ದರಿಂದ ಮುಂದಿನ ಜೀವನದ ಬಗ್ಗೆ ಏನೂ ತಿಳಿಯದಂತಾಗಿದೆ ಎಂದು ಮಾಣಿಕ್ಯ ಎಂಬುವವರು ಹೇಳಿದ್ದಾರೆ. ಈ ವೇಳೆ ಕುಟುಂಬಕ್ಕೆ ಬೆಂಬಲವಾಗಿ ನಿಂತು ಸರ್ಕಾರದ ಮೇಲೆ ಒತ್ತಡ ಹೇರುವುದಾಗಿ ಅಶೋಕ್ ಅವರು ಭರವಸೆ ನೀಡಿದರು.ಬಳಿಕ ಜಿಲ್ಲಾಧಿಕಾರಿ ಕುಮಾರ್ ಅವರನ್ನು ದೂರವಾಣಿ ಮೂಲಕ ಸಂಪರ್ಕಿಸಿದ ಅವರು, ಮನೆ ವಶಪಡಿಸಿಕೊಂಡ ಸಂದರ್ಭದಲ್ಲಿ ಸ್ಥಳೀಯ ಪೊಲೀಸರ ವರ್ತನೆಯನ್ನು ಖಂಡಿಸಿದರು.

ನ್ಯಾಯಾಲಯದ ಆದೇಶಗಳನ್ನು ಜಾರಿಗೊಳಿಸುವ ನೆಪದಲ್ಲಿ ಕುಟುಂಬ ಸದಸ್ಯರನ್ನು ಮನೆಯಿಂದ ಹೊರಗೆಳೆದ ಮಹಿಳಾ ಪೊಲೀಸ್ ಸಿಬ್ಬಂದಿಯನ್ನು ಅಮಾನತುಗೊಳಿಸುವಂತೆಯೂ ಒತ್ತಾಯಿಸಿದರು.

## ಬರೇಲಿಯ ಗಾಳಿಪಟ ದಾರ ತಯಾರಿಕಾ ಘಟಕದಲ್ಲಿ ಸ್ಫೋಟ;

# ಮಾಲೀಕ ಸೇರಿ ಮೂವರು ಸಾವು

**ಬರೇಲಿ:** ಉತ್ತರ ಪ್ರದೇಶದ ಬರೇಲಿ ಜಿಲ್ಲೆಯ ಕ್ವಿಲಾ ಪ್ರದೇಶದಲ್ಲಿ ಗಾಳಿಪಟದ ದಾರ ತಯಾರಿಕಾ ಘಟಕದಲ್ಲಿ ಸ್ಫೋಟ ಸಂಭವಿಸಿದ್ದು, ಘಟನೆಯಲ್ಲಿ ಮೂವರು ಸಾವನ್ನಪ್ಪಿದ್ದಾರೆ ಎಂದು ಪೊಲೀಸರು ಶುಕ್ರವಾರ ತಿಳಿಸಿದ್ದಾರೆ.

ಇಂದು ಬೆಳಗ್ಗೆ 10 ಗಂಟೆ ಸುಮಾರಿಗೆ ಸಂಭವಿಸಿದ ಈ ಸ್ಫೋಟದಲ್ಲಿ ಕಾರ್ಖಾನೆ ಮಾಲೀಕರು ಸಹ ಸಾವನ್ನಪ್ಪಿದ್ದಾರೆ ಎಂದು ಅವರು ಹೇಳಿದ್ದಾರೆ.

ಗಾಳಿಪಟದ ದಾರಗಳಿಗೆ ಲೇಪಿಸಲು ಸಲ್ಫರ್, ಪೊಟ್ಯಾಶ್ ಮತ್ತು ಗಾಜು ಮಿಶ್ರಣ ಮಾಡುವಾಗ ಸ್ಫೋಟ ಸಂಭವಿಸಿದೆ ಎಂದು ಪೊಲೀಸ್ ವರಿಷ್ಠಾಧಿಕಾರಿ(ಸಂಚಾರ) ತಿಳಿಸಿದ್ದಾರೆ.

ಘಟನೆಯಲ್ಲಿ ಇಬ್ಬರು ಸ್ಥಳದಲ್ಲೇ ಸಾವನ್ನಪ್ಪಿದರೆ, ಮೂರನೇ ವ್ಯಕ್ತಿ ಆಸ್ಪತ್ರೆಯಲ್ಲಿ ಸಾವನ್ನಪ್ಪಿದ್ದಾರೆ.

ಮೃತರನ್ನು ಕಾರ್ಖಾನೆ ಮಾಲೀಕ ಅತಿಕ್ ರಜಾ ಖಾನ್(45) ಮತ್ತು ಅವರ ಕೆಲಸಗಾರರಾದ ಫೈಜಾನ್(25) ಮತ್ತು ಸರ್ತಾಜ್(20) ಎಂದು ಗುರುತಿಸಲಾಗಿದೆ.

ಪೊಲೀಸರು ಈ ಬಗ್ಗೆ ತನಿಖೆ ನಡೆಸುತ್ತಿದ್ದಾರೆ ಎಂದು ವೃತ್ತ ಅಧಿಕಾರಿ(ಎರಡನೇ) ಸಂದೀಪ್ ಕುಮಾರ್ ತಿಳಿಸಿದ್ದಾರೆ.

# ಯುಪಿಐ ಜಾರಿಯಿಂದ ಸಾರಿಗೆ ಸಂಸ್ಥೆಗೆ ಲಾಭ

**ಬೆಂಗಳೂರು,ಫೆ.7:** ದೇಶದ ಅರ್ಥ ವ್ಯವಸ್ಥೆಯಲ್ಲಿ ಯುಪಿಐ ವ್ಯವಸ್ಥೆ ದೊಡ್ಡ ಕ್ರಾಂತಿಕಾರಿಯಾದ ಬದಲಾವಣೆ ತಂದಿದೆ. ಆನ್ ಲೈನ್ ಮೂಲಕ ಆರ್ಥಿಕ ವ್ಯವಹಾರಗಳು ನಡೆಯುತ್ತಿರುವ ಪರಿಣಾಮ ನಗದು ಚಲಾವಣೆ ದೊಡ್ಡ ಪ್ರಮಾಣದಲ್ಲಿ ಕಡಿಮೆಯಾಗಿದೆ.

ಈ ಡಿಜಿಟಲ್ ಕರೆನ್ಸಿಯಿಂದಾಗಿ ಹಲವಡೆ ಪಾರದರ್ಶಕ ಪಾವತಿ ವ್ಯವಸ್ಥೆ ಜಾರಿಗೆ ಬಂದಿದೆ. ಚಿಲ್ಲರೆ ಸಮಸ್ಯೆಯನ್ನು ದೊಡ್ಡ ಪ್ರಮಾಣದಲ್ಲಿ ನೀಗಿಸಿದೆ. ಸಮೂಹ ಸಾರಿಗೆ ವ್ಯವಸ್ಥೆಯಲ್ಲಿ ಇದನ್ನು ಅಳವಡಿಸಿಕೊಂಡ ಪರಿಣಾಮ ಭ್ರಷ್ಟಾಚಾರವು ದೊಡ್ಡ ಪ್ರಮಾಣದಲ್ಲಿ ಕಡಿಮೆಯಾಗಿದೆ ಇದರಿಂದಾಗಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಸಾಕಷ್ಟು ಲಾಭ ಮಾಡುವಂತಾಗಿದೆ

ರಾಜಧಾನಿ ಬೆಂಗಳೂರಿನ ಸಂಚಾರ ದಟ್ಟಣೆಯನ್ನು ನೀಗಿಸುವಲ್ಲಿ ಪ್ರಮುಖ ಪಾತ್ರ ನಿರ್ವಹಿಸುತ್ತಿರುವ ಬೃಹತ್ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ (ಬಿಎಂಟಿಸಿ)ದಿನವೊಂದಕ್ಕೆ ಯುಪಿಐ ಮೂಲಕ ಒಂದು ಕೋಟಿ ರೂಪಾಯಿಗೂ ಅಧಿಕ ಹಣವನ್ನು ಸಂಗ್ರಹಿಸುವ ಮೂಲಕ ಹೊಸ ದಾಖಲೆ ನಿರ್ಮಿಸಿದೆ.

ಬಿಎಂಟಿಸಿಯ ಎಲ್ಲಾ ಬಸ್ಗಳಲ್ಲೂ ಗಕಖ ಕೋಡ್ ಅಳವಡಿಸಲಾಗಿದೆ. ಇದರಿಂದ ಪ್ರಯಾಣಿಕರು ಕಿರಿಕಿರಿ ಇಲ್ಲದೆ ತಾವು ಹೋಗಬೇಕಾದಲ್ಲಿಗೆ ಡಿಜಿಟಲ್ ಪಾವತಿ ಮೂಲಕ ಹಣ ನೀಡಿ ಟಿಕೆಟ್ ಪಡೆದುಕೊಂಡು ಪ್ರಯಾಣ ಬೆಳೆಸುತ್ತಿದ್ದಾರೆ ಇದರಿಂದ ಟಿಕೆಟ್ ರಹಿತ ಪ್ರಯಾಣದ ದೂರು ಕೂಡ ದೊಡ್ಡ ಪ್ರಮಾಣದಲ್ಲಿ ಕಡಿಮೆಯಾಗಿದೆ, ಚಿಲ್ಲರೆಗಾಗಿ ಕಂಡಕ್ಟರ್ ಗಳು ನಡೆಸುತ್ತಿದ್ದ ಪರದಾಟ ಕೂಡ ಇಲ್ಲದಂತಾಗಿದೆ.

ಬಿಎಂಟಿಸಿಯಲ್ಲಿ 6500 ಬಸ್ಗಳಿವೆ, ಆ ಬಸ್ಗಳಿಂದ ಪ್ರತಿದಿನ 5 ರಿಂದ 6 ಕೋಟಿ ರೂಪಾಯಿ ಟಿಕೆಟ್ ಮೂಲಕ ಆದಾಯ ಹರಿದು ಬರುತ್ತದೆ. ಇದರಲ್ಲಿ ಒಂದು ಕೋಟಿ ರೂಪಾಯಿ ಯುಪಿಐ ಮೂಲಕ ಸಂಗ್ರಹವಾಗುತ್ತಿದೆ .ಈ ಪ್ರಮಾಣ ಬರುವ ದಿನಗಳಲ್ಲಿ ಇನ್ನಷ್ಟು ಹೆಚ್ಚಳವಾಗುವ ಸಾಧ್ಯತೆ ಇದೆ ಎನ್ನುತ್ತವೆ ಬಿಎಂಟಿಸಿಯ ಮೂಲಗಳು. ಪ್ರಯಾಣಿಕರ ಟಿಕೆಟ್ ನಿಂದ ಬಿಎಂಟಿಸಿಯಲ್ಲಿ ತಿಂಗಳಿಗೆ 180 ಕೋಟಿಯಷ್ಟು ಸಂಗ್ರಹವಾದರೆ, ಅದರಲ್ಲಿ 90 ಕೋಟಿಯಷ್ಟು ಶಕ್ತಿ ಯೋಜನೆ ಟಿಕೆಟ್ ಕಲೆಕ್ಷನ್ ಆಗುತಿದೆ.

# ನಿಗಧಿತ ಸಮಯಕ್ಕೆ ಕಚೇರಿ ಕೆಲಸಕ್ಕೆ ಹಾಜರಾಗಲು ಡಿಸಿ ಸೂಚನೆ



**ತುಮಕೂರು:** ಸರ್ಕಾರಿ ಅಧಿಕಾರಿ/ನೌಕರರು ನಿಗಧಿತ ಸಮಯಕ್ಕೆ ಸರಿಯಾಗಿ ಕಚೇರಿ ಕೆಲಸಕ್ಕೆ ಹಾಜರಾಗಬೇಕೆಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಅವರು ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ತಮ್ಮ ಕಚೇರಿಯ ಅಧಿಕಾರಿ/ಸಿಬ್ಬಂದಿಗಳೊಂದಿಗೆ ಸಭೆ ನಡೆಸಿ ಮಾತನಾಡಿದ ಅವರು, ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಅಧಿಕಾರಿ/ಸಿಬ್ಬಂದಿಗಳು ಸಕಾಲಕ್ಕೆ ಕಚೇರಿ ಕೆಲಸಕ್ಕೆ ಹಾಜರಾಗಿ ವಹಿಸಿದ ಕೆಲಸ–ಕಾರ್ಯಗಳನ್ನು ನಿಗಧಿತ ಅವಧಿಯೊಳಗಾಗಿ ಪೂರ್ಣಗೊಳಿಸಬೇಕು ಎಂದು ನಿರ್ದೇಶನ ನೀಡಿದರು.

ಅಧಿಕಾರಿ/ನೌಕರರು ಪ್ರತಿ ದಿನ ಕಡ್ಡಾಯವಾಗಿ ಬಯೋಮೆಟ್ರಿಕ್ ಹಾಜರಾತಿ ದಾಖಲಿಸಬೇಕು. ಕಚೇರಿ ವೇಳೆಯಲ್ಲಿ ಕರ್ತವ್ಯದ ಸ್ಥಳದಲ್ಲಿ ಹಾಜರಿರಬೇಕು. ಯಾವುದೇ ಕಡತಗಳನ್ನು ಬಾಕಿ ಉಳಿಸಿಕೊಳ್ಳಬಾರದು. ಸ್ವೀಕೃತ ಕಡತಗಳನ್ನು ಇ–ಆಫೀಸ್ ಮೂಲಕವೇ ಮುಂದಿನ ಹಂತಕ್ಕೆ ವಿಲೇವಾರಿ ಮಾಡಲು ಕ್ರಮ ಕೈಗೊಳ್ಳಬೇಕು ಎಂದು ಸೂಚನೆ ನೀಡಿದರು.

ಜಿಲ್ಲೆಯಲ್ಲಿರುವ ಇತರೆ ಇಲಾಖೆ ಕಚೇರಿಗಳಿಗೂ ಅನಿರೀಕ್ಷಿತ ಭೇಟಿ ನೀಡಿ ಸಿಬ್ಬಂದಿಗಳ ಸಮಯ ಪಾಲನೆ, ಕಾರ್ಯಕ್ಷಮತೆ ಬಗ್ಗೆ ಪರಿಶೀಲಿಸಲಾಗುವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಡಾ: ಎನ್. ತಿಪ್ಪೇಸ್ವಾಮಿ, ಜಿಲ್ಲಾಧಿಕಾರಿಗಳ ಕಚೇರಿಯ ವಿವಿಧ ಅಧಿಕಾರಿ/ಸಿಬ್ಬಂದಿಗಳು ಹಾಜರಿದ್ದರು.

# ಕೃಷಿ ಇಲಾಖೆ ಅಧಿಕಾರಿಗಳ ದಾಳಿ: ಕಳಪೆ ದರ್ಜೆಯ ರಸಗೊಬ್ಬರ ವಶ



**ತುಮಕೂರು**– ಕೃಷಿ ಇಲಾಖೆಯ ಅನುಮತಿ ಪಡೆಯದೆ ಕಳಪೆ ದರ್ಜೆಯ ಹರಳು ರೂಪದ ಎನ್‌ಪಿಕೆ ಮಿಶ್ರಣ ರಸಗೊಬ್ಬರವನ್ನು ಮಾರಾಟ ಮಾಡುತ್ತಿದ್ದ ಅಂಗಡಿ ಮೇಲೆ ಕೃಷಿ ಜಾರಿ ದಳದ ಅಧಿಕಾರಿಗಳು ದಾಳಿ ನಡೆಸಿ 1.15 ಲಕ್ಷ ರೂ. ಬೆಲೆ. 11.25 ಟನ್ ರಸಗೊಬ್ಬರವನ್ನು ವಶಪಡಿಸಿಕೊಂಡಿದ್ದಾರೆ.

ತುರುವೇಕೆರೆ ಪಟ್ಟಣದ ಬಿ.ಎಸ್. ರಸ್ತೆಯಲ್ಲಿರುವ ಶ್ರೀ ಸ್ವಾಮಿ ಅಯ್ಯಪ್ಪ ಫರ್ಟಿಲೈಸರ್ಸ್ ರಸಗೊಬ್ಬರ ಮಾರಾಟ ಮಳಿಗೆಯಲ್ಲಿ ಇಲಾಖೆ ಅನುಮತಿ ಪಡೆಯದೆ ಕಳಪೆ ದರ್ಜೆಯ ರಸಗೊಬ್ಬರ ಮಾರಾಟ ಮಾಡಲಾಗುತ್ತಿದೆ ಎಂಬ ಬಗ್ಗೆ ಬಂದ ದೂರಿನ ಮೇರೆಗೆ ಕೃಷಿ ಇಲಾಖೆ ಜಾರಿ ದಳದ ಸಹಾಯಕ ನಿರ್ದೇಶಕರಾದ ಪುಟ್ಟರಂಗಪ್ಪ, ಅಶ್ವತ್ಥ್‌ನಾರಾಯಣ ಹಾಗೂ ಸಿಬ್ಬಂದಿ ದಾಳಿ ನಡೆಸಿದಾಗ ವಿಜಾಪುರ ಜಿಲ್ಲೆಯ ಮೆ. ಶಾಂತಿ ಜೀವನ್ ಆಗ್ರೋ ಫುಡ್ಸ್ ರವರಿಂದ ಅನಧಿಕೃತವಾಗಿ ಸರಬರಾಜು ಆದ 225 ಬ್ಯಾಗ್ ಕಳಪೆ ದರ್ಜೆಯ ಹರಳು ರೂಪದ ರಸಗೊಬ್ಬರ ಮಾರಾಟ ಮಾಡುತ್ತಿದ್ದದ್ದು ಪತ್ತೆಯಾಗಿದೆ.

ತಕ್ಷಣ ಕಾರ್ಯಪ್ರವೃತ್ತರಾದ ಅಧಿಕಾರಿಗಳು 1,15,425 ರೂ. ಬೆಲೆಯ 11.25 ಟನ್ ರಸಗೊಬ್ಬರವನ್ನು ವಶಕ್ಕೆ ಪಡೆದು ಮುಂದಿನ ಕ್ರಮ ಕೈಗೊಂಡಿ–ದ್ದಾರೆ.

ಈ ದಾಳಿಯಲ್ಲಿ ತುರುವೇಕೆರೆ ಸಹಾಯಕ ಕೃಷಿ ನಿರ್ದೇಶಕರ ಕಚೇರಿಯ ತಾಂತ್ರಿಕ ಅಧಿಕಾರಿ ಗಿರೀಶ್ ಮತ್ತು ಸಿಬ್ಬಂದಿ ಪಾಲ್ಗೊಂಡಿದ್ದರು.

# ಅಧಿಕಾರ ಶಾಶ್ವತವಲ್ಲ, ಎಲ್ಲರ ನೆನಪಿನಲ್ಲಿ ಉಳಿಯುವಂತ ಕೆಲಸ ಮಾಡಬೇಕೆಂಬ ಜಾಯಮಾನ ನನ್ನದು : ಡಾ.ಎಂ. ಚಂದ್ರಪ್ಪ

**ಹೊಳಲ್ಕೆರೆ :** ಅಧಿಕಾರ ಶಾಶ್ವತವಲ್ಲ. ಇದ್ದಾಗ ಎಲ್ಲರ ನೆನಪಿನಲ್ಲಿ ಉಳಿಯುವಂತ ಕೆಲಸ ಮಾಡಬೇಕೆಂಬ ಜಾಯಮಾನ ನನ್ನದು ಎಂದು ಹೊಳಲ್ಕೆರೆ ಶಾಸಕ ಡಾ.ಎಂ. ಚಂದ್ರಪ್ಪ ಹೇಳಿದರು.



ತಾಲ್ಲೂಕಿನ ಮಲ್ಲೇನಹಳ್ಳಿ ಗ್ರಾಮದ ಹತ್ತಿರ ಒಂದು ಕೋಟಿ ರೂ.ವೆಚ್ಚದಲ್ಲಿ ಕೆರೆ ಅಭಿವೃದ್ಧಿ ಕಾಮಗಾರಿಗೆ ಗುರುವಾರ ಭೂಮಿಪೂಜೆ ಸಲ್ಲಿಸಿ ಮಾತನಾಡಿದರು.

ರೈತರಿಗೆ ನೀರು ವಿದ್ಯುತ್ ಎರಡು ಅತಿ ಮುಖ್ಯವಾಗಿ ಬೇಕಾಗಿರುವುದರಿಂದ ಚಿಕ್ಕಜಾಜೂರಿನ ಕೋಟೆಹಾಳ್ ಸಮೀಪ ಐದು ನೂರು ಕೋಟಿ ರೂ.ವೆಚ್ಚದಲ್ಲಿ ವಿದ್ಯುತ್ ಪವರ್ ಸ್ಟೇಷನ್ ಕಟ್ಟಿಸುತ್ತಿದ್ದೇನೆ. ಜೋಗ್‌ಫಾಲ್ಸ್‌ನಿಂದ ಇಲ್ಲಿಗೆ ನೇರವಾಗಿ ವಿದ್ಯುತ್ ಪೂರೈಕೆಯಾಗಲಿದೆ. ಇದರಿಂದ ಇನ್ನು ನೂರು ವರ್ಷಗಳ ಕಾಲ ವಿದ್ಯುತ್ ಸಮಸ್ಯೆ ರೈತರನ್ನು ಕಾಡುವುದಿಲ್ಲ ಎಂದರು.

ಹಿರಿಯೂರಿನ ವಾಣಿವಿಲಾಸಸಾಗರದ ಮಧ್ಯೆ ನಲವತ್ತು ಅಡಿ ಆಳದಲ್ಲಿ ಪಿಲ್ಲರ್ ಎತ್ತಿ ಮೋಟಾರ್ ಕೂರಿಸಿ 67 ಕೋಟಿ ರೂ.ವೆಚ್ಚದಲ್ಲಿ ಫಿಲ್ಟರ್ ಅಳವಡಿಸಿ ತಾಲ್ಲೂಕಿನ ಪ್ರತಿ ಹಳ್ಳಿಯಲ್ಲಿ ಮನೆ ಮನೆಗೆ ಶುದ್ಧ ಕುಡಿಯುವ ನೀರು ಇನ್ನು ನಾಲ್ಕೈದು ತಿಂಗಳಲ್ಲಿ ಪೂರೈಕೆಯಾಗಲಿದೆ. ಕ್ಷೇತ್ರಾದ್ಯಂತ ಕೆರೆ ತುಂಬಿಸುವ ಯೋಜನೆ, ಗುಣ ಮಟ್ಟದ ಆಸ್ಪತ್ರೆ, ಶಾಲಾ–ಕಾಲೇಜು, ಸಿ.ಸಿ.ರಸ್ತೆಗಳನ್ನು ನಿರ್ಮಿಸಿದ್ದೇನೆ. ವೈದ್ಯರುಗಳು ಬೇರೆ ಊರಿನಿಂದ ಬರುವುದು ಕಷ್ಟವಾಗುತ್ತದೆಂದು ವಸತಿ ಗೃಹಗಳನ್ನು ಕಟ್ಟಿಸಿದ್ದೇನೆ. ಯಾರಿಂದಲೂ ಏನನ್ನು ಹೇಳಿಸಿಕೊಳ್ಳದೆ ಎಲ್ಲಿ ಏನು ಅಗತ್ಯವಿದೆ ಎನ್ನುವುದನ್ನು ಮನಗಂಡು ಹಗಲು–ರಾತ್ರಿ ಕ್ಷೇತ್ರದ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ಶ್ರಮಿಸುತ್ತಿದ್ದೇನೆಂದು ತಿಳಿಸಿದರು.

31 ವರ್ಷಗಳ ಹಿಂದೆ ಪ್ರಥಮ ಬಾರಿಗೆ ಭರಮಸಾಗರ ವಿಧಾನಸಭೆಯಿಂದ ಸ್ಪರ್ಧಿಸಿ ಶಾಸಕನಾದವನು. ಹೊಳಲ್ಕೆರೆಯಲ್ಲಿ ಮೂರು ಬಾರಿ ನನ್ನನ್ನು ಗೆಲ್ಲಿಸಿ ಅಧಿಕಾರ ಕೊಟ್ಟಿದ್ದೀರ. ನಿಮ್ಮಗಳ ಋಣ ನನ್ನ ಮೇಲಿದೆ. ಸಾಸಲು ಹಳ್ಳದಿಂದ ಹಿರೇಬೆನ್ನೂರು ಸರ್ಕಲ್‌ರವರೆ ರಸ್ತೆಗೆ ನೂರು ಕೋಟಿ ರೂ.ಗಳನ್ನು ನೀಡಿದ್ದೇನೆ. ಸಾಸ್ವೆಹಳ್ಳಿ ಬಳಿ ಸೇತುವೆಗೆ ಐದು ಕೋಟಿ ರೂ.ಗಳನ್ನು ಬಿಡುಗಡೆ ಮಾಡಿದ್ದೇನೆ. ಹೊಳಲ್ಕೆರೆಯಲ್ಲಿ ಹೈಟೆಕ್ ಆಸ್ಪತ್ರೆ ಕಟ್ಟಿಸಿದ್ದೇನೆ. ಸುತ್ತಮುತ್ತಲಿನ ಹತ್ತಾರು ಗ್ರಾಮಗಳ ಬಡ ರೋಗಿಗಳಿಗೆ ಅನುಕೂಲವಾಗಲಿ ಎನ್ನುವುದು ನನ್ನ ಉದ್ದೇಶ ಎಂದು ನುಡಿದರು.

ಹೊಳಲ್ಕೆರೆ ಬಿಜೆಪಿ.ಮಂಡಲ ಮಾಜಿ ಅಧ್ಯಕ್ಷ ಸಿದ್ದೇಶ್, ಶರಣಪ್ಪ, ಸಿದ್ದೇಶಪ್ಪ, ಕುಮಾರ್, ಸಣ್ಣ ನೀರಾವರಿ ಇಲಾಖೆ ಇಂಜಿನಿಯರ್ ನವೀನ್ ಗ್ರಾಮದ ಮುಖಂಡರುಗಳು ಈ ಸಂದರ್ಭದಲ್ಲಿದ್ದರು.

# ಒಂಭತ್ತು ವಿವಿಗಳನ್ನು ಮುಚ್ಚಲು ಹೊರಟಿರುವ ಸರ್ಕಾರದ ಕ್ರಮಕ್ಕೆ ಎಬಿವಿಪಿ ಖಂಡನೆ

**ದಾವಣಗೆರೆ:** ಆರ್ಥಿಕವಾಗಿ ದಿವಾಳಿಯಾಗಿರುವ ರಾಜ್ಯ ಸರ್ಕಾರದ ಸಚಿವ ಸಂಪುಟವು 9 ವಿಶ್ವವಿದ್ಯಾನಿಲಯಗಳನ್ನು ಮುಚ್ಚಲು ತೆಗೆದುಕೊಂಡಿರುವ ತೀರ್ಮಾನವನ್ನು ಖಂಡಿಸಿ, ಅಖಿಲ ಭಾರತ ವಿದ್ಯಾರ್ಥಿ ಪರಿಷತ್ತಿನ ಜಿಲ್ಲಾ ಘಟಕವತಿಯಿಂದ ಸರ್ಕಾರಕ್ಕೆ ಜಿಲ್ಲಾಧಿಕಾರಿಗಳ ಮೂಲಕ ಮನವಿ ಸಲ್ಲಿಸಲಾಯಿತು.

ಸೋಮವಾರ ಎಬಿವಿಪಿ ನಿಯೋಗವು ಜಿಲ್ಲಾಧಿಕಾರಿಗಳ ಕಚೇರಿಗೆ ತೆರಳಿ ಎಡಿಸಿ ಲೋಕೇಶ್ ಅವರಿಗೆ ಮನವಿ ಸಲ್ಲಿಸಿತು.

ಚಾಮರಾಜನಗರ, ಕೊಪ್ಪಳ, ಬೀದರ್, ಕೊಡಗು ಅಂತಹ ಹಿಂದುಳಿದ ಜಿಲ್ಲೆಗಳಲ್ಲಿರುವ ವಿಶ್ವವಿದ್ಯಾಲಯಗಳನ್ನು ಮುಚ್ಚಲು

ಹೊರಟಿರುವ ರಾಜ್ಯ ಸರ್ಕಾರದ ನಡೆಯನ್ನು ಎಬಿವಿಪಿ ಖಂಡಿಸುತ್ತದೆ, ಅಲ್ಲದೇ ಅಂತಹ ಜಿಲ್ಲೆಗಳ ಜನರಿಗೆ ಅನ್ಯಾಯ

ಎಸಗಿದಂತಾಗುತ್ತದೆ. ರಾಜ್ಯ ಸರ್ಕಾರ ತನ್ನ ಗ್ಯಾರಂಟಿಗಳಿಗೆ ಪ್ರತಿ ವರ್ಷ 50 ಸಾವಿರ ಕೋಟಿ ರೂಗಳನ್ನು ನೀಡುತ್ತಿದೆ. ಅದರಲ್ಲಿ 1% ರಷ್ಟು

ಅಂದರೆ 500 ಕೋಟಿ ರೂ.ಗಳನ್ನು ವಿಶ್ವವಿದ್ಯಾಲಯಗಳಿಗೆ ನೀಡಿದರೆ ರಾಜ್ಯದ ವಿಶ್ವವಿದ್ಯಾಲಯಗಳ ಸ್ಥಿತಿ-ಗತಿ ಸುಧಾರಿಸುತ್ತದೆ ಎಂದು ತಿಳಿಸಿದೆ.

ಕಳೆದ 10-15 ವರ್ಷಗಳಿಂದ ರಾಜ್ಯ ಸರ್ಕಾರಗಳು ವಿಶ್ವವಿದ್ಯಾಲಯಗಳಿಗೆ ಯಾವುದೇ ರೀತಿಯ ಅನುದಾನಗಳನ್ನು

ನೀಡಿರುವುದಿಲ್ಲ. ಎಲ್ಲಾ ವಿಶ್ವವಿದ್ಯಾನಿಲಯಗಳು ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕ, ಮರುಎಣಿಕೆ ಅಥವಾ ಮರು ಮೌಲ್ಯಮಾಪನ ಶುಲ್ಕಗಳಲ್ಲಿ

ಮತ್ತು ಆಂತರಿಕ ಹಣಕಾಸು ಉತ್ಪಾದನೆಯ ಮೂಲಕ ಇಂದು ವಿಶ್ವವಿದ್ಯಾಲಯಗಳು ನಡೆಸುತ್ತಿರುವುದು ಅವಮಾನದ ಸಂಗತಿಯಾಗಿದೆ.

ಕರ್ನಾಟಕದಂತಹ ರಾಜ್ಯದಲ್ಲಿ ಶಿಕ್ಷಣ ಕ್ಷೇತ್ರಕ್ಕೆ ತನ್ನದೇ ಆದ ಗೌರವ ಮತ್ತು ಹೆಗ್ಗಳಿಕೆ ಇದೆ. ಆದ್ದರಿಂದ ಕೇವಲ ಹಣಕಾಸಿನ



ದೃಷ್ಟಿಯಿಂದ ವಿಶ್ವವಿದ್ಯಾಲಯಗಳನ್ನು ಮುಚ್ಚಲು ಹೊರಟಿರುವುದು, ಒಂದು ಘನ ಸರ್ಕಾರಕ್ಕೆ ಶೋಭೆ ತರುವಂತಹ ಕಾರ್ಯವಲ್ಲ ಎಂದು ಎಬಿವಿಪಿ ಖಂಡಿಸಿದೆ.

ಹಿಂದಿನ ರಾಜ್ಯ ಸರಕಾರ ಜಿಲ್ಲೆಗೊಂದು ವಿಶ್ವವಿದ್ಯಾಲಯಗಳನ್ನು ಪಾರಂಭಿಸಿದರೆ ಅಲ್ಲಿನ ಗ್ರಾಮೀಣ ಮಕ್ಕಳ ಉನ್ನತ ಶಿಕ್ಷಣಕ್ಕೆ

ಅನುಕೂಲವಾಗುತ್ತದೆ ಎಂಬ ಉದ್ದೇಶದಿಂದ ಹೊಸದಾಗಿ 10 ವಿಶ್ವವಿದ್ಯಾನಿಲಯಗಳನ್ನು ಪ್ರಾರಂಭಿಸಿತ್ತು. ಹಾಸನ, ಚಾಮರಾಜನಗರ, ಹಾವೇರಿ, ಕೊಡಗು, ಕೊಪ್ಪಳ, ಬಾಗಲಕೋಟೆ ಮಹಾರಾಣಿ ಕ್ಲಸ್ಟರ್, ಮಂಡ್ಯ, ನೃಪತುಂಗ ವಿಶ್ವವಿದ್ಯಾಲಯ ಹಾಗೂ ಬೀದರ್ನಲ್ಲಿ ಹೊಸ

ವಿಶ್ವವಿದ್ಯಾನಿಲಯ ಪಾರಂಭಿಸುವುದಕ್ಕೆ ಹಿಂದಿನ ಸರ್ಕಾರ ಆಡಳಿತಾತ್ಮಕ ಅನುಮೋದನೆ ನೀಡಿತ್ತು.ಇಂದಿನ ರಾಜ್ಯ ಸರ್ಕಾರ ವಿಶ್ವವಿದ್ಯಾನಿಲಯಗಳಿಗೆ ಅನುದಾನ ನೀಡಿ, ಅಭಿವೃದ್ಧಿಪಡಿಸಿದೆ. ಅವುಗಳನ್ನು ಮುಚ್ಚುವುದಕ್ಕೆ ಸಚಿವ ಸಂಪುಟ ಉಪ ಸಮಿತಿಗಳಲ್ಲಿ ನಿರ್ಧರಿಸುವುದು ಗ್ರಾಮೀಣ ಮಕ್ಕಳ ಶಿಕ್ಷಣಕ್ಕೆ ರಾಜ್ಯ ಸರ್ಕಾರ ಅನ್ಯಾಯ ಮಾಡುತ್ತಿರುವುದನ್ನು ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ತೀವ್ರವಾಗಿ ಖಂಡಿಸುತ್ತದೆ ಎಂದರು.

ಸರ್ಕಾರಿ ವಿಶ್ವವಿದ್ಯಾಲಯಗಳನ್ನು ಬಲಿಷ್ಠಗೊಳಿಸುವ ಕಾಳಜಿ ಮತ್ತು ಇಚ್ಛಾಶಕ್ತಿಯನ್ನು ರಾಜ್ಯ ಸರ್ಕಾರ ಮಾಡಬೇಕು. ರಾಜ್ಯದಲ್ಲಿ ಇತ್ತೀಚೆಗೆ ಖಾಸಗಿ ವಿಶ್ವವಿದ್ಯಾಲಯಗಳು ಹೆಚ್ಚುತ್ತಿರುವ ಸಂದರ್ಭದಲ್ಲಿ ಸರ್ಕಾರಿ ವಿಶ್ವವಿದ್ಯಾಲಯಗಳನ್ನು ಮುಚ್ಚುತ್ತಿರುವುದರಿಂದ ರಾಜ್ಯದ ಬಡ ಮತ್ತು ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಮಾಡುತ್ತಿರುವ ಅನ್ಯಾಯವಾಗಿದೆ. ರಾಜ್ಯ ಸರ್ಕಾರ ಉಚಿತ ಗ್ಯಾರಂಟಿ ಯೋಜನೆಗಳಿಗಾಗಿ ಸಾವಿರಾರು ಕೋಟಿ ರೂ.ಗಳನ್ನು ಬಜೆಟ್ನಲ್ಲಿ ಕೊಟ್ಟಿದೆ. ಆದರೆ ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗೆ ಹಣ ಒದಗಿಸುವುದಕ್ಕೆ ಆಗದೆ, 9ವಿಶ್ವವಿದ್ಯಾನಿಲಯಗಳನ್ನು ಮುಚ್ಚಲು ಮುಂದಾಗಿರುವುದು ಖಂಡನಾರ್ಹವಾಗಿದೆ.

ಯಾವ ಶಿಕ್ಷಣ ತಜ್ಞರ ಶಿಫಾರಸ್ಸಿನ ಮೇಲೆ ವಿಶ್ವವಿದ್ಯಾನಿಲಯಗಳನ್ನು ಮುಚ್ಚುತ್ತಿದ್ದೀರಾ? ಎಂಬುವುದನ್ನು ತಿಳಿಸಬೇಕು ಎಂದು

ವಿದ್ಯಾರ್ಥಿ ಪರಿಷತ್ ಆಗ್ರಹಿಸಿತು.

ರಾಜ್ಯದ ಉನ್ನತ ಶಿಕ್ಷಣ ಪರಿಷತ್ ಶಿಫಾರಸ್ಸು ಮಾಡಿರುವ ಹಣವನ್ನು ರಾಜ್ಯ ಸರ್ಕಾರ ಕೂಡಲೇ ಬಿಡುಗಡೆ ಮಾಡಬೇಕು ಇಲ್ಲವಾದಲ್ಲಿ ವಿದ್ಯಾರ್ಥಿ ಪರಿಷತ್ ರಾಜ್ಯದಾದ್ಯಂತ ಪ್ರತಿಭಟನೆಯನ್ನು ನಡೆ ಸುತ್ತದೆ ಎಂದು ಎಚ್ಚರಿಸಿದರು. ಈ ಸಂದರ್ಭದಲ್ಲಿ

ಎಬಿವಿಪಿ ಕರ್ನಾಟಕ ದಕ್ಷಿಣ ರಾಜ್ಯ ಕಾರ್ಯದರ್ಶಿ ಹೆಚ್.ಕೆ. ಪ್ರವೀಣ್ ಹಾಗೂ ಇನ್ನಿತರ ಪ್ರಮುಖರು ಉಪಸ್ಥಿತರಿದ್ದರು.

# ಎಸ್.ಸಿ.ಎಸ್.ಪಿ ಹಾಗೂ ಟಿ.ಎಸ್.ಪಿ. ಪ್ರಗತಿ ಪರಿಶೀಲನೆ
# ನಿಗದಿಪಡಿಸಿದ ಗುರಿ ಸಾಧಿಸಲು ಸೂಚನೆ

**ಗದಗ:** ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಉಪಹಂಚಿಕೆ ಯೋಜನೆಯಡಿ ಅನುಷ್ಠಾನಿತ ಕಾಮಗಾರಿಗಳ ಆರ್ಥಿಕ ಹಾಗೂ ಭೌತಿಕ ಗುರಿಯನ್ನು ನಿಗದಿತ ಕಾಲಮಿತಿಯಲ್ಲಿಯೇ ಸಾಧಿಸಬೇಕೆಂದು ಎಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ತಿಳಿಸಿದರು.

ಜಿಲ್ಲಾಡಳಿತ ಭವನದ ಕಚೇರಿ ಸಭಾಂಗಣದಲ್ಲಿ ಶನಿವಾರ ಎಸ್.ಸಿ.ಎಸ್.ಪಿ. ಹಾಗೂ ಟಿ.ಎಸ್.ಪಿ. ಯೋಜನೆಯಡಿ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸರ್ಕಾರದಿಂದ ಬಿಡುಗಡೆಯಾದ ಅನುದಾನದಲ್ಲಿ ಅರ್ಹ ಫಲಾನುಭವಿಗಳ ಆಯ್ಕೆ ಮಾಡುವಾಗ ಪಾರದರ್ಶಕತೆಯಿರಬೇಕು. ವಿಳಂಬ ಧೋರಣೆ ಮಾಡಬಾರದು. ಎಸ್ಸಿ ಎಸ್ಟಿ ಕಾಲೋನಿಯಲ್ಲಿ ಕೈಗೊಳ್ಳಬೇಕಾದ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳುವಾಗ ಗುಣಮಟ್ಟದ ಕಡೆಗೂ ನಿಗಾವಹಿಸಬೇಕು. ಆಯಾ ಆರ್ಥಿಕ ಸಾಲಿನಲ್ಲಿ ಅನುಷ್ಠಾನಿತ ಕಾಮಗಾರಿಗಳನ್ನು ನಿಗದಿತ ಕಾಲಮಿತಿಯೊಳಗೆ ಪೂರ್ಣಗೊಳಿಸುವತ್ತ ಇಲಾಖೆಯ ಅಧಿಕಾರಿಗಳು ಕ್ರಮ ವಹಿಸಬೇಕು. ಯಾವುದೇ ಕಾರಣಕ್ಕೂ ಬಿಡುಗಡೆಯಾದ ಅನುದಾನ ಲ್ಯಾಪ್ಸ್ ಆಗದಂತೆ ನೋಡಿಕೊಳ್ಳಬೇಕು. ತಾಲೂಕು ಮಟ್ಟದಲ್ಲಿಯೂ ಸಹ ಎಸ್ಸಿಪಿ / ಟಿಎಸ್ಪಿ ಯೋಜನೆಯ ಪ್ರಗತಿ ಪರಿಶೀಲನಾ ಸಭೆಯನ್ನು ಕಡ್ಡಾಯವಾಗಿ ನಡೆಸಬೇಕು.

ವಿವಿಧ ಇಲಾಖೆಯವರು ಎಸ್.ಸಿ.ಪಿ./ ಟಿ.ಎಸ್.ಪಿ. ಯೋಜನೆಯಡಿ ಬಿಡುಗಡೆಯಾದ ಹಾಗೂ ಖರ್ಚಾದ ಅನುದಾನದ ವಿವರ, ಫಲಾನುಭವಿಗಳ ಆಯ್ಕೆ ಹಾಗೂ ಅಗತ್ಯವಿರುವ ಅನುದಾನದ ವಿವರವನ್ನು ಕೇಂದ್ರ ಕಚೇರಿಗೆ ಕಳುಹಿಸುವಾಗ ಅದರ ಒಂದು ಪ್ರತಿಯನ್ನು ಸಮಾಜ ಕಲ್ಯಾಣ ಇಲಾಖೆಗೆ ಸಲ್ಲಿಸಬೇಕು ಎಂದರು.

ಎಸ್ಸಿಪಿ ಟಿಎಸ್ಪಿ ಯೋಜನೆಗೆ ಬಿಡುಗಡೆಯಾದ ಅನುದಾನ ದುರ್ಬಳಕೆ, ದುರುಪಯೋಗ ಹಾಗೂ ನಿಗದಿತ ಪ್ರಮಾಣಕ್ಕಿಂತ ಕಡಿಮೆ ಬಳಕೆ ಆಗದೇ ಇರುವಂತೆ ಸಂಬಂಧಿತ ಇಲಾಖೆಯ



ಅಧಿಕಾರಿಗಳು ನೋಡಿಕೊಳ್ಳುವುದು ಅವರ ಜವಾಬ್ದಾರಿಯಾಗಿರುತ್ತದೆ. ಇಲ್ಲದಿದ್ದಲ್ಲಿ ಕ್ರಿಮಿನಲ್ ಪ್ರಕರಣವೆಂದು ಪರಿಗಣಿಸಿ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿಗಳು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಇದೇ ಸಂದರ್ಭದಲ್ಲಿ ಸಕಾಲ ಯೋಜವಿನಾಕಾರಣ ಸ್ವೀಕರಿಸಿದ ಅರ್ಜಿಗಳನ್ನು ತಿರಸ್ಕಾರ ಮಾಡಬಾರದು.

ಹಾಗೂ ಸ್ವೀಕರಿಸಿದ ಅರ್ಜಿಗಳಿಗೆ ಕಾಲಮಿತಿಯೊಳಗೆ ವಿಲೇವಾರಿ ಮಾಡಲು ಕ್ರಮ ಕೈಗೊಳ್ಳಬೇಕು. ಲೋಕೋಪಯೋಗಿ ಇಲಾಖೆ, ಶಿಕ್ಷಣ ಇಲಾಖೆ, ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಸಕಾಲದಲ್ಲಿ ಅರ್ಜಿಗಳ ವಿಲೇವಾರಿ ಸಮರ್ಪಕ ಕೆಲಸ ನಿರ್ವಹಣೆಯಾಗದಿದ್ದರೆ ಸಂಬಂಧಿಸಿದ ಅಧಿಕಾರಿಗಳಿಗೆ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದರು.

ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ಮಹೇಶ ಪೋತದಾರ ಅವರು ಮಾತನಾಡಿ ಎಸ್.ಸಿ.ಎಸ್ಪಿ ಉಪಹಂಚಿಕೆ ಯೋಜನೆಯಡಿ ಜಿಲ್ಲೆಯಲ್ಲಿ ವಿವಿಧ ಇಲಾಖೆ ಸೇರಿದಂತೆ ಜನವರಿ 2025 ರವರೆಗೆ ಒಟ್ಟಾರೆ 83.01 ಕೋಟಿ ರೂ.ಅನುದಾನ ಬಿಡುಗಡೆಯಾಗಿದ್ದು, ಆ ಪೈಕಿ 71.72 ಕೋಟಿ ರೂ.ಖರ್ಚಾಗಿದೆ. 40031 ಫಲಾನುಭವಿಗಳು ಯೋಜನೆಯ ಸೌಲಭ್ಯ ಪಡೆದಿದ್ದಾರೆ. ಅದೇ ರೀತಿಯಾಗಿ ಟಿ.ಎಸ್.ಪಿ.ಯೋಜನೆಯಡಿ ವಿವಿಧ ಇಲಾಖೆ ಸೇರಿದಂತೆ ಜನವರಿ 2025 ರವರೆಗೆ 18.71 ಕೋಟಿ ರೂ.ಬಿಡುಗಡೆಯಾಗಿದ್ದು ಆ ಪೈಕಿ 15.68 ಕೋಟಿ ರೂ. ಖರ್ಚಾಗಿದೆ. 17326 ಫಲಾನುಭವಿಗಳು ಯೋಜನೆಯ ಸೌಲಭ್ಯ ಪಡೆದಿದ್ದಾರೆ ಎಂದು ಸಭೆಗೆ ತಿಳಿಸಿದರು.

ಸಭೆಯಲ್ಲಿ ಉಪವಿಭಾಗಾಧಿಕಾರಿ ಗಂಗಪ್ಪ ಎಂ, ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ, ಜಿ.ಪಂ. ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ,

ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸವರಾಜ ಕೊಟ್ಟೂರ, ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಎಸ್. ಎಸ್.ನೀಲಗುಂದ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಜಂಟಿ ನಿರ್ದೇಶಕ ವಿನೋದಕುಮಾರ್ ಹೆಗ್ಗಳಗಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯ ಸ್ವಾಮಿ, ವಾರ್ತಾಧಿಕಾರಿ ವಸಂತ ಮಡ್ಲೂರ ಸೇರಿದಂತೆ ವಿವಿದ ಇಲಾಖೆಯ ಅಧಿಕಾರಿ ಹಾಗೂ ಸಿಬ್ಬಂದಿಗಳು ಹಾಜರಿದ್ದರು.

# ಮಕ್ಕಳಿಗೆ ಪಠ್ಯದೊಂದಿಗೆ ಕೌಶಲ್ಯ ತರಬೇತಿಗೆ ಚಿಂತನೆ

**ಶಿವಮೊಗ್ಗ :** ಮುಂದಿನ ಶೈಕ್ಷಣಿಕ ಸಾಲಿನಿಂದಲೇ ರಾಜ್ಯದಲ್ಲಿ 8 ರಿಂದ 12ನೇ ತರಗತಿಯವರೆಗಿನ ಎಲ್ಲಾ ಮಕ್ಕಳ ಪಠ್ಯದ ಜೊತೆಗೆ ಕೌಶಲ್ಯ ತರಗತಿಗಳನ್ನು ಆರಂಭಿಸಲು ಉದ್ದೇಶಿಸಲಾಗಿದ್ದು, ಶೀಘ್ರದಲ್ಲಿ ವಿವರಗಳನ್ನು ಬಿಡುಗಡೆಗೊಳಿಸಲಾಗುವುದು ಎಂದು ರಾಜ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಮಧು ಬಂಗಾರಪ್ಪ ಅವರು ಹೇಳಿದರು.

ಅವರು ಇಂದು ಚಾಲುಕ್ಯನಗರದ ಕನ್ನಡ ಸಾಹಿತ್ಯ ಪರಿಷತ್ಅಧೀನದಲ್ಲಿರುವ ಸಾಹಿತ್ಯಗ್ರಾಮಕ್ಕೆ ಭೇಟಿ ನೀಡಿ, ಮಾಜಿ ಮುಖ್ಯಮಂತ್ರಿ ದಿ.ಎಸ್.ಬಂಗಾರಪ್ಪ ಅವರ ಹೆಸರಿನಲ್ಲಿ ಸ್ಥಾಪಿಸಲು ಉದ್ದೇಶಿಸಿರುವ ದಿ.ಎಸ್.ಬಂಗಾರಪ್ಪ ಗ್ರಂಥಾಲಯಕ್ಕೆ ಸಚಿವರು ತಮ್ಮ ವೇತನದಲ್ಲಿ 5ಲಕ್ಷ ರೂ.ಗಳ ಚೆಕ್ಕನ್ನು ಪರಿಷತ್ಅಧ್ಯಕ್ಷ ಡಿ.ಮಂಜುನಾಥ್ಅವರಿಗೆ ಹಸ್ತಾಂತರಿಸಿ ಮಾತನಾಡುತ್ತಿದ್ದರು.

ಕನ್ನಡ ಭಾಷೆಯ ಸರ್ವಾಂಗೀಣ ವಿಕಾಸಕ್ಕೆ ಶ್ರಮಿಸುವುದಾಗಿ ತಿಳಿಸಿದ ಅವರು, ಸಾಹಿತ್ಯಗ್ರಾಮದಲ್ಲಿ 2.50ಕೋಟಿ ವೆಚ್ಚದಲ್ಲಿ ನಿರ್ಮಿಸಲು ಉದ್ದೇಶಿಸಿರುವ ಮುಂದುವರೆದ ಕಟ್ಟಡ ಕಾಮಗಾರಿಗೆ ಸ್ಥಳೀಯ ಜನಪ್ರತಿನಿಧಿಗಳಿಂದ ಹಾಗೂ ಸರ್ಕಾರದ ವತಿಯಿಂದ ಅಗತ್ಯ ನೆರವು ಕೊಡಿಸುವುದಾಗಿ ತಿಳಿಸಿದರು. ಕನ್ನಡ ಸಾಹಿತ್ಯ ಸಮ್ಮೇಳನಗಳು ಕನ್ನಡ ಭಾಷೆಯನ್ನು ಉಳಿಸಿ ಬೆಳೆಸುವ ಕಾರ್ಯದ ಭಾಗವಾಗಿವೆ ಎಂದರು.

ಕನ್ನಡ ಭಾಷೆಯ ಉಳಿವು



ವಿಕಾಸಗೊಳಿಸುವ ಸದುದ್ದೇಶದಿಂದ ಗ್ರಂಥಾಲಯಕ್ಕೆ ನೆರವು ನೀಡುವ ಮೂಲಕ ಅಲ್ಪಸೇವೆಯನ್ನು ನೀಡಲು ಉದ್ದೇಶಿಸಿರುವುದಾಗಿ ತಿಳಿಸಿದ ಅವರು, ಕನ್ನಡ ನಾಡು-ನುಡಿಯ ಬೆಳವಣಿಗೆ ಮತ್ತು ನೆಲ-ಜಲ ಸಂರಕ್ಷಣೆ ಸೇರಿದಂತೆ ಇಲ್ಲಿನ ಶ್ರೀಮಂತ ಕಲೆ, ಸಾಹಿತ್ಯ, ಸಂಗೀತ, ನೃತ್ಯ ಪರಂಪರೆಯನ್ನು ಒಳಗೊಂಡಂತೆ ಕನ್ನಡತನದ ವಿಷಯ ಬಂದಾಗ ಪೂಜ್ಯ ತಂದೆಯವರಾದ ದಿ.ಎಸ್.ಬಂಗಾರಪ್ಪನವರಂತೆ ರಾಜಿಗೆ ಸಿದ್ದವಿಲ್ಲದೇ ನಾಡಿನ ಅಸ್ಮಿತೆಯ ಹಿತಕಾಯಲು ಟೊಂಕಕಟ್ಟಿ ನಿಲ್ಲುವುದಾಗಿ ತಿಳಿಸಿದರು.

ದಿ.ಎಸ್.ಬಂಗಾರಪ್ಪನವರು ಪ್ರಬುದ್ಧ ರಾಜಕಾರಣಿಯಾಗಿ ಖ್ಯಾತರಾಗಿದ್ದರೂ, ಆಳವಾದ ಸಾಹಿತ್ಯಾಭಿರುಚಿ ಹೊಂದಿದ್ದು, ರಾಷ್ಟ್ರಕವಿ ಕುವೆಂಪು ಅವರ ಸಾಹಿತ್ಯವನ್ನು ಅಧ್ಯಯನ ಮಾಡಿದವರಾಗಿದ್ದರು ಎಂದ ಅವರು, ಓದುಗರು ಉದ್ದೇಶಿತ ಈ ಗ್ರಂಥಾಲಯವನ್ನು ಸದುಪಯೋಗಪಡಿಸಿಕೊಂಡು ಕನ್ನಡ ಸಾಹಿತ್ಯ ಮತ್ತು ಸಂಸ್ಕೃತಿಯ ಹಿರಿಮೆಯೊಂದಿಗೆ ಸಮಾಜಮುಖಿಯಾಗಿ ನಾಡನ್ನು ಕಟ್ಟುವ ನಿಟ್ಟಿನಲ್ಲಿ ಎಲ್ಲರೂ ಒಂದಾಗಿ ಹೆಜ್ಜೆ ಇರಿಸಬೇಕಾದ ಅಗತ್ಯವಿದೆ ಎಂದವರು ನುಡಿದರು.

ಕನ್ನಡವನ್ನು ಶಾಲೆಗಳನ್ನು ಇನ್ನೂ ಚೆನ್ನಾಗಿ ಓದಿಸುವ, ಮಕ್ಕಳು ಕನ್ನಡ ಭಾಷೆಯ ಸೊಗಡು, ಶ್ರೀಮಂತಿಕೆಯನ್ನು ಅರ್ಥೈಸಿಕೊಳ್ಳಲು ಅನುಕೂಲವಾಗುವಂತೆ ಸಂಶೋಧನಾತ್ಮಕ, ಪ್ರಾಯೋಗಿಕ ಸಲಹೆಗಳೊಂದಿಗೆ ಪ್ರಸ್ತಾವನೆ ಸಲ್ಲಿಸಿದಲ್ಲಿ ಅದರ ಅನುಷ್ಠಾನಕ್ಕಾಗಿ ಕ್ರಮ ಕೈಗೊಳ್ಳಲಾಗುವುದು ಎಂದ ಅವರು, ಪೋಷಕರು ತಮ್ಮ ಮಕ್ಕಳಿಗೆ ಕನ್ನಡ ಬಾಷೆಯಲ್ಲಿಯೇ ಪ್ರಾಥಮಿಕ ಶಿಕ್ಷಣ ಕೊಡಿಸಲು ಮುಂದಾಗುವಂತೆ ಅವರು ಸಲಹೆ ನೀಡಿದರು.

ಮುಂದಿನ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಶಿವಮೊಗ್ಗದಲ್ಲಿ ನಡೆಸಲು ಅವಕಾಶ ದೊರೆತಲ್ಲಿ,ಅದರ ವ್ಯವಸ್ಥಿತ ಆಯೋಜನೆಗೆ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.


ಮಕ್ಕಳ ಆರ್ಥಿಕ ಸಂಕಷ್ಟವನ್ನು ಅರಿತು ಮಕ್ಕಳ ಶೈಕ್ಷಣಿಕ ಪ್ರಗತಿಗೆ ಅನುಕೂಲವಾಗುವಂತೆ ಎಸ್.ಎಸ್. ಎಲ್.ಸಿ. ನಂತರದ ಶಿಕ್ಷಣದೊಂದಿಗೆ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಭಾಗವಹಿಸಲು ಅನುಕೂಲವಾಗುವಂತೆ ಸರ್ಕಾರಿ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಪ್ರತಿನಿತ್ಯ ಉಚಿತವಾಗಿ ವಿಶೇಷ ತರಗತಿಗಳನ್ನು ನಡೆಸಲಾಗುತ್ತಿದೆ ಎಂದರು.

ಸರ್ಕಾರಿ ಶಾಲೆಗಳಂತೆಯೇ ರಾಜ್ಯದ ಎಲ್ಲಾ ಗ್ರಂಥಾಲಯಗಳಿಗೆ ಉಚಿತ ವಿದ್ಯುತ್ತಿತ್ತರ ಸೌಲಭ್ಯಗಳನ್ನು ಒದಗಿಸಿ, ಗ್ರಂಥಾಲಯದ ಕಾರ್ಯಾವಧಿಯನ್ನು ವಿಸ್ತರಿಸಲಾಗುವುದು. ಅಲ್ಲದೇ ಸಿಬ್ಬಂಧಿಯ ಕೊರತೆಯನ್ನು ನೀಗಿಸಲು ಗಮನಹರಿಸಲಾಗುವುದು

ಎಂದ ಅವರು ಗ್ರಂಥಾಲಯದಲ್ಲಿನ ಹಲವು ನ್ಯೂನತೆಗಳನ್ನು ಈಗಾಗಲೇ ಗುರುತಿಸಲಾಗಿದ್ದು, ಅವರ ವ್ಯವಸ್ಥಿತ ನಿರ್ವಹಣೆಗಾಗಿ ಇಲಾಖೆಗೆ ಹೊಸದಾಗಿ ನಿಯೋಜತ ಅಧಿಕಾರಿಗಳಿಗೆ ಅದರ ಹೊಣೆಗಾರಿಕೆ ವಹಿಸಲಾಗಿದೆ. ಗ್ರಂಥಾಲಯಗಳಲ್ಲಿ ಡಿಜಿಟಲ್ವ್ಯವಸ್ಥೆ ಇರುವುದರಿಂದ ಗ್ರಂಥಾಲಯಗಳು ನಿರಂತರವಾಗಿ ಸಾರ್ವಜನಿಕರಿಗೆ ಲಭ್ಯವಿರುವಂತೆ ಕ್ರಮಕೈಗೊಳ್ಳಲಾಗುವುದು. ತಜ್ಞರ ಸಲಹೆ ಪಡೆದು ಡಿಜಿಟಲ್ಲೈಬ್ರರಿ ವ್ಯವಸ್ಥೆಯನ್ನು ಇನ್ನಷ್ಟು ಅಭಿವೃದ್ಧಿಪಡಿಸಲು ಯತ್ನಿಸಲಾಗುವುದು ಎಂದರು.

ಈ ಸಂದರ್ಭದಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ಅಧ್ಯಕ್ಷ ಡಿ.ಮಂಜುನಾಥ್, ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ ಅಧ್ಯಕ್ಷ ಡಾ॥ಆರ್.ಎಂ.ಮಂಜುನಾಥಗೌಡ, ವಿಧಾನಪರಿಷತ್ಸದಸ್ಯೆ ಶ್ರೀಮತಿ ಬಲ್ಕಿಶ್ಬಾನು, ಗ್ಯಾರೆಂಟಿ ಅನುಷ್ಠಾನ ಸಮಿತಿಯ ಅಧ್ಯಕ್ಷ ಚಂದ್ರಭೂಪಾಲ ಸೇರಿದಂತೆ ಎಲ್ಲಾ ತಾಲೂಕುಗಳ ಕನ್ನಡ ಸಾಹಿತ್ಯ ಪರಿಷತ್ಸದಸ್ಯರು, ಕ.ಸಾ.ಪ. ಪದಾಧಿಕಾರಿಗಳು ಹಾಗೂ ಸಾಹಿತ್ಯಾಸಕ್ತರು ಉಪಸ್ಥಿತರಿದ್ದರು.

# ಕಸ ವಿಲೇವಾರಿ ಘಟಕ ಸ್ಥಳಾಂತರಕ್ಕೆ ಶಾಸಕ ಬಸವಂತಪ್ಪ ಸೂಚನೆ



**ದಾವಣಗೆರೆ:** ತಾಲ್ಲೂಕಿನ ಕುರ್ಕಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹಿರೇತೊಗಲೇರಿ ಗ್ರಾಮದಲ್ಲಿ ನಿರ್ಮಿಸಲು ಉದ್ದೇಶಿಸಿದ್ದ ಕಸ ವಿಲೇವಾರಿ ಘಟಕ ಬೇರೆಡೆ ಸ್ಥಳಾಂತರಕ್ಕೆ ಶಾಸಕ ಕೆ.ಎಸ್. ಬಸವಂತಪ್ಪ, ಜಿಪಂ ಸಿಇಒ ಸುರೇಶ್ ಇಟ್ನಾಳ್ಗೆ ಸೂಚನೆ ನೀಡಿದರು.

ನಗರದ ಜಿಲ್ಲಾ ಪಂಚಾಯಿತಿ ಕಚೇರಿ ಮುಂಭಾಗದಲ್ಲಿ ಸೋಮವಾರ ಕಸ ವಿಲೇವಾರಿ ಘಟಕ ಬೇರೆಡೆ ಸ್ಥಳಾಂತರ ಮಾಡಬೇಕು ಎಂದು ಒತ್ತಾಯಿಸಿ ಹಿರೇತೊಗಲೇರಿ ಗ್ರಾಮಸ್ಥರು ಧರಣಿ ಸತ್ಯಾಗ್ರಹ ನಡೆಸಿದ ವೇಳೆ ಪ್ರತಿಭಟನಾ ಸ್ಥಳಕ್ಕೆ ಭೇಟಿ ನೀಡಿ ಅವರು ಮಾತನಾಡಿದರು.

ಈ ವೇಳೆ ಗ್ರಾಮದ ಸಮೀಪ ಕಸ ವಿಲೇವಾರಿ ಘಟಕ ನಿರ್ಮಾಣ ಮಾಡುವುದರಿಂದ ಗ್ರಾಮದ ನೈರ್ಮಲ್ಯ ಹಾಳಾಗಿ ಸಾಂಕ್ರಾಮಿಕ ರೋಗಗಳು ಹರಡುವ ಸಾಧ್ಯತೆ ಹೆಚ್ಚಿರುತ್ತದೆ?. ಅದರಿಂದ ಬರುವ ದುರ್ನಾತದಿಂದ ಗ್ರಾಮದ ಜನರು ರೋಗಗಳಿಗೆ ತುತ್ತಾಗಬೇಕಾಗುತ್ತದೆ. ಇದರಿಂದ ಇಲ್ಲಿ ನಿರ್ಮಿಸಲು ಉದ್ದೇಶಿಸಿರುವ ಕಸ ವಿಲೇವಾರಿ ಘಟಕವನ್ನು ಬೇರೆಡೆ ಸ್ಥಳಾಂತರ ಮಾಡಬೇಕು ಎಂದು ಗ್ರಾಮಸ್ಥರು ಪಟ್ಟು ಹಿಡಿದರು.ಗ್ರಾಮಸ್ಥರ ಸಮಸ್ಯೆಗಳನ್ನು ಆಲಿಸಿದ ಶಾಸಕ ಕೆ.ಎಸ್.ಬಸವಂತಪ್ಪ, ಗ್ರಾಮದ ಸಮೀಪ ನಿರ್ಮಿಸಲು ಉದ್ದೇಶಿಸಿರುವ ಕಸ ವಿಲೇವಾರಿ ಘಟಕವನ್ನು ಗ್ರಾಮದ ದೂರದ ಗುಡ್ಡದಲ್ಲಿ ನಿರ್ಮಿಸುವಂತೆ ಪ್ರತಿಭಟನಾ ಸ್ಥಳದಲ್ಲಿಯೇ ಇದ್ದ ಜಿಪಂ ಸಿಇಒ ಸುರೇಶ್ ಇಟ್ನಾಳ್ಗೆ ಸೂಚನೆ ನೀಡಿದರು. ಹಿರೇತೊಗಲೇರಿ ಗ್ರಾಮದಲ್ಲಿ ಇತ್ತೀಚಿಗೆಷ್ಟೇ 2.48 ಕೋಟಿ ರೂ. ವೆಚ್ಚದಲ್ಲಿ ಕಸ ವಿಲೇವಾರಿ ಘಟಕ ನಿರ್ಮಾಣಕ್ಕೆ ಭೂಮಿಪೂಜೆ ನೆರವೇರಿಸಲಾಗಿತ್ತು.

# ಮಹಾ ಕುಂಭಮೇಳದಲ್ಲಿ ಶಾಸಕ ಬಿ.ಪಿ. ಹರೀಶ್



**ದಾವಣಗೆರೆ:** ಉತ್ತರಪ್ರದೇಶದ ಪ್ರಯಾಗರಾಜ್ ನಲ್ಲಿ 144 ವರ್ಷಕೊಮ್ಮೆ ನಡೆಯುತ್ತಿರುವ ಮಹಾ ಕುಂಭಮೇಳದಲ್ಲಿ ಹರಿಹರ ಶಾಸಕ ಬಿ.ಪಿ. ಹರೀಶ್ ಪಾಲ್ಗೊಂಡು, ತ್ರಿವೇಣಿ ಸಂಗಮದಲ್ಲಿ ಪುಣ್ಯ ಸ್ನಾನ ಮಾಡಿದರು.ನಂತರ ಸನಾತನ ಧರ್ಮವನ್ನು ಸದಾ ಕಾಯುತ್ತಿರುವ ಮಹಾ ತಪಸ್ವಿಗಳು, ಅಘೋರಿ ಬಾಬಾಗಳು ಹಾಗು ಮಹಾ ಋಷಿಗಳ ಆಶೀರ್ವಾದ ಪಡೆದುಕೊಂಡರು.

## ಅರ್ಜಿ ಆಹ್ವಾನ

**ದಾವಣಗೆರೆ:** ಪ್ರಸಕ್ತ ಸಾಲಿಗೆ ಪಶು ಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆ ವತಿಯಿಂದ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಸಾಮಾನ್ಯ ವರ್ಗದ ಗ್ರಾಮೀಣ ರೈತ ಮಹಿಳೆಯರಿಗೆ ಉಚಿತವಾಗಿ 5 ವಾರದ ನಾಟಿ ಕೋಳಿ ಮರಿಗಳನ್ನು ವಿತರಿಸಲು ಅರ್ಜಿ ಆಹ್ವಾನಿಸಲಾಗಿದೆ. ಗ್ರಾಮೀಣ ಭಾಗದ ರೈತ ಮಹಿಳೆಯರು ಇದರ ಸದುಪಯೋಗ ಪಡೆದುಕೊಳ್ಳಬಹುದು. ಅರ್ಜಿ ಸಲ್ಲಿಸಲು ಫೆಬ್ರವರಿ 24 ಕೊನೆಯ ದಿನವಾಗಿರುತ್ತದೆ ಫಲಾನುಭವಿಗಳು ತಮ್ಮ ತಾಲ್ಲೂಕಿನ ಮುಖ್ಯ ಪಶು ವೈದ್ಯಾಧಿಕಾರಿಗಳು (ಆಡಳಿತ), ಪಶು ಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆ, ಪಶು ಆಸ್ಪತ್ರೆರವರ ಕಚೇರಿಯಿಂದ ಅರ್ಜಿ ನಮೂನೆಯನ್ನು ಪಡೆದು ಭರ್ತಿ ಅಗತ್ಯ ದಾಖಲಾತಿಗಳೊಂದಿಗೆ ಕಚೇರಿಗೆ ಸಲ್ಲಿಸಬೇಕು ಎಂದು ಇಲಾಖೆಯ ಪಶು ನಿರ್ದೇಶಕರು ತಿಳಿಸಿದ್ದಾರೆ.

# ಅನಧಿಕೃತ ಬೈಕ್ ಟ್ಯಾಕ್ಸಿ ನಿಷೇಧಿಸದಿದ್ದರೆ ಚಾಲಕರ ಒಕ್ಕೂಟದಿಂದ ಪ್ರತಿಭಟನೆ




**ದಾವಣಗೆರೆ:** ರ್ಯಾಪಿಡೋ ಹೆಸರಿನ ಅನಧಿಕೃತ ಬೈಕ್ ಟ್ಯಾಕ್ಸಿ ವಿರುದ್ಧ ಜಿಲ್ಲಾಡಳಿತ ಮತ್ತು ಪೊಲೀಸ್ ಇಲಾಖೆ ಹಾಗೂ ಸಾರಿಗೆ ಇಲಾಖೆಯವರು ಕಾನೂನು ಕ್ರಮ ಕೈಗೊಳ್ಳುವಂತೆ ಮನವಿ ಮಾಡಿ 4-5 ದಿನಗಳಾದರೂ ಯಾವುದೇ ಕ್ರಮ ಕೈಗೊಂಡಿಲ್ಲ. ಮಾರ್ಚ್ ಒಂದರೊಳಗೆ ಕ್ರಮ ಕೈಗೊಳ್ಳದಿದ್ದರೆ ಕರ್ನಾಟಕ ಚಾಲಕರು ಒಕ್ಕೂಟದಿಂದ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದು ಒಕ್ಕೂಟದ ಜಿಲ್ಲಾಧ್ಯಕ್ಷ ಪಿ.ಬಿ. ಅಂಜುಕುಮಾರ್ ಎಚ್ಚರಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜಧಾನಿ ಬೆಂಗಳೂರಿನಲ್ಲಿ ಈಗಾಗಲೇ ಲಕ್ಷಾಂತರ ಆಟೋ ಮತ್ತು ಕಾರು ಚಾಲಕರ ಬದುಕನ್ನು ಹಾಳು ಮಾಡಿರುವ ರ್ಯಾಪಿಡೋ ಎಂಬ ಅನಧಿಕೃತ ಬೈಕ್ ಟ್ಯಾಕ್ಸಿ ಇದೀಗ ನಮ್ಮ ದಾವಣಗೆರೆಗೂ ಕಾಲಿಟ್ಟಿದೆ. ಜಿಲ್ಲಾಡಳಿತಕ್ಕೆ ಹಾಗೂ ಪೊಲೀಸ್ ಇಲಾಖೆಗೆ ಮನವಿ ನೀಡಿದ್ದರೂ ಸಹ ಇಲ್ಲಿಯವರೆಗೂ ರ್ಯಾಪಿಡೋ ದ್ವಿಚಕ್ರ ವಾಹನ ಬೈಕ್ ಟ್ಯಾಕ್ಸಿ ದಾವಣಗೆರೆಯಲ್ಲಿ ರಾಜಾರೋಷವಾಗಿ ಸಂಚರಿಸುತ್ತಿದೆ ಎಂದು ದೂರಿದರು.

ಕಾನೂನುಕ್ರಮ ಕೈಗೊಳ್ಳದಿದ್ದಲ್ಲಿ ಒಕ್ಕೂಟದಿಂದ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಹಾಗೂ ನಿರಂತರವಾಗಿ ಬೈಕ್ ಟ್ಯಾಕ್ಸಿ ನಿಷೇಧವಾಗುವವರೆಗೂ ಹೋರಾಟಗಳನ್ನು ಹಮ್ಮಿಕೊಳ್ಳಲಾಗುವುದು ಹಾಗೂ ಕರ್ನಾಟಕ ಚಾಲಕರ ಒಕ್ಕೂಟದ ಎಲ್ಲಾ ಸದಸ್ಯರುಗಳು ನಿರಂತರವಾಗಿ ರಾಪಿಡೋ ಬೈಕ್ ಟ್ಯಾಕ್ಸಿಗಳನ್ನು ತಮ್ಮ ತಮ್ಮ ಮೊಬೈಲ್ಗಳಿಂದ ಬುಕ್ ಮಾಡಿ ಆರ್ಟಿಓ ಇಲಾಖೆಗೆ ಹಾಗೂ ಪೊಲೀಸ್ ಇಲಾಖೆಗೆ ಮಾಹಿತಿ ನೀಡಿ ಬೈಕ್ಗಳನ್ನು ಸೀಜ್ ಮಾಡಿಸಲಾಗುವುದು ಎಂದು ಹೇಳಿದರು.

ಒಕ್ಕೂಟದ ರಾಜ್ಯ ಸಂಚಾಲಕ ಡಿ.ಆರ್. ಅರವಿಂದಾಕ್ಷ ಮಾತನಾಡಿ, ಸದರಿ ವಿಚಾರವಾಗಿ ದಾವಣಗೆರೆಯ ಆರ್ಟಿಓ ಅಧಿಕಾರಿಗಳು ರಾಪಿಡೋದವರು ಬೈಕ್ಗಳನ್ನು ವಾಣಿಜ್ಯ ಉದ್ದೇಶಕ್ಕೆ ಬಳಸುತ್ತಿರುವುದು ಗಮನಕ್ಕೆ ಬಂದರೆ ಸೂಕ್ತ ಕ್ರಮಕೈಗೊಳ್ಳಲಾಗುವುದು ಎಂದು ಹೇಳಿದ್ದು, ಈ ಕ್ಷಣಕ್ಕೂ ಕ್ಯಾಪಿಡೋ ದ್ವಿಚಕ್ರ ವಾಹನ ಬೈಕ್ ಟ್ಯಾಕ್ಸಿ ನಗರದಲ್ಲಿ ಸಂಚರಿಸುತ್ತಿವೆ. ದಯಮಾಡಿ ಈ ಬಗ್ಗೆ ಸಂಬಂಧಿಸಿದೆ ಇಲಾಖೆಗಳು ಕಾರ್ಯಾಚರಣೆ ನಡೆಸಬೇಕೆಂದು ಈ ಮೂಲಕ ಒತ್ತಾಯಿಸುತ್ತೇವೆ ಎಂದರು.ನಗರದಲ್ಲಿ ಈಗಾಗಲೇ ತನ್ನ ಕಂಪನಿ ಪ್ರಾರಂಭಿಸಲು ಟೌನರ್ ಆ?ಯಪ್ ತರಹದ ಕಂಪನಿಗಳು ಆಟೋ ಮತ್ತು ಕಾರುಗಳಿಗಾಗಿ ಈಗಾಗಲೇ ತಾಂತ್ರಿಕತೆಯನ್ನು ಸಿದ್ಧತೆ ಮಾಡಿಕೊಂಡಿದ್ದು. ಶೀಘ್ರದಲ್ಲೇ ನಗರದಲ್ಲಿ ಪ್ರಾರಂಭಿಸಲು ಸಿದ್ಧತೆ ನಡೆಸುತ್ತಿದ್ದು, ಸಾರಿಗೆ ಇಲಾಖೆ ಕಳೆದ ಒಂದೂವರೆ ವರ್ಷಗಳಿಂದ ಆಟೋ ಮತ್ತು ಕಾರು ಚಾಲಕರಿಗೆ ಆ?ಯಪ್ ಮಾಡುವುದಾಗಿ ಘೋಷಿಸಿ ಇಂದಿಗೂ ಕಾರ್ಯಗತಗೊಳಿಸಿರುವುದಿಲ್ಲ.

ಟೌನರ್ ಕಂಪನಿಯು ಸರ್ಕಾರ ಕೇಳಿದರೆ ತನ್ನ ಟೆಕ್ನಾಲಜಿಯನ್ನು ನೀಡುವುದಾಗಿ ಮೊನ್ನೆ ದಾವಣಗೆರೆಯಲ್ಲಿ ನಡೆದ ಸಭೆಯಲ್ಲಿ ಒಕ್ಕೂಟಕ್ಕೆ ತಿಳಿಸಿದ್ದು. ಸಾರಿಗೆ ಇಲಾಖೆ ಇಂತಹ ನೂತನ ಆ?ಯಪ್ಗಳ ಸಹಯೋಗದಲ್ಲಾದರೂ ರಾಜಧಾನಿ ಬೆಂಗಳೂರು ಸೇರಿದಂತೆ ಕರ್ನಾಟಕದ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲೂ ಕಾರ್ಯಗತಗೊಳಿಸಲಿ. ಇದರಿಂದ ದಿನಕ್ಕೆ ನೂರಾರು ಕೋಟಿ ಆದಾಯ ಸರ್ಕಾರಕ್ಕೆ ಬರಲಿದ್ದು, ಸರ್ಕಾರ ಈ ಬಗ್ಗೆ ಗಮನ ಹರಿಸಲಿ ಎಂದು ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ, ಒಕ್ಕೂಟದ ಸದಸ್ಯರಾದ ಟಿ.ಎಂ. ಮಂಜುನಾಥ್, ರಾಘವೇಂದ್ರ ಎಸ್. ಪಾಟೀಲ್, ಎನ್. ಗುರುರಾಜ್, ಎಸ್. ಸಂತೋಷ್, ಆರ್. ತಿಪ್ಪೇಶ್, ವಿ. ಸಿದ್ದಾರ್ಥ್, ಅಣ್ಣೇಶ್ ಉಪಸ್ಥಿತರಿದ್ದರು.

# ಛತ್ರಪತಿ ಶ್ರೀ ಶಿವಾಜಿ ಮಹಾರಾಜರ ಜಯಂತಿ

**ಶಿವಮೊಗ್ಗ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಶಿವಮೊಗ್ಗ ಇವರ ಸಂಯುಕ್ತಾಶ್ರಯದಲ್ಲಿ ಫೆ.19 ರ ಬೆಳಗ್ಗೆ 11 ಗಂಟೆಗೆ ನಗರದ ಕುವೆಂಪು ರಂಗಮಂದಿರದಲ್ಲಿ ಛತ್ರಪತಿ ಶ್ರೀ ಶಿವಾಜಿ ಮಹಾರಾಜರ ಜಯಂತಿಯನ್ನು ಏರ್ಪಡಿಸಲಾಗಿದೆ.ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖಾ ಹಾಗೂ ಶಿವಮೊಗ್ಗ ಜಿಲ್ಲಾ ಉಸ್ತುವಾರಿ ಸಚಿವ ಎಸ್. ಮಧುಬಂಗಾರಪ್ಪ ಇವರು ಕಾರ್ಯಕ್ರಮದ ಉದ್ಘಾಟನೆ ನೆರವೇರಿಸುವರು. ಶಾಸಕ ಎಸ್.ಎನ್. ಚನ್ನಬಸಪ್ಪರವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವ ತಂಗಡಗಿ ಶಿವರಾಜ್ ಸಂಗಪ್ಪರವರು ವಿಶೇಷ ಆಹ್ವಾನಿತರಾಗಿ ಉಪಸ್ಥಿತರಿರಲಿದ್ದಾರೆ. ಕಾರ್ಯಕ್ರಮದಲ್ಲಿ ಸಂಸದರು, ವಿಧಾನಸಭಾ ಮತ್ತು ವಿಧಾನ ಪರಿಷತ್ ಶಾಸಕರು, ಪಾಲಿಕೆ ಮಹಾಪೌರರು, ಜನಪ್ರತಿನಿಧಿಗಳು, ವಿವಿಧ ನಿಗಮ, ಮಂಡಳಿ, ಪ್ರಾಧಿಕಾರಗಳ ಅಧ್ಯಕ್ಷರು, ಜಿಲ್ಲೆಯ ಎಲ್ಲಾ ಗೌರವಾನ್ವಿತ ಜನಪ್ರತಿನಿಧಿಗಳು, ಸರ್ಕಾರಿ ಅಧಿಕಾರಿಗಳು ಹಾಗೂ ಸಿಬ್ಬಂದಿವರ್ಗ ಮತ್ತು ವಿವಿಧ ಸಂಘಟನೆಗಳ ಮುಖಂಡರು, ಪದಾಧಿಕಾರಿಗಳು ಹಾಗು ಸದಸ್ಯರು, ಜಿಲ್ಲಾಧಿಕಾರಿಗಳು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು, ಜಿ.ಪಂ ಸಿಇಓ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಹಾಗೂ ಮಹಾನಗರ ಪಾಲಿಕೆ ಆಯುಕ್ತರು ಮತ್ತು ಇನ್ನಿತರ ಗಣ್ಯರು, ಅಧಿಕಾರಿಗಳು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು. ಬೆಂಗಳೂರಿನ ಯುವ ವಾಗ್ಮಿ ಕು॥ ಹಾರಿಕ ಮಂಜುನಾಥ್ ಇವರಿಂದ ವಿಶೇಷ ಉಪನ್ಯಾಸ ಆಯೋಜಿಸಲಾಗಿದೆ.

## ಶ್ರೀ ಸರ್ವಜ್ಞ ಜಯಂತಿ

**ಶಿವಮೊಗ್ಗ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ, ಶಿವಮೊಗ್ಗ ಮಹಾನಗರ ಪಾಲಿಕೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಜಿಲ್ಲಾ ಕುಂಬಾರರ ಸಂಘ, ಶಿವಮೊಗ್ಗ ಇವರುಗಳ ಸಂಯುಕ್ತಾಶ್ರಯದಲ್ಲಿ ಫೆ.20 ರ ಬೆಳಗ್ಗೆ 11 ಗಂಟೆಗೆ ನಗರದ ಕುವೆಂಪು ರಂಗಮಂದಿರದಲ್ಲಿ ಶ್ರೀ ಸರ್ವಜ್ಞ ಜಯಂತಿಯನ್ನು ಏರ್ಪಡಿಸಲಾಗಿದೆ.ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖಾ ಹಾಗೂ ಶಿವಮೊಗ್ಗ ಜಿಲ್ಲಾ ಉಸ್ತುವಾರಿ ಸಚಿವ ಎಸ್. ಮಧುಬಂಗಾರಪ್ಪ ಇವರು ಕಾರ್ಯಕ್ರಮದ ಉದ್ಘಾಟನೆ ನೆರವೇರಿಸುವರು. ಶಾಸಕ ಎಸ್. ಎನ್. ಚನ್ನಬಸಪ್ಪರವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವ ತಂಗಡಗಿ ಶಿವರಾಜ್ ಸಂಗಪ್ಪರವರು ವಿಶೇಷ ಆಹ್ವಾನಿತರಾಗಿ ಉಪಸ್ಥಿತರಿರಲಿದ್ದಾರೆ.

ರಾಜ್ಯದಲ್ಲಿ ವಿದ್ಯುತ್ ಕೊರತೆ ಇಲ್ಲ

# ಕೃಷಿಗೆ 7 ತಾಸು, ಗೃಹ ಮತ್ತು ಕೈಗಾರಿಕೆಗೆ ನಿರಂತರ ವಿದ್ಯುತ್ ಪೂರೈಕೆಗೆ ಸರ್ಕಾರ ಬದ್ಧ, ಸೋಲಾರ ವಿದ್ಯುತ್ ಉತ್ಪಾದನೆಗೆ ಒತ್ತು; ಇಂಧನ ಸಚಿವ ಕೆ.ಜೆ.ಜಾರ್ಜ್

**ದಾವಣಗೆರೆ:** ಕೃಷಿಗೆ 7 ತಾಸು ತ್ರಿಫೇಜ್ ವಿದ್ಯುತ್ ಮತ್ತು ಗೃಹ ಬಳಕೆ ಹಾಗೂ ಕೈಗಾರಿಕೆಗೆ ದಿನದ 24 ಗಂಟೆಗಳೂ ವಿದ್ಯುತ್ ಪೂರೈಕೆ ಮಾಡುವುದು ಸರ್ಕಾರದ ನೀತಿಯಾಗಿದ್ದು ಇದಕ್ಕೆ ಬದ್ಧವಾಗಿ ವಿದ್ಯುತ್ ಪೂರೈಸಲಾಗುತ್ತಿದೆ ಎಂದು ಇಂಧನ ಸಚಿವರಾದ ಕೆ.ಜೆ.ಜಾರ್ಜ್ ತಿಳಿಸಿದರು.




ಅವರು ಮಂಗಳವಾರ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಇಂಧನ ಇಲಾಖೆ ಅಧಿಕಾರಿಗಳು ಹಾಗೂ ಶಾಸಕರೊಂದಿಗೆ ನಡೆಸಿದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದರು. ರಾಜ್ಯದಲ್ಲಿ ವಿದ್ಯುತ್ ಕೊರತೆ ಇಲ್ಲ, ಆದರೆ ಕೆಲವೊಂದು ತಾಂತ್ರಿಕ ಸಮಸ್ಯೆಯಿಂದ ಕೆಲವೇ ಸ್ಥಳಗಳಲ್ಲಿ ಮಾತ್ರ ನಿರ್ವಹಣೆಗಾಗಿ ಕಡಿತ ಮಾಡಲಾಗುತ್ತದೆ. ಆದರೆ ಸರ್ಕಾರದ ಬದ್ದತೆಯಂತೆ ಕೃಷಿಗೆ 7 ಗಂಟೆ ವಿದ್ಯುತ್ ಪೂರೈಕೆ ಮಾಡಲು ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ, ಆದರೆ ಲೋಡ್‌ಶೆಡ್ಡಿಂಗ್ ಜಾರಿಯಲ್ಲಿರುವುದಿಲ್ಲ ಎಂದರು.

ರಾಜ್ಯದಲ್ಲಿ ಪ್ರತಿನಿತ್ಯ 18500 ಮೆಗಾವ್ಯಾಟ್ ಬೇಡಿಕೆ ಇದ್ದು ಬೇಸಿಗೆ ಆರಂಭವಾಗಿರುವುದರಿಂದ ಸರಾಸರಿಗಿಂತ ಶೇ 10 ರಷ್ಟು ವಿದ್ಯುತ್ ಬೇಡಿಕೆ ಹೆಚ್ಚಿದೆ. ಬೇಸಿಗೆಯಲ್ಲಿ ವಿದ್ಯುತ್ ಬೇಡಿಕೆ ಹೆಚ್ಚುವುದರಿಂದ ಪಂಜಾಬ್ ಮತ್ತು ಉತ್ತರ ಪ್ರದೇಶದಲ್ಲಿ ವಿದ್ಯುತ್ ಬ್ಯಾಂಕಿಂಗ್ ಮಾಡಿಕೊಂಡು ಜೂನ್‌ನಿಂದ ಆ ರಾಜ್ಯಗಳಿಗೆ ಕರ್ನಾಟಕದಿಂದ ವಿದ್ಯುತ್ ನೀಡಿ ಬೇಸಿಗೆಯಲ್ಲಿ ಅಲ್ಲಿಂದ ಗ್ರಿಡ್ ಮೂಲಕ ವಿದ್ಯುತ್ ಪಡೆಯಲು ಉದ್ದೇಶಿಸಲಾಗಿದೆ. ಗುಣಮಟ್ಟದ ವೋಲ್ಟೇಜ್‌ಗಾಗಿ ಅಗತ್ಯವಿರುವ ಕಡೆ ವಿದ್ಯುತ್ ಉಪ ಕೇಂದ್ರಗಳನ್ನು ಸ್ಥಾಪಿಸಲಾಗುತ್ತಿದೆ ಎಂದರು.

3 ಸಾವಿರ ಮೆ.ವ್ಯಾ ವಿದ್ಯುತ್ ಉತ್ಪಾದನೆ; ಕುಸುಮ್-ಸಿ ಯೋಜನೆಯ ಮೂಲಕ ಮುಂದಿನ ಒಂದೂವರೆ ವರ್ಷದಲ್ಲಿ ಸೋಲಾರ್‌ನಿಂದ 3 ಸಾವಿರ ಮೆಗಾವ್ಯಾಟ್ ವಿದ್ಯುತ್ ಉತ್ಪಾದನೆಯ ಗುರಿ ಹೊಂದಲಾಗಿದೆ. ಈಗಾಗಲೇ ಕುಸುಮ್ ಯೋಜನೆಯಡಿ ಸಂಸ್ಥೆಗಳಿಗೆ ಕಾರ್ಯಾದೇಶ ನೀಡಿದ್ದು ಸೋಲಾರ್ ಪ್ಯಾನಲ್ ಅಳವಡಿಕೆ, ವಿದ್ಯುತ್ ಉತ್ಪಾದನೆ ಹಂತ, ಭೂಮಿ ಸಮತಟ್ಟು ಮಾಡುವ ಕೆಲಸ ಪ್ರಗತಿಯಲ್ಲಿದ್ದು ಬರುವ ಏಪ್ರಿಲ್‌ನಲ್ಲಿ 300 ಮೆಗಾವ್ಯಾಟ್ ವಿದ್ಯುತ್ ಉತ್ಪಾದನೆ ಮಾಡಿ ಗ್ರಿಡ್‌ಗೆ ಕಳುಹಿಸಲು ಕಾರ್ಯಕ್ರಮ ರೂಪಿಸಲಾಗಿದೆ ಎಂದರು.

3000 ಪವರ್ ಮ್ಯಾನ್ ನೇಮಕ; ಇಂಧನ ಇಲಾಖೆಯಿಂದ ಈಗಾಗಲೇ ಗುಣಮಟ್ಟದ ವಿದ್ಯುತ್ ಪೂರೈಕೆ ಮಾಡಲಾಗುತ್ತಿದೆ. ಇನ್ನಷ್ಟು ಗುಣಮಟ್ಟವನ್ನು ಕಾಪಾಡಿಕೊಳ್ಳುವ ಉದ್ದೇಶದಿಂದ ಇಂಧನ ಇಲಾಖೆಗೆ ಅಗತ್ಯವಿರುವ 3000 ಪವರ್ ಮ್ಯಾನ್ ಹುದ್ದೆಗಳ ಭರ್ತಿ ಪ್ರಕ್ರಿಯೆ ನಡೆಯುತ್ತಿದ್ದು 3 ಲಕ್ಷ ಅರ್ಜಿಗಳು ಸ್ವೀಕೃತವಾಗಿವೆ. ಈಗಾಗಲೇ ಅರ್ಜಿಗಳ ಪರಿಶೀಲನಾ ಹಂತ ಮುಗಿದಿದ್ದು 1 ಲಕ್ಷ ಅಭ್ಯರ್ಥಿಗಳು ಅರ್ಹತೆ ಪಡೆದಿದ್ದಾರೆ. ಇದರಲ್ಲಿ 1;5 ರನ್ವಯ ದೈಹಿಕ ಪರೀಕ್ಷೆಗೆ ಆಯ್ಕೆ ಮಾಡಿ ಅಂತಿಮವಾಗಿ ಅತ್ಯಂತ ಪಾರದರ್ಶಕವಾಗಿ ಮೀಸಲಾತಿ ಹಾಗೂ ಅಂಕಗಳ ಆಧಾರದ ಮೇಲೆ ಏಪ್ರಿಲ್ ಒಳಗಾಗಿ ನೇಮಕಾತಿ ನಡೆಯಲಿದೆ. ಆದರೆ ಯಾವುದೇ ಮಧ್ಯವರ್ತಿಗಳ ಬಳಿ ಹಣಕೊಟ್ಟು ಕಳೆದುಕೊಳ್ಳಬೇಡಿ, ಯಾರಾದರೂ ಆಮಿಷವೊಡ್ಡಿದಲ್ಲಿ ಇಲಾಖೆ ಗಮನಕ್ಕೆ ತರಬೇಕೆಂದು ತಿಳಿಸಿದರು.

ಎಸ್ಕಾಂಗಳು ನಷ್ಟದಲ್ಲಿಲ್ಲ; ಇಂಧನ ಇಲಾಖೆಯಲ್ಲಿನ ಯಾವುದೇ ಎಸ್ಕಾಂಗಳು ನಷ್ಟದಲ್ಲಿಲ್ಲ, ಆದರೆ ಸರ್ಕಾರದಿಂದ ಸಾಕಷ್ಟು ಹಣ ಬರಬೇಕಾಗಿದೆ. ಸ್ಥಳೀಯ ಸಂಸ್ಥೆಗಳು ಸೇರಿದಂತೆ ಪಂಚಾಯತ್ ರಾಜ್ ಹಾಗೂ ಗ್ರಾಮೀಣಾಭಿವೃದ್ಧಿ ಇಲಾಖೆಯಿಂದ ಕಂಪನಿಗಳಿಗೆ ಬರಬೇಕಾದ ಹಣ ಬಾಕಿ ಇದೆ. ಗ್ರಾಮ ಪಂಚಾಯಿತಿಗಳು ಸ್ವಂತವಾಗಿ ವಿದ್ಯುತ್ ಉತ್ಪಾದನೆ ಮಾಡಿಕೊಳ್ಳುವ ಯೋಜನೆ ಇದ್ದು ದಾವಣಗೆರೆ ಜಿಲ್ಲೆಯಲ್ಲಿ ಸೋಲಾರ್ ವಿದ್ಯುತ್ ಉತ್ಪಾದನೆ ಮಾಡಿಕೊಳ್ಳಲು ಉದ್ದೇಶಿಸಿ ಇದನ್ನು ಪೈಲೆಟ್ ಕಾರ್ಯಕ್ರಮವಾಗಿ ರೂಪಿಸಲಾಗುತ್ತದೆ. ಪಂಚಾಯಿತಿಗಳು ಕುಡಿಯುವ ನೀರು ಪೂರೈಕೆ, ಬೀದಿದೀಪಗಳಿಗೆ ಅಗತ್ಯವಿರುವ ವಿದ್ಯುತ್‌ನ್ನು ಉತ್ಪಾದನೆ ಮಾಡಿಕೊಂಡು ಸ್ವಾವಲಂಬಿಯಾಗಬೇಕು. ಇದಕ್ಕಾಗಿ 400 ಎಕರೆ ಜಾಗವನ್ನು ಗುರುತಿಸಿ ಸೋಲಾರ್ ಪ್ಯಾನಲ್ ಅಳವಡಿಸಿ ಗ್ರಿಡ್‌ಗೆ ವಿದ್ಯುತ್ ನೀಡಿ ಅಷ್ಟೆ ವಿದ್ಯುತ್‌ನ್ನು ವಾಪಸ್ ನೀಡಲಾಗುತ್ತದೆ. ಇದರಿಂದ ವಿದ್ಯುತ್ ಉಳಿತಾಯವಾಗಲಿದೆ ಮತ್ತು ಪಂಚಾಯಿತಿಗಳ ಮೇಲಿನ ಆರ್ಥಿಕ ಹೊರೆ ಕಡಿಮೆಯಾಗಲಿದೆ ಎಂದರು.

ವಿದ್ಯುತ್ ದರ ಪರಿಷ್ಕರಣೆ ಕೆಇಆರ್‌ಸಿಗೆ; ಎಲ್ಲಾ ಎಸ್ಕಾಂಗಳ ವಿದ್ಯುತ್ ದರ ಏರಿಕೆಯ ನಿರ್ಧಾರವನ್ನು ಕೆಇಆರ್‌ಸಿ ಮಾಡಲಿದೆ. ಸಾರ್ವಜನಿಕರಿಂದ ಅಭಿಪ್ರಾಯಗಳನ್ನು ಪಡೆಯುವ ಮೂಲಕ ದರ ಏರಿಕೆ ನಿರ್ಣಯಗಳನ್ನು ಕೆಇಆರ್‌ಸಿ ನಿರ್ಧರಿಸಲಿದೆ. ಯಾರದೂ ಕೂಡ ಹಸ್ತಕ್ಷೇಪ ಇರುವುದಿಲ್ಲ, ಕಳೆದ ವರ್ಷ ಯಾವುದೇ ವಿದ್ಯುತ್ ದರ ಏರಿಕೆ ಮಾಡಿರುವುದಿಲ್ಲ ಎಂದು ಸಚಿವರು ಸ್ಪಷ್ಟಪಡಿಸಿದರು.

ಗೃಹಜ್ಯೋತಿ; ಸರ್ಕಾರದ ಗ್ಯಾರಂಟಿ ಯೋಜನೆಗಳೊಂದಾದ ಗೃಹಜ್ಯೋತಿ ಯೋಜನೆ ಎಲ್ಲಾ ವರ್ಗದ ಜನರಿಗೂ ಅನ್ವಯಿಸಲಿದ್ದು 200 ಯುನಿಟ್ ವರೆಗೆ ವಿದ್ಯುತ್ ಬಳಕೆಗೆ ಶೂನ್ಯ ಬಿಲ್ ನೀಡಲಾಗುತ್ತದೆ. ಇದನ್ನು ಅವರು ವರ್ಷದಲ್ಲಿ ಉಪಯೋಗಿಸುವ ಯುನಿಟ್‌ಗಳನ್ನಾಧರಿಸಿ ಹೆಚ್ಚುವರಿಯಾಗಿ ಶೇ 10 ರಷ್ಟು ಸೇರಿಸಿ ಬಳಕೆಯ ಯುನಿಟ್ ನಿಗದಿಯಾಗುತ್ತದೆ. ಆದರೆ 200 ಯುನಿಟ್ ನಂತರ 1 ಯುನಿಟ್ ಹೆಚ್ಚಾದರೂ ವಿದ್ಯುತ್ ದರದಂತೆ ಬಿಲ್ ಪಾವತಿಸಬೇಕಾಗುತ್ತದೆ ಎಂದರು.

ದಾವಣಗೆರೆ ಜಿಲ್ಲೆಯಲ್ಲಿ ಗೃಹಜ್ಯೋತಿ ಯೋಜನೆಯಡಿ ನೊಂದಣಿಯಾದ 433897 ಆರ್.ಆರ್.ಸಂಖ್ಯೆಗಳಿದ್ದು ವಿದ್ಯುತ್ ಸಂಪರ್ಕ ಪಡೆದ ಸ್ಥಾವರಗಳಲ್ಲಿ ಶೇ 88.93 ರಷ್ಟು ಗೃಹಜ್ಯೋತಿಯಲ್ಲಿವೆ. ಈ ಸ್ಥಾವರಗಳಿಗೆ 2023 ರ ಆಗಸ್ಟ್‌ನಿಂದ 2024 ರ ಡಿಸೆಂಬರ್ ಅಂತ್ಯದವರೆಗೆ 309 ಕೋಟಿಯಷ್ಟು ಹಣವನ್ನು ಗ್ರಾಹಕರಿಗೆ ಸಬ್ಸಿಡಿ ನೀಡಿದ್ದು ಸರ್ಕಾರ ಇದನ್ನು ಭರಿಸಿದೆ ಎಂದರು.

ರೈತರಿಗೆ 7 ಗಂಟೆ ವಿದ್ಯುತ್; ರೈತರ ಕೃಷಿ ಪಂಪ್ ಸೆಟ್‌ಗಳಿಗೆ ದಿನದಲ್ಲಿ 7 ಗಂಟೆಗಳ ಕಾಲ ತ್ರಿಫೇಸ್ ವಿದ್ಯುತ್ ಸರಬರಾಜು ಮಾಡಲಾಗುತ್ತದೆ. ದಾವಣಗೆರೆ ಜಿಲ್ಲೆ ಆನಗೋಡು, ಮಾಯಕೊಂಡ ಭಾಗದಲ್ಲಿ 3 ಅಥವಾ 4 ಗಂಟೆಗಳ ಕಾಲ ಮಾತ್ರ ಕೃಷಿ ಪಂಪ್‌ಸೆಟ್‌ಗಳಿಗೆ ವಿದ್ಯುತ್ ನೀಡಲಾಗುತ್ತದೆ ಎಂದು ಶಾಸಕರಾದ ಕೆ.ಎಸ್.ಬಸವಂತಪ್ಪ ಪ್ರಸ್ತಾಪಿಸಿದಾಗ ಎಲ್ಲಾ ರೈತರಿಗೂ ದಿನದಲ್ಲಿ 7 ಗಂಟೆಗಳ ಕಾಲ ವಿದ್ಯುತ್ ನೀಡುವುದು ಸರ್ಕಾರದ ನೀತಿಯಾಗಿದ್ದು ಅದರಂತೆ ಬೆಸ್ಕಾಂ ಕ್ರಮ ಕೈಗೊಳ್ಳಬೇಕು. ಓವರ್ ಲೋಡಿಂಗ್ ಆದರೆ ಅದನ್ನು ಬೇರೆಡೆ ವರ್ಗಾಯಿಸಿ 7 ಗಂಟೆ ಕೃಷಿ ಪಂಪ್‌ಸೆಟ್‌ಗೆ ವಿದ್ಯುತ್ ನೀಡಲೇಬೇಕೆಂದು ಸೂಚನೆ ನೀಡಿದರು.

ಪಂಪ್‌ಸೆಟ್‌ಗಳಿಗೆ ಶೀಘ್ರ ಸಂಪರ್ಕಕ್ಕೆ ಕ್ರಮ; ರೈತರ ಕೃಷಿ ಪಂಪ್‌ಸೆಟ್‌ಗಳಿಗೆ 2004 ರಿಂದಲೂ ಅಕ್ರಮ-ಸಕ್ರಮ ಎಂಬ ಕಾರ್ಯಕ್ರಮದಡಿ ಅನಧಿಕೃತ ಸಂಪರ್ಕವನ್ನು ಸಕ್ರಮ ಮಾಡುತ್ತಾ ಬರಲಾಗಿದೆ. ಇದರಡಿ ಮೂಲಭೂತ ಸೌಕರ್ಯದಡಿ ಮಾರ್ಗ, ಟಿಸಿ ಅಳವಡಿಕೆ ಮಾಡಲಾಗಿದೆ. ಬಾಕಿ ಇರುವ 4946 ಪಂಪ್‌ಸೆಟ್‌ಗಳಿಗೆ ಮೂಲಭೂತ ಸೌಕರ್ಯ ಕಲ್ಪಿಸಲು ಟೆಂಡರ್ ಕರೆಯಲಾಗಿದೆ. ರೈತರು ಸ್ವಂತವಾಗಿ ಮೂಲಭೂತ ಸೌಕರ್ಯ ಮಾಡಿಕೊಂಡು ಕೃಷಿ ಪಂಪ್‌ಸೆಟ್‌ಗಳಿಗೆ ತಕ್ಷಣವೇ ಸಂಪರ್ಕ ಪಡೆಯಲು ಹಾಗೂ ಇಲಾಖೆಯಿಂದ ಮೂಲಭೂತ ಸೌಕರ್ಯಕ್ಕಾಗಿ ಸರತಿಯಲ್ಲಿ ಕಾಯುವ ಎರಡು ಅವಕಾಶಗಳನ್ನು ಮಾಡಿಕೊಟ್ಟಲ್ಲಿ ಸ್ವಂತವಾಗಿ ಮಾಡಿಕೊಳ್ಳುವ ರೈತರಿಗೆ ಅನುಕೂಲವಾಗುತ್ತದೆ ಎಂಬ ಚಿಂತನೆ ಮಾಡಲಾಗಿದೆ ಎಂದರು.

ಕಸುಮ್-ಬಿ; ಕುಸುಮ್ ಬಿ ಯೋಜನೆಯಡಿ ರೈತರ ಪಂಪ್‌ಸೆಟ್‌ಗಳಿಗೆ ಸೋಲಾರ್ ವಿದ್ಯುತ್ ಸಂಪರ್ಕ ಕಲ್ಪಿಸುವುದಾಗಿದೆ. 7.5 ಹೆಚ್‌ಪಿ ವರೆಗೆ ಅವಕಾಶ ಇದ್ದು ರೈತರು ಶೇ 20 ರಷ್ಟು ವಂತಿಗೆಯನ್ನು ಕಟ್ಟಬೇಕು. ಕೇಂದ್ರ ಶೇ 30 ಹಾಗೂ ರಾಜ್ಯ ಶೇ 50 ರಷ್ಟು ಸಹಾಯಧನ ಘಟಕ ವೆಚ್ಚಕ್ಕೆ ನೀಡಲಿದೆ. ಮತ್ತು ಕುಸುಮ್-ಸಿ ಯೋಜನೆಯಡಿ ಖಾಸಗಿ ಹಾಗೂ ಸರ್ಕಾರಿ ಜಮೀನುಗಳಲ್ಲಿ ಸೋಲಾರ್ ವಿದ್ಯುತ್ ಉತ್ಪಾದನೆ ಮಾಡುವ ಮೂಲಕ ಗ್ರಿಡ್‌ಗೆ ಪೂರೈಕೆ ಮಾಡುವುದಾಗಿದೆ. ರೈತರು ಸೋಲಾರ್ ಪಂಪ್‌ಸೆಟ್ ಅಳವಡಿಕೆಗೆ ಮುಂದೆ ಬಂದಲ್ಲಿ ಹೆಚ್ಚು ಅನುಕೂಲವಾಗಲಿದೆ ಎಂದರು.

ಸಭೆಯಲ್ಲಿ ಶಾಸಕರಾದ ಕೆ.ಎಸ್.ಬಸವಂತಪ್ಪ, ಲತಾ ಮಲ್ಲಿಕಾರ್ಜುನ್, ಬಿ.ದೇವೇಂದ್ರಪ್ಪ, ಕೆಪಿಟಿಸಿಎಲ್ ಎಂಡಿ ಪಂಕಜ್‌ಕುಮಾರ್ ಪಾಂಡೆ, ಬೆಸ್ಕಾಂ ಎಂಡಿ ಡಾ; ಶಿವಶಂಕರ್ ಎನ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ.ಇಟ್ನಾಳ್, ಅಪರ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್, ಬೆಸ್ಕಾಂ ಅಧೀಕ್ಷಕ ಇಂಜಿನಿಯರ್ ಪಾಟೀಲ್ ಹಾಗೂ ಬೆಸ್ಕಾಂ, ಕೆಪಿಟಿಸಿಎಲ್ ಅಧಿಕಾರಿಗಳು ಉಪಸ್ಥಿತರಿದ್ದರು.

# ಅಸಮರ್ಪಕ ವಿದ್ಯುತ್ ಸರಬರಾಜು ಖಂಡಿಸಿ ಫೆ.20 ರೈತರಿಂದ ಧರಣಿ




**ದಾವಣಗೆರೆ:** ಆನಗೋಡು ಬೆಸ್ಕಾಂ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಹಳ್ಳಿಗಳ ರೈತರ ಪಂಪ್ ಸೆಟ್‌ಗಳಿಗೆ ಸಮರ್ಪಕ ವಿದ್ಯುತ್ ಸರಬರಾಜಿಲ್ಲ. ಜೊತೆಗೆ ಪ್ರತಿ ದಿನ ಐದಾರು ಬಾರಿ ಲೋಡ್ ಶೆಡ್ಡಿಂಗ್ ಮಾಡುತ್ತಾರೆ. ಹಾಗೂ ಕಳಪೆ ಗುಣಮಟ್ಟದ ವಿದ್ಯುತ್ ಸರಬರಾಜಿನಿಂದ ರೈತರ ಪಂಪ್ ಸೆಟ್ ಗಳು ಸುಟ್ಟುಹೋಗಿದೆ ಎಂದು ಕರ್ನಾಟಕ ರಾಜ್ಯ ರೈತ ಸಂಘ, ಹಸಿರು ಸೇನೆಯ ದಾವಣಗೆರೆ ತಾಲ್ಲೂಕು ಅಧ್ಯಕ್ಷ ಮಂಡ್ಲೂರು ವಿಶ್ವನಾಥ್ ದೂರಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ವಿದ್ಯುತ್‌ನ ಏರುಪೇರಿನಿಂದ ಅನೇಕ ಪಂಪ್‌ಸೆಟ್ ಗಳು ಸುಟ್ಟು ಹೋಗಿದ್ದು, ಆನೇಕ ರೈತರು ನಷ್ಟವನ್ನು ಅನುಭವಿಸುವ ಪರಿಸ್ಥಿತಿ ಬಂದಿರುತ್ತದೆ. ಇದಕ್ಕೆ ಆನಗೋಡು ಬೆಸ್ಕಾಂ ಇಲಾಖೆಯವರೇ ಹೊಣೆಗಾರರಾಗಿದ್ದು, ಈ ನಷ್ಟವನ್ನು ಆನಗೋಡು ಬೆಸ್ಕಾಂ ವಿಭಾಗದ ಅಧಿಕಾರಿಗಳೇ ಭರಿಸಿಕೊಡಬೇಕು ಎಂದು ಆಗ್ರಹಿಸಿದರು.

ಪ್ರತಿ ಹಳ್ಳಿಗಳಲ್ಲಿ ನಿರಂತರ ಜ್ಯೋತಿ ಕರೆಂಟ್ ಎಂದು ಮಾಡಿದ್ದು, ಈ ಯೋಜನೆಯಡಿ ವಿದ್ಯುತ್ ಸಮರ್ಪಕವಾಗಿ ನೀಡುತ್ತಿಲ್ಲ. ಲೋಡ್ ಶೆಡ್ಡಿಂಗ್ ನೆಪದಲ್ಲಿ ಕರೆಂಟ್ ತೆಗೆದು ಮೋಸ ಮಾಡಲಾಗುತ್ತಿದೆ. ಇದೆಲ್ಲವನ್ನೂ ಖಂಡಿಸಿ ಫೆ.20 ರ ಬೆಳಿಗ್ಗೆ 10 ಗಂಟೆಗೆ ಆನಗೋಡು ಬೆಸ್ಕಾಂ ಕಚೇರಿ ಎದುರು ರೈತರುಗಳು ಧರಣಿ ಸತ್ಯಾಗ್ರಹವನ್ನು ನಡೆಸಲಿದ್ದಾರೆ. ಈ ಸಂದರ್ಭದಲ್ಲಿ ಏನಾದರೂ ಅಹಿತಕರ ಘಟನೆಗಳು ಸಂಭವಿಸಿದರೆ ಸಂಬಂಧಪಟ್ಟ ಅಧಿಕಾರಿಗಳೇ ನೇರ ಹೊಣೆಗಾರರು ಎಂದು ಎಚ್ಚರಿಸಿದರು.

ಕೋಡಿಹಳ್ಳಿ, ಅಗಸನಕಟ್ಟೆ ಹಾಗೂ ಸಿದ್ದನೂರಿನ ಎಲ್ಲಾ ರೈತ ಮುಖಂಡರು ಸುತ್ತ-ಮುತ್ತಲಿನ ಎಲ್ಲಾ ಗ್ರಾಮಸ್ಥರು ಈ ಧರಣಿಯಲ್ಲಿ ಭಾಗವಹಿಸಲಿದ್ದಾರೆ ಎಂದು ಮಂಡ್ಲೂರು ವಿಶ್ವನಾಥ್ ಮಾಹಿತಿ ನೀಡಿದರು.

ಸುದ್ದಿಗೋಷ್ಠಿಯಲ್ಲಿ, ರೈತ ಮುಖಂಡರಾದ ಎಸ್.ಜಿ. ರಮೇಶ್, ಎನ್.ವಿ. ನಾಗರಾಜಪ್ಪ, ಎಸ್.ಎಂ. ನಾಗರಾಜ್, ಎಂ. ನವೀನ್, ಪಿ.ಜಿ. ನಾಗರಾಜ್, ಶಿವಕುಮಾರ್ ಹಾಗೂ ಸಿದ್ಧಲಿಂಗಪ್ಪ ಉಪಸ್ಥಿತರಿದ್ದರು

# ಕಂಪನಿಗಳು ಅವಕಾಶ ನೀಡುವುದೇ ಹೊರತು ಮರು ಅವಕಾಶ ನೀಡದು: ಡಾ. ಎಂ.ಬಿ. ಸಂಜಯ್ ಪಾಂಡೆ

**ದಾವಣಗೆರೆ:** ಆರ್ಟಿಫಿಶಿಯಲ್ ಇಂಟಲಿಜೆನ್ಸ್ ಅಂಡ್ ಮಿಷನ್ ಲರ್ನಿಂಗ್ ಹಾಗೂ ಜಿಎಂಐಟಿಯ ತರಬೇತಿ ಮತ್ತು ಉದ್ಯೋಗ ವಿಭಾಗದ ಸಹಯೋಗದಲ್ಲಿ ಅನುಭವಿ ಉದ್ಯಮ ವೃತ್ತಿಪರರು ನಡೆಸುವ ಕ್ಲೌಡ್ ಕಂಪ್ಯೂಟಿಂಗ್ ಮತ್ತು ಆರ್ಟಿಫಿಶಿಯಲ್ ಇಂಟಲಿಜೆನ್ಸ್ ಅಂಡ್ ಮಿಷನ್ ಲರ್ನಿಂಗ್ ಕುರಿತಾದ 10 ದಿನಗಳ ತರಬೇತಿ ಕಾರ್ಯಕ್ರಮಕ್ಕೆ ಫೆಬ್ರವರಿ 18ರಂದು ಜಿಎಂಐಟಿ ಕಾಲೇಜಿನ ಪ್ರಾಂಶುಪಾಲ ಡಾ. ಎಂ.ಬಿ. ಸಂಜಯ್ ಪಾಂಡೆ ಚಾಲನೆ ನೀಡಿದರು.




ಈ ವೇಳೆ ವಿದ್ಯಾರ್ಥಿಗಳ ಉದ್ದೇಶಿಸಿ ಮಾತನಾಡಿ, ಕಾಲೇಜಿಗೆ ನೀವು ನಿಯಮಿತವಾಗಿ ಹಾಜರಾಗದೆ ಇದ್ದರೂ ನಿಮಗೆ ಅಂತಿಮ ಪರೀಕ್ಷೆ ಬರೆಯುವ ಅವಕಾಶ ನೀಡಲಾಗುತ್ತದೆ. ಅಲ್ಲದೇ ಉತ್ತೀರ್ಣರಾಗದೆ ಇದ್ದರೂ ಮತ್ತೊಮ್ಮೆ ಪರೀಕ್ಷೆ ಬರೆಯುವ ಅವಕಾಶ ನೀಡಲಾಗುತ್ತದೆ. ಆದರೆ ಉದ್ಯೋಗಿವಕಾಶ ನೀಡಬೇಕೆಂದು ಬಯಸುವ ಕಂಪನಿಗಳು ಈ ರೀತಿ ಮರು ಅವಕಾಶ ನೀಡಲ್ಲ. ನಿಮ್ಮಲ್ಲಿರುವ ಜ್ಞಾನದ ಜೊತೆಗೆ ಕೌಶಲ್ಯ ಮತ್ತು ಉದ್ಯೋಗಕ್ಕೆ ಎಷ್ಟು ಸಮರ್ಥರು ಎಂಬುದನ್ನು ಸಂದರ್ಶನ ವೇಳೆ ನಿರ್ಧರಿಸುತ್ತಾರೆ ಎಂದು ವಿದ್ಯಾರ್ಥಿಗಳಿಗೆ ಮನವರಿಕೆ ಮಾಡಿದರು.

ಹಿಂದಿನ ದಿನಗಳಲ್ಲಿ ಭಾರತದಲ್ಲಿ ಶಿಕ್ಷಣ ವ್ಯವಸ್ಥೆ ವಿದ್ಯಾರ್ಥಿಗಳಿಗೆ ಉದ್ಯೋಗಕ್ಕೆ ಬೇಕಾದ ಸಾಮರ್ಥ್ಯ ನೀಡಲು ತರಬೇತಿ ಅವಕಾಶ ಇಲ್ಲದಂತಾಗಿತ್ತು. ಆದರೆ ಇತ್ತೀಚಿನ ದಿನಗಳಲ್ಲಿ ಪದವಿ ಮುಗಿದ ನಂತರ ಹೆಚ್ಚುವರಿ ತರಬೇತಿಗೆ ಒತ್ತಡ ಹೆಚ್ಚಾಗಿರುವ ಕಾರಣ ಜ್ಞಾನದ ಜೊತೆಗೆ ಉದ್ಯೋಗ ಕ್ಷೇತ್ರದಲ್ಲಿ ಅಗತ್ಯವಿರುವ ಪ್ರಾಯೋಗಿಕ ಕೌಶಲ್ಯಗಳ ನೀಡಲು ತರಬೇತಿ ಅವಕಾಶ ನಿಮಗೆ ಸಿಗುತ್ತಿದೆ. ಅದನ್ನು ಸದುಪಯೋಗಪಡೆದುಕೊಂಡು ಉದ್ಯೋಗಸ್ಥರಾಗಿ ಎಂದು ಕರೆ ನೀಡಿ-ದರು.

ವಿದ್ಯಾಭ್ಯಾಸಕ್ಕಾಗಿ ನಿಮ್ಮ ಪೋಷಕರ ಅಥವಾ ನಿಮ್ಮದೇ ಹಣ ವ್ಯಯಿಸುತ್ತಿರಾ ಅದು, ನೀವು ಜ್ಞಾನವಂತರು, ಉದ್ಯೋಗವಕಾಶ ಪಡೆಯದೇ ಇದ್ದರೆ ವ್ಯರ್ಥವಾದಂತೆ ಎಂದು ತಿಳುವಳಿಕೆ ಮೂಡಿಸಿದರು.

ಜಿಎಂಐಟಿಯ ತರಬೇತಿ ಮತ್ತು ಉದ್ಯೋಗ ವಿಭಾಗದ ನಿರ್ದೇಶಕ ಟಿ.ಆರ್. ತೇಜಸ್ವಿ ಕಟ್ಟಿಮನಿ ಮಾತನಾಡಿ, ಫೆಬ್ರವರಿ 18 ರಿಂದ 22 ರವರೆಗೆ ನಡೆಯಲಿರುವ ಈ ತರಬೇತಿಯಿಂದ ಕಲಿಕೆ ಮತ್ತು ನೈಜ-ಪ್ರಪಂಚದ ಒಳನೋಟಗಳನ್ನು ಒದಗಿಸಲು ವಿನ್ಯಾಸಗೊಳಿಸಲಾಗಿದೆ. ಅಗತ್ಯ ತಾಂತ್ರಿಕ ಕೌಶಲ್ಯಗಳೊಂದಿಗೆ ಸಜ್ಜುಗೊಳಿಸುತ್ತದೆ. ಈ ತರಬೇತಿಯ ಸದುಪಯೋಗಪಡಿಸಿಕೊಂಡರೆ ಉದ್ಯೋಗವಕಾಶಕ್ಕೆ ಅರ್ಹತೆ ಪಡೆಯಬಹುದು. ನಿಮ್ಮಲ್ಲಿ ಜ್ಞಾನದ ಜೊತೆಗೆ ಕೌಶಲ್ಯಗಳು ಇದ್ದಾಗ ಸುಲಭವಾಗಿ ಉದ್ಯೋಗವಕಾಶ ಕಂಡುಕೊಳ್ಳಬಹುದು ಎಂದು ವಿದ್ಯಾರ್ಥಿಗಳಿಗೆ ತಿಳಿಸಿದರು.

ವ್ಯಾಪಕ ಅನುಭವ ಹೊಂದಿರುವ ಉದ್ಯಮ ತಜ್ಞರುಗಳಾದ ಸುಶಾಂತ್ ವಿ. ಪೈ ಮತ್ತು ಪ್ರೇರಿತ್ ಚಂದ್ರ ಅವರುಗಳು ಕ್ಲೌಡ್ ಫಂಡಮೆಂಟಲ್ಸ್, ಆರ್ಟಿಫಿಶಿಯಲ್ ಇಂಟಲಿಜೆನ್ಸ್ ಅಂಡ್ ಮಿಷನ್ ಲರ್ನಿಂಗ್ ಪರಿಕಲ್ಪನೆಗಳು, ಹ್ಯಾಂಡ್ಸ್-ಆನ್ ಯೋಜನೆಗಳ ಬಗ್ಗೆ ವಿವರಣೆ ಸಹಿತ ತರಬೇತಿ ನೀಡಿದರು

ಕರ್ನಾಟಕ ಸರ್ಕಾರ

**ಪಟ್ಟಣ ಪಂಚಾಯಿತಿ ಕಾರ್ಯಾಲಯ ಹೊಳೆಹೊನ್ನೂರು**

ಭದ್ರಾವತಿ ತಾಲ್ಲೂಕು ಶಿವಮೊಗ್ಗ ಜಿಲ್ಲೆ

ಕ್ರಸಂ: ಪಪಂಹೊ/ಕಿಅ/CR/58/2024-25 ದಿ: 15.02.2025

**-: ಅಲ್ಪಾವದಿ ಟೆಂಡರ್ ಪ್ರಕಟಣೆ :-**

ಈ ಮೂಲಕ ಸಾರ್ವಜನಿಕರಿಗೆ ತಿಳಿಯಪಡಿಸುವುದೇನೆಂದರೆ, ಹೊಳೆಹೊನ್ನೂರು ಪಟ್ಟಣ ಪಂಚಾಯಿತಿಯ 2023-24 ನೇ ಸಾಲಿನ ಸ್ವಚ್ಛ ಭಾರತ್ ಮಿಷನ್ (SBM)2.0 ಅನುದಾನದಡಿ ಅನುಮೋದನೆಯಾದ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಟೆಂಡರ್‌ನ್ನು (KW2)ರ ಪ್ರಕಾರ KPPP PORTAL ಮುಖಾಂತರ ಟೆಂಡರ್ ನ್ನು ಆಹ್ವಾನಿಸಲಾಗಿದ್ದು, ಅರ್ಹ ಗುತ್ತಿಗೆದಾರರು ಸದರಿ ಟೆಂಡರ್ ನಲ್ಲಿ ಭಾಗವಹಿಸಬಹುದಾಗಿದ್ದು, ಕರ್ನಾಟಕ ಪಬ್ಲಿಕ್ ಪ್ರೊಕ್ಯೂರ್ ಮೆಂಟ್ ಪೋರ್ಟಲ್ ಮುಖಾಂತರ ಟೆಂಡರನ್ನು ಸಲ್ಲಿಸಬಹುದಾಗಿದ್ದು, ವಿವರ ಈ ಕೆಳಕಂಡಂತಿರುತ್ತದೆ.

**2023-24 ನೇ ಸಾಲಿನ ಸ್ವಚ್ಛ ಭಾರತ್ ಮಿಷನ್ (SBM)2.0 ಅನುದಾನ**

**ಕ್ರ.ಸಂ. 1. ಕಾಮಗಾರಿಯ ಹೆಸರು:** ಹೊಳೆಹೊನ್ನೂರು ಪಟ್ಟಣ ಪಂಚಾಯತಿ ವ್ಯಾಪ್ತಿಯ ಎಸ್ ಡಬ್ಲ್ಯೂ ಎಮ್ ಘಟಕದಲ್ಲಿ 3TDP ಮೆಟೀರಿಯಲ್ ರಿಕವರಿ ಫೆಸಿಲಿಟಿ ಕಟ್ಟಡ ನಿರ್ಮಾಣ ಕಾಮಗಾರಿ DMA/2024-25/BD/WORK_INDENT 19267/CALL-2ಕಾಮಗಾರಿ **ಪೂರ್ಣಗೊಳಿಸಲು ಕಾಲಾವಧಿ:** 06 ತಿಂಗಳು **ಟೆಂಡರ್ ಮೊತ್ತ (ಲಕ್ಷಗಳಲ್ಲಿ) ಜಿ.ಎಸ್.ಟಿ. ಹೊರತುಪಡಿಸಿ:** 30,00,000-00 **ಇ.ಎಂ.ಡಿ. ಮೊತ್ತ:** 60,000-00

ಆಸಕ್ತಿಯುಳ್ಳ ಅರ್ಹ ಗುತ್ತಿಗೆದಾರರು ಕರ್ನಾಟಕ ಪಬ್ಲಿಕ್ ಪ್ರಕ್ಯೂರ್‌ಮೆಂಟ್ ಪೋರ್ಟಲ್ ಮುಖಾಂತರ ಟೆಂಡರ್ ನಲ್ಲಿ ಬಾಗವಹಿಸಬಹುದಾಗಿದ್ದು, ಗುತ್ತಿಗೆದಾರರು ಟೆಂಡರ್ ದಾಸ್ತಾವೇಜುಗಳನ್ನು ಇ-ಪ್ರಕ್ಯೂರ್‌ಮೆಂಟ್ ವೇದಿಕೆ www.kppp.karnataka.gov.in ರಲ್ಲಿ ಸಲ್ಲಿಸುವುದು. ಟೆಂಡರ್ ಸಂಸ್ಕರಣ ಶುಲ್ಕವನ್ನು ಆನ್ ಲೈನ್ ಮೂಲಕವೇ ಪಾವತಿಸತಕ್ಕದ್ದು.

**1**. ಟೆಂಡರ್ ದಾಸ್ತಾವೇಜುಗಳ ಬಗ್ಗೆ ಮಾಹಿತಿ ಪಡೆಯಲು ಅಂತಿಮ ದಿನಾಂಕ ಮತ್ತು ಸಮಯ:17-02-2025 ರ ಸಂಜೆ 5.00 ರ ಒಳಗೆ **2.** ಟೆಂಡರ್ ಸಲ್ಲಿಸಲು ಕೊನೆಯ ದಿನಾಂಕ ಮತ್ತು ಸಮಯ: 24-02-2025 ರ ಸಂಜೆ 05.30 ಗಂಟೆಗೆ **3**. ಟೆಂಡರ್ ಗಳ ತಾಂತ್ರಿಕ ತೆರೆಯುವ ದಿನಾಂಕ ಮತ್ತು ಸಮಯ: 28-02-2025 ರ ಸಂಜೆ 04.30 ಗಂಟೆಗೆ ಅಥವಾ ಮುಂದೆ ಸೂಚಿಸಿದ ದಿನದಂದು **4**. ಟೆಂಡರ್ ಗಳ ಆರ್ಥಿಕ ಬಿಡ್ ತೆರೆಯುವ ದಿನಾಂಕ ಮತ್ತು ಸಮಯ: 01-03-2025 ರ ಬೆಳಗ್ಗೆ 11.00 ಗಂಟೆಗೆ ಅಥವಾ ಮುಂದೆ ಸೂಚಿಸಿದ ದಿನದಂದು

ಟೆಂಡರ್ ಷರತ್ತುಗಳು ಮತ್ತು ಹೆಚ್ಚಿನ ಮಾಹಿತಿಗಳನ್ನು ಮುಖ್ಯಾಧಿಕಾರಿಗಳು, ಪಟ್ಟಣ ಪಂಚಾಯಿತಿ, ಹೊಳೆಹೊನ್ನೂರು ಇವರ ಕಛೇರಿಯಿಂದ ಕೆಲಸದ ವೇಳೆಯಲ್ಲಿ ಪಡೆಯಬಹುದಾಗಿದೆ.ಟೆಂಡರ್ ನ ವೇಳಾಪಟ್ಟಿ ಮತ್ತು ಷರತ್ತುಗಳ ಬದಲಾವಣೆ ಇದ್ದಲ್ಲಿ ಕರ್ನಾಟಕ ಪಬ್ಲಿಕ್ ಪ್ರಕ್ಯೂರ್‌ಮೆಂಟ್ ಪೋರ್ಟಲ್ ನಲ್ಲಿ ಮಾತ್ರ ಅಧಿಸೂಚಿಸಲಾಗುವುದು, ಪತ್ರಿಕಾ ಪ್ರಕಟಣೆ ಹೊರಡಿಸಲಾಗುವುದಿಲ್ಲ.

**ಸಹಿ/- ಆಡಳಿತಾಧಿಕಾರಿಗಳು**
**ಪಟ್ಟಣ ಪಂಚಾಯಿತಿ ಹೊಳೆಹೊನ್ನೂರು**
**ಹಾಗೂ ತಹಶಿಲ್ದಾರರು, ಭದ್ರಾವತಿ**
**ತಾಲ್ಲೂಕು ಭದ್ರಾವತಿ**

**ಸಹಿ/-**
**ಮುಖ್ಯಾಧಿಕಾರಿ**
**ಪಟ್ಟಣ ಪಂಚಾಯಿತಿ**
**ಹೊಳೆಹೊನ್ನೂರು**

ವಾ.ಸಾ.ಸಂ.ಇ/ಕೆಎಸ್‌ಎಂಸಿಎ/ಶಿ/24-25/127/02/1680

ನಗರ ಪ್ರದೇಶಗಳಲ್ಲಿ ಆಸ್ತಿಗಳ ಭೂ ದಾಖಲೆಗಳ ರಚನೆ ನಕ್ಷಾ ಯೋಜನೆ ಕಾರ್ಯಕ್ರಮದಲ್ಲಿ ಕೋಟಾ ಶ್ರೀನಿವಾಸ್ ಪೂಜಾರಿ

# ನಕ್ಷಾ ಯೋಜನೆ ಮೂಲಕ ನಗರ ಸರ್ವೆ ಕಾರ್ಯ ಸರಳ

**ಚಿಕ್ಕಮಗಳೂರು: ಫೆ. 18:** ಡಿಜಿಟಲೀಕೃತ ಭೂ ನಕ್ಷೆಯಿಂದ ಭೂ ಅಕ್ರಮವನ್ನು ತಡೆಗಟ್ಟುವುದರ ಜೊತೆಗೆ, ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯ ಎಲ್ಲಾ ಆಸ್ತಿಗಳನ್ನು ಆಧುನಿಕ ತಂತ್ರಜ್ಞಾನ ಬಳಸಿ ಸರ್ವೆ ನಡೆಸಿ ಸ್ಪಷ್ಟವಾದ ಮಾಲೀಕತ್ವದ ಮಾಹಿತಿ ಪಡೆಯಲು ಸಹಕಾರಿಯಾಗಲಿದೆ ಎಂದು ಉಡುಪಿ-ಚಿಕ್ಕಮಗಳೂರು ಲೋಕಸಭಾ ಕ್ಷೇತ್ರದ ಸಂಸದ ಕೋಟಾ ಶ್ರೀನಿವಾಸ್ ಪೂಜಾರಿ ಹೇಳಿದರು.




ಕಂದಾಯ ಇಲಾಖೆ ಭೂಮಾಪನ ಕಂದಾಯ ವ್ಯವಸ್ಥೆ ಮತ್ತು ಭೂ ದಾಖಲೆಗಳ ಇಲಾಖೆ ಹಾಗೂ ಪೌರಾಡಳಿತ ಇಲಾಖೆ ವತಿಯಿಂದ ಇಂದು ನಗರ ಸಭೆ ಕಾರ್ಯಾಲಯದಲ್ಲಿ ಆಯೋಜಿಸಿದ್ದ ನಗರ ಪ್ರದೇಶಗಳಲ್ಲಿ ಆಸ್ತಿಗಳ ಭೂ ದಾಖಲೆಗಳ ರಚನೆ ನಕ್ಷಾ ಯೋಜನೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ನಕ್ಷಾ ಯೋಜನೆ ಅಡಿಯಲ್ಲಿ ಪ್ರಾಯೋಗಿಕವಾಗಿ ರಾಜ್ಯದ 10 ನಗರಗಳನ್ನು ಆಯ್ಕೆ ಮಾಡಲಾಗಿದೆ. ಇದರಲ್ಲಿ ಜಿಲ್ಲೆಯ ನಗರ ಸಭೆಯನ್ನು ಆಯ್ಕೆ ಮಾಡಲಾಗಿದ್ದು ಯೋಜನೆಯೂ ನಗರ ಸಭೆ ವ್ಯಾಪ್ತಿಯ ಎಲ್ಲಾ ಸ್ಥಳೀಯ ಸಂಸ್ಥೆಗಳ ಸರಳ ಸರ್ವೆ ಕಾರ್ಯಗಳ ಜೊತೆಗೆ ನಾಗರೀಕರು ಸಾಲ ಮತ್ತು ಇತರ ಪ್ರಯೋಜನಗಳನ್ನು ಬ್ಯಾಂಕ್ ಮತ್ತು ಇನ್ನಿತರ ಹಣಕಾಸು ಸಂಸ್ಥೆಗಳಿಂದ ಪಡೆಯುವ ಸುಲಭ ಪ್ರಕ್ರಿಯೆಗೆ ಸಹಕಾರಿಯಾಗಲಿದೆ ಎಂದರು. ನಕ್ಷಾ ಯೋಜನೆಯನ್ನು ಭಾರತ ಸರ್ಕಾರದ ಭೂಸಂಪನ್ಮೂಲ ಇಲಾಖೆಯು ಆರಂಭಿಸಿದ್ದು, ಕೇಂದ್ರ ಬಜೆಟ್‌ನಲ್ಲಿ ನಗರ ಪ್ರದೇಶಗಳಲ್ಲಿ ಭೂ-ಸಂಬಂಧಿತ ಸುಧಾರಣೆಗಳು ಮತ್ತು ಕ್ರಮಗಳನ್ನು ಸೂಕ್ತ ಹಣಕಾಸಿನ ಬೆಂಬಲದ ಮೂಲಕ ಮುಂದಿನ 3 ವರ್ಷಗಳಲ್ಲಿ ಪೂರ್ಣಗೊಳಿಸಲು ಪ್ರೋತ್ಸಾಹಿಸಲಾಗುವುದು. ಪ್ರಾಯೋಗಿಕವಾಗಿ ದೇಶದ 152 ನಗರ/ಪಟ್ಟಣಗಳಲ್ಲಿ ಈ ಯೋಜನೆ ಅನುಷ್ಠಾನಗೊಳಿಸಲು ಡಿಜಿಟಲ್ ಇಂಡಿಯಾ ಲ್ಯಾಂಡ್ ರೆಕಾರ್ಡ್ಸ್ ಮಾಡ್ರನೈಸೇಷನ್ ಪ್ರೋಗ್ರಾಮ್ ಅಡಿಯಲ್ಲಿ ಯೋಜನೆಯನ್ನು ಅನುಷ್ಠಾನಗೊಳಿಸಲು ಆಯ್ಕೆಮಾಡಲಾಗಿದೆ ಎಂದ ಅವರು ಯೋಜನೆ ಮೂಲಕ ನಾಗರೀಕರು ಕೆರೆ ಪ್ರದೇಶ, ಸರ್ಕಾರಿ ಆಸ್ತಿ, ಅಥವಾ ಅರಣ್ಯ ಪ್ರದೇಶದಲ್ಲಿ ಅಕ್ರಮವಾಗಿ ಆಸ್ತಿಗಳನ್ನು ಸೃಜಿಸಿ ಮಾರಾಟ ಮಾಡುವ ಪ್ರಕ್ರಿಯೆಯಂತಹ ಅಕ್ರಮಗಳಿಗೆ ಒಳಗಾಗುವುದು ತಪ್ಪುತ್ತದೆ ಎಂದು ಹೇಳಿದರು.

ಶಾಸಕ ಹೆಚ್.ಡಿ ತಮ್ಮಯ್ಯ ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಮಾತನಾಡಿ ನಕ್ಷಾ ಯೋಜನೆಯನ್ನು ನಗರ ಸ್ಥಳೀಯ ಸಂಸ್ಥೆಗಳ ಭೂ ಸಮೀಕ್ಷೆ ಸರಳೀಕರಣದ ಉದ್ದೇಶದಿಂದ ಜಾರಿ ಮಾಡಲಾಗಿದೆ. ಇದರಿಂದ ಆಸ್ತಿಗಳ ವಿಭಜನೆ, ಅನುವಂಶಿಕ ಬದಲಾವಣೆ, ಉತ್ತರಾಧಿತ್ವ ಪ್ರಕ್ರಿಯೆಗಳು ಸುಲಭವಾಗುತ್ತದೆ. ಕಾರ್ಡ್ ಮೂಲಕ ಲಭ್ಯವಾಗುವ ಗಣಕೀಕೃತ ಭೌಗೋಳಿಕ ಉಲ್ಲೇಖಿತ ನಕ್ಷೆಗಳು ನಾಗರೀಕರಿಗೆ ತಮ್ಮ ಆಸ್ತಿಗಳ ವಿಭಜನೆ ಪ್ರಕ್ರಿಯೆಯನ್ನು ಸ್ವಯಂ ನಿರ್ವಹಿಸಲು ಸಾಧ್ಯವಾಗುತ್ತದೆ. ಪ್ರತಿಯೊಬ್ಬ ನಾಗರೀಕರಿಗೆ ಮೊದಲ ಬಾರಿಗೆ ತನ್ನ ಆಸ್ತಿಯ ಮಾಲೀಕತ್ವ ಪ್ರಮಾಣಪತ್ರವನ್ನು ಸರ್ಕಾರದಿಂದ ನೀಡಲಾಗುತ್ತದೆ, ಇದು ಪ್ರತಿ ಆಸ್ತಿಯ ಪಾರದರ್ಶಕ ಮತ್ತು ಸ್ಪಷ್ಟವಾದ ಮಾಲೀಕತ್ವದ ಪ್ರಮಾಣಪತ್ರವಾಗಿದೆ. ಆಸ್ತಿಯ ನಕ್ಷೆ, ಮಾಲೀಕತ್ವದ ವಿವರಗಳು ಮತ್ತು ಅದರ ಹಕ್ಕುಗಳು ಮತ್ತು ಆಸ್ತಿಯ ಮೇಲಿನ ವಿವರಗಳನ್ನು ಕಾರ್ಡ್ ಒಳಗೊಂಡಿರುತ್ತದೆ. ಆದ್ದರಿಂದ ನಾಗರೀಕರು ಕಂದಾಯ ಇಲಾಖೆಗೆ ಮನವಿ ಸಲ್ಲಿಸಿ ತಮ್ಮ ಆಸ್ತಿಯ ಗಡಿಗಳನ್ನು ಸ್ಥಳದಲ್ಲಿರುವಂತೆ ಗುರುತಿಸಿಕೊಳ್ಳಬಹುದಾಗಿದೆ ಎಂದ ಅವರು ನಗರ ಪ್ರದೇಶದಲ್ಲಿನ ಭೂ ವಿವಾದಗಳ ಪರಿಹಾರಕ್ಕೆ ನಕ್ಷಾ ಯೋಜನೆಯೂ ಉತ್ತಮ ಮಾರ್ಗವಾಗಿದೆ ಎಂದು ಹೇಳಿದರು.

ಜಿಲ್ಲಾಧಿಕಾರಿ ಮೀನಾ ನಾಗರಾಜ್ ಸಿ.ಎನ್ ಪ್ರಾಸ್ತಾವಿಕವಾಗಿ ಮಾತನಾಡಿ ನಗರ ಪ್ರದೇಶದ ಪ್ರತಿಯೊಂದು ಆಸ್ತಿಯ ಹಕ್ಕು ಅಥವಾ ಮಾಲೀಕತ್ವದ ದಾಖಲೆಯನ್ನು ಕಾನೂನಿನ ಅಡಿಯಲಿ ಆಸ್ತಿ ಮಾಲೀಕತ್ವದ ಪುರಾವೆ ಅಥವಾ ಮಾಲೀಕತ್ವದ ಪ್ರಮಾಣಪತ್ರವನ್ನು ಸಿದ್ಧಪಡಿಸುವುದೇ ರಾಷ್ಟ್ರೀಯ ಜಿಯೋಸೋಷಿಯಲ್ ಆಧಾರಿತ ನಗರ ವಸತಿಗಳ ಭೂ ಸಮೀಕ್ಷೆ (ನಕ್ಷಾ) ಯೋಜನೆಯಾಗಿದೆ ಎಂದರು.

ಈ ಯೋಜನೆಯನ್ನು ಭಾರತ ಸರ್ಕಾರದ ಭೂಸಂಪನ್ಮೂಲ ಇಲಾಖೆಯು ಆರಂಭಿಸಿದ್ದು, ಕರ್ನಾಟಕ ಸರ್ಕಾರದ ಕಂದಾಯ ಇಲಾಖೆಯ ಭೂ ಮಾಪನ ಕಂದಾಯ ವ್ಯವಸ್ಥೆ ಮತ್ತು ಭೂದಾಖಲೆಗಳ ಇಲಾಖೆ ಹಾಗೂ ಪೌರಾಡಳಿತ ಇಲಾಖೆ ಮತ್ತು ಸರ್ವೆ ಆಫ್ ಇಂಡಿಯಾ ಇವರ ಸಹಭಾಗಿತ್ವದಿಂದ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ ಎಂದರು.

ನಗರದಲ್ಲಿ ರಸ್ತೆ, ಒಳಚರಂಡಿ, ನೀರು ಪೂರೈಕೆ ಯೋಜನೆಗಳನ್ನು ರೂಪಿಸಿ ವ್ಯವಸ್ಥಿತವಾಗಿ ಕಾರ್ಯ ನಿರ್ವಹಿಸಲು ಯೋಜನೆಯು ಅತ್ಯಂತ ಸಹಾಯಕಾರಿಯಾಗಿದೆ. ಜಿಲ್ಲೆಯೂ ಭೌಗೋಳಿಕವಾಗಿ ಉತ್ತಮ ಪರಿಸರವನ್ನು ಹೊಂದಿದ್ದು ಯೋಜನೆ ಮೂಲಕ ಹಲವಾರು ಅಭಿವೃದ್ಧಿ ಕಾರ್ಯಗಳನ್ನು ನಿರ್ವಹಿಸಿ ಅಭಿವೃದ್ಧಿ ಹೊಂದಿದ ನಗರ ನಿರ್ಮಾಣ ಮಾಡಬಹುದು. ಎಂದ ಅವರು ಯೋಜನೆಯಲ್ಲಿ ಡ್ರೋನ್ ಫೆಯಿಂಗ್ ನಿಂದ ಜಿಯೋ ರೆಫರೆನ್ಸೈಡ್ ನಕ್ಷೆಯನ್ನು ತಯಾರಿಸಲಾಗುವುದು. ವಿಚಾರಣಾಧಿಕಾರಿಗಳು ನೀಡಿದ ದಾಖಲೆಗಳ ಮೇಲೆ ಕರಡು ಆಸ್ತಿ ಪತ್ರ ನೀಡಲಾಗುವುದು. ತಕರಾರು ಸಲ್ಲಿಸಿದಲ್ಲಿ, ವಿಚಾರಣೆ ಮಾಡಿ ಅಂತಿಮ ಆಸ್ತಿ ಪತ್ರವನ್ನು ನೀಡಲಾಗುತ್ತದೆ. ಸಾರ್ವಜನಿಕರ ಸಹಕಾರವಿದಲ್ಲಿ ಸರ್ವೆ ಕಾರ್ಯವನ್ನು ಶೀಘ್ರವಾಗಿ ಪೂರ್ಣಗೊಳಿಸಿ ಭೂ ಸಂಬಂಧ ಸಮಸ್ಯೆಗಳನ್ನು ಬಗೆಹರಿಸಬಹುದು ಎಂದು ತಿಳಿಸಿದರು.

ನಗರಸಭೆ ಅಧ್ಯಕ್ಷೆ ಸುಜಾತ ಶಿವಕುಮರ್ ಮಾತನಾಡಿ ನಗರ ಸಭೆ ವ್ಯಾಪ್ತಿಯ ಎಲ್ಲಾ ಖಾಸಗಿ ಆಸ್ತಿಗಳು, ಖಾಲಿ ನಿವೇಶನಗಳು, ಸಾರ್ವಜನಿಕ ಆಸ್ತಿಗಳು, ನಗರ ಸಭೆ ಆಸ್ತಿಗಳು, ದೇವಸ್ಥಾನ, ಬಸ್ ನಿಲ್ದಾಣ, ರಸ್ತೆ, ಹಳ್ಳ, ಕೆರೆ, ಕಟ್ಟೆ, ಸ್ಮಶಾನ ಮತ್ತು ಇತರೆ ಸರ್ಕಾರಿ ಆಸ್ತಿಗಳನ್ನು ಒಳಗೊಂಡಂತೆ ನೀರಿನ ಪೈಪ್ ಲೈನ್, ವಿದ್ಯುತ್ ಲೈನ್, ಯು.ಜಿ.ಡಿ ಲೈನ್, ಟೆಲೆಪೋನ್ ಲೈನ್ ಮತ್ತು ಸ್ಥಳದಲ್ಲಿ ದೊರೆಯುವ ಇತರೆ ಆಸ್ತಿಗಳನ್ನು ಅಳತೆಗೆ ಒಳಪಡಿಸಿ ನಿಖರವಾದ ಸರ್ವೆ ಕಾರ್ಯ ನಡೆಸಲು ಸಹಕರಿಯಾಗಲಿದ್ದು ತೆರಿಗೆ ವಸೂಲಿಗೂ ಅನುಕೂಲವಾಗಲಿದೆ ಎಂದರು.

ಕಾರ್ಯಕ್ರಮದಲ್ಲಿ ನಗರ ಸಭೆ ಆಯುಕ್ತ ಬಿ.ಸಿ ಬಸವರಾಜ್, ಜಿಲ್ಲಾ ನಗರಾಭಿವೃದ್ಧಿ ಕೋಶ ಯೋಜನ ನಿರ್ದೇಶಕಿ ನಾಗರತ್ನ, ಭೂ ದಾಖಲೆಗಳ ಉಪನಿರ್ದೇಶಕ ಲೋಹಿತ್.ಟಿ.ಕೆ. ಸಹಾಯಕ ನಿರ್ದೇಶಕ ರುದ್ರೇಶ್, ಸರ್ವೆ ಸೂಪರ್‌ವೈಸರ್ ಪ್ರಕಾಶ್ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿ ಸಿಬ್ಬಂಧಿಗಳು ಉಪಸ್ಥಿತರಿದ್ದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**